ಸಂಪುಟ: 05 ಸಂಚಿಕೆ: 146 ಪುಟಗಳು: 08 ಶುಕ್ರವಾರ 08 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
RNI No. KARKAN/2021/80833
ಸಂಪಾದಕರು: ಟಿ. ಹೊಂಬೇಗೌಡ 9448225696 +91 8035841833 ₹5

# ಉದಯ ವಾಹಿನಿ

UV
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕ್ರಿಕೆಟ್ ಮ್ಯಾಚ್ ಕ್ರೆಡಿಟ್ ತಗೋಳಕೆ ಮುಂದಾಗೋರು ಇವರು

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಮೆಟ್ರೋ ಹಳದಿ ಮಾರ್ಗ 100 ಕಿ.ಮೀ ಆಗಿದೆ. ಮೋದಿ ಪ್ರಧಾನಿ ಆಗುವ ಮುನ್ನ 7 ಕಿ.ಮೀ ಇತ್ತು. ಕಳೆದ ಎರಡೂವರೆ ವರ್ಷದಲ್ಲಿ ಈ ಸರ್ಕಾರ ಹಳದಿ ಮೆಟ್ರೋ ಮಾರ್ಗದ ಬಗ್ಗೆ ತಲೆ ಕೆಡಿಸಿಕೊಂಡಿರಲಿಲ್ಲ ಎಂದು ಹೇಳಿದರು. 2018ರಲ್ಲಿ ಹಳದಿ ಮಾರ್ಗದ ಯೋಜನೆ ಪ್ರಾರಂಭವಾಯಿತು. ಭೂ ಸ್ವಾಧೀನ ಪ್ರಕ್ರಿಯೆಯಲ್ಲಿ ತೊಂದರೆ ಆಯ್ತು. ಆದ್ರೆ ಆಗ ಕಾಂಗ್ರೆಸ್ ರಾಜ್ಯ ಸರ್ಕಾರ ಸಹಾಯಕ್ಕೆ ಬರಲಿಲ್ಲ. ಕಾಂಗ್ರೆಸ್ ಸರ್ಕಾರ ಬಂದ ಮೇಲೆಬಿಎಂಆರ ಸಿಎಲ್ ಗೆ ಪೂರ್ಣಾವಧಿಯ ವ್ಯವಸ್ಥಾಪಕ ನಿರ್ದೇಶಕರನ್ನು ನೇಮಕ ಮಾಡಿರಲಿಲ್ಲ. ವೀಸಾ ಸಮಸ್ಯೆ ಆಯ್ತು ಇವ್ರು ಯಾರೂ ಒಂದು ದಿನವೂ ಮಾತನಾಡಿಲ್ಲ. ಕ್ರಿಕೆಟ್ ಮ್ಯಾಚ್ ಕ್ರೆಡಿಟ್ ತಗೋಳೋಕೆ ಮುಂದಾಗೋರು ಈಗ ಮೆಟ್ರೋ ಕ್ರೆಡಿಟ್ ತಗೋಳೋಕೆ ಬರದೇ ಇರ್ತಾರ? ಎಂದು ಟೀಕಾ ಪ್ರಹಾರ ನಡೆಸಿದರು. ಮೋದಿಯವರು ತಕ್ಷಣಕ್ಕೆ ಸಮಯ ಕೊಟ್ರು.. ಆಗಸ್ಟ್ 10 ಕ್ಕೆ ಬರ್ತೀನಿ ಅಂತಾ ಹೇಳಿದ್ದಾರೆ. ಜನ ಸಾಮಾನ್ಯರಿಗೆ ಬೇಕಾಗಿರೋದು ಮೆಟ್ರೋ.. ಇವರಿಗಲ್ಲ ಎಂದು ಸಂಸದ ತೇಜಸ್ವಿ ಸೂರ್ಯ ತಿರುಗೇಟು ನೀಡಿದರು.

## ಸರ್ವಜ್ಞ ನಗರ ಕ್ಷೇತ್ರದಲ್ಲಿ ಕೈಗೆ ಹೆಚ್ಚು ಮತ ಬಂದಿದೆ ಪರಿಶೀಲನೆಯಾಗಲಿ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತಗಳವು ಆರೋಪವನ್ನ ಸಂಸದ ಪಿಸಿ ಮೋಹನ್ ತಳ್ಳಿಹಾಕಿದ್ದಾರೆ. ಮಹಾದೇವಪುರ ಕ್ಷೇತ್ರದ ಮೇಲೆ ಅನುಮಾನ ವ್ಯಕ್ತಪಡಿಸಿರುವ ರಾಹುಲ್ ಗಾಂಧಿ, ಸರ್ವಜ್ಞ ನಗರ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಹೆಚ್ಚು ಮತ ಬಂದಿದೆ, ಅಲ್ಲೂ ಪರಿಶೀಲನೆ ಮಾಡಲಿ ಅಂತಾ ಪಿಸಿ ಮೋಹನ್ ತಿರುಗೇಟು ನೀಡಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ಪಾರ್ಲಿಮೆಂಟ್‌ನಲ್ಲಿ ಮತದಾರರ ಪರಿಷ್ಕರಣೆ ಆಗಬಾರದು ಅಂತಾರೆ. ಇಲ್ಲಿ ಅಕ್ರಮ ಮತಗಳಿದೆ ಎಂದು ಹೇಳುತ್ತಿದ್ದಾರೆ. ಇದು ಯಾವ ರೀತಿಯ ದ್ವಂದ್ವ ರೀತಿ ಅಂದರು. 2009ರಿಂದ ನಿರಂತರವಾಗಿ ಮತಗಳು ಏರಿಕೆಯಾಗುತ್ತಿದೆ. ಕಳೆದ ಬಾರಿಗಿಂತ ಈ ಬಾರಿ ಹೆಚ್ಚು ಮತ ಇದೆ. ಮಹಾದೇವಪುರ ಕ್ಷೇತ್ರದ ಮೇಲೆ ರಾಹುಲ್ ಗಾಂಧಿ ಅವರಿಗೆ ಅನುಮಾನ ಬಂದಿದೆ. ಸರ್ವಜ್ಞ ನಗರದಲ್ಲಿ ಕಾಂಗ್ರೆಸ್‌ಗೆ ಹೆಚ್ಚು ಮತ ಬಂದಿದೆ. ಅಲ್ಲಿ ಮತಗಳ ಪ್ರಮಾಣವೂ ಹೆಚ್ಚಾಗಿದೆ. ಇಲ್ಲಿ ಮತ ಯಾಕೆ ಹೆಚ್ಚಾಗಿದೆ ಎನ್ನುವ ಅನುಮಾನಕ್ಕೆ ಅಲ್ಲೂ ಪರಿಶೀಲನೆ ಮಾಡಲಿ ಅಂತಾ ಆಗ್ರಹಿಸಿದರು.

## ಮಂಗಳೂರು ಸ್ಫೋಟ ಪ್ರಕರಣ: ಎನ್‌ಐಎ, ಇ.ಡಿ ಭಿನ್ನ ಮಾಹಿತಿ

• ಉದಯವಾಹಿನಿ, ಬೆಂಗಳೂರು

ಕುಕ್ಕರ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆಯು (ಎನ್‌ಐಎ), 'ಕದ್ರಿ ಮಂಜುನಾಥ ದೇವಾಲಯ ಸ್ಫೋಟಕ್ಕೆ ಸಂಚು ರೂಪಿಸಲಾಗಿತ್ತು' ಎಂದು ಆರೋಪ ಪಟ್ಟಿಯಲ್ಲಿ ಉಲ್ಲೇಖಿಸಿತ್ತು. ಆದರೆ, ಜಾರಿ ನಿರ್ದೇಶನಾಲಯವು (ಇ.ಡಿ), 'ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಾಲಯ ಸ್ಫೋಟಕ್ಕೆ ಸಂಚು ರೂಪಿಸಲಾಗಿತ್ತು' ಎಂದಿದೆ. ಎರಡೂ ತನಿಖಾ ಸಂಸ್ಥೆಗಳ ವಿವರಗಳಲ್ಲಿನ ವ್ಯತ್ಯಾಸ ಚರ್ಚೆಗೆ ಕಾರಣವಾಗಿದೆ. 2022ರ ನವೆಂಬರ್‌ನಲ್ಲಿ ಮಂಗಳೂರಿನ ಆಟೋ ಒಂದರಲ್ಲಿ ಸ್ಫೋಟ ಸಂಭವಿಸಿತ್ತು. ಕುಕ್ಕರ್ ಬಾಂಬ್‌ನಿಂದ ಸ್ಫೋಟ ಸಂಭವಿಸಿದೆ ಎಂಬುದು ತನಿಖೆಯಿಂದ ಗೊತ್ತಾಗಿತ್ತು. ಎನ್‌ಐಎ ತನಿಖೆ ಕೈಗೆತ್ತಿಕೊಂಡಿತ್ತುಎಂದು ಆಗ್ರಹಿಸಿದರು. 2023ರ ಡಿಸೆಂಬರ್‌ನಲ್ಲಿ ಎನ್‌ಐಎ ಆರೋಪ ಪಟ್ಟಿ ಸಲ್ಲಿಸಿತ್ತು. 'ಮಂಗಳೂರಿನ ಕದ್ರಿಯ ಮಂಜುನಾಥಸ್ವಾಮಿ ದೇವಾಲಯವನ್ನು ಸ್ಫೋಟಿಸಲು ಸಂಚು ರೂಪಿಸಲಾಗಿತ್ತು.

## ಅನ್ಯ ಉದ್ದೇಶಕ್ಕೆ ಪರಿಶಿಷ್ಟರ ಹಣ ಆ 21ಕ್ಕೆ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾದ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡುತ್ತಿರುವುದನ್ನು ಖಂಡಿಸಿ, ಕರ್ನಾಟಕ ದಲಿತ ಸಂಘರ್ಷ ಸಮಿತಿ ಇದೇ 21ರಂದು ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ಹಮ್ಮಿಕೊಂಡಿದೆ.ಗುರುವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿಯ ರಾಜ್ಯ ಸಂಚಾಲಕ ಹೆಣ್ಣೂರು ಶ್ರೀನಿವಾಸ್, 'ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ 2013 (ಎಸ್‌ಸಿಎಸ್‌ಪಿ ಟಿಎಸ್‌ಪಿ) ಕಾಯ್ದೆಯನ್ನು ಪರಿಶಿಷ್ಟರ ಕಲ್ಯಾಣಕ್ಕೆ ಜಾರಿ ಮಾಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಇದು ಸಹಕಾರಿಯಾಗಿದೆ. ಈ ಕಾಯ್ದೆಯ ಸೆಕ್ಷನ್ 7ಸಿ ಅನ್ನು ಕೂಡಲೇ ರದ್ದುಗೊಳಿಸುವ ಮೂಲಕ, ಪರಿಶಿಷ್ಟರ ಕಲ್ಯಾಣಕ್ಕೆ ಮೀಸಲಾದ ಹಣವು ವಿವಿಧ ಇಲಾಖೆಗಳ ಮೂಲಕ ಅನ್ಯ ಯೋಜನೆಗಳಿಗೆ ಬಳಕೆಯಾಗುವುದನ್ನು ತಡೆಯಬೇಕು' ಎಂದು ಆಗ್ರಹಿಸಿದರು.

# ನಾವು ಮಣಿಯಲ್ಲ ರಾಜಿ ಇಲ್ಲ

## ಟ್ರಂಪ್ ಸುಂಕ ಹೇರಿಕೆಗೆ ಮೋದಿ ತಿರುಗೇಟು








1 ಅಮೆರಿಕಾದ ಸುಂಕ ಹೆಚ್ಚಳಕ್ಕೆ ಮೋದಿಯಿಂದ ಖಡಕ್ ಪ್ರತಿಕ್ರಿಯೆ

2 ಭಾರತದ ಹಿತಾಸಕ್ತಿ ರಕ್ಷಣೆಗಾಗಿ ಭಾರಿ ಸುಂಕ ತೆರಲು ನಾನು ಸಿದ್ಧ

3 ಭಾರತದ ರೈತರು, ಮೀನುಗಾರರು, ಹೈನುಗಾರರ ಹಿತಾಸಕ್ತಿ ರಕ್ಷಣೆಯಲ್ಲಿ ರಾಜಿ ಇಲ್ಲ

**ಎಲ್ಲದಕ್ಕೂ ನಾವು ರೆಡಿ**

• ಉದಯವಾಹಿನಿ, ದೆಹಲಿ

ಭಾರೀ ಬೆಲೆ ತೆರಬೇಕಾದರೂ ಸಹ, ಭಾರತ ತನ್ನ ಹಿತಾಸಕ್ತಿಗಳಿಗೆ ಮೊದಲ ಆದ್ಯತೆ ನೀಡುತ್ತದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ರಷ್ಯಾದ ತೈಲ ಖರೀದಿಯನ್ನು ಮುಂದುವರೆಸಿದ್ದಕ್ಕಾಗಿ ಭಾರತದ ಮೇಲೆ ಶೇ.50 ರಷ್ಟು ಆಮದು ಸುಂಕ ವಿಧಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ನೇರ ಪ್ರತ್ಯುತ್ತರವನ್ನು ಪ್ರಧಾನಿ ಮೋದಿ ಈ ಮೂಲಕ ನೀಡಿದ್ದಾರೆ. ಕೃಷಿ ವಿಜ್ಞಾನಿ ದಿವಂಗತ ಎಂ.ಎಸ್. ಸ್ವಾಮಿನಾಥನ್ ಶತಮಾನೋತ್ಸವದ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ದೇಶದ ರೈತರ ಬೆಂಬಲಕ್ಕೆ ನಿಲ್ಲುವುದನ್ನು ಮುಂದುವರಿಸುವುದಾಗಿ ಹೇಳಿದರು. ಅಮೆರಿಕದ ಅತ್ಯಂತ ಹೆಚ್ಚಿನ ಸುಂಕಗಳ ಹೊರೆಯನ್ನು ಹೊರುವುದಾಗಿಯೂ ಪ್ರಕಟಿಸಿದ್ದರು. ನಮಗೆ, ನಮ್ಮ ರೈತರ ಹಿತಾಸಕ್ತಿ ನಮ್ಮ ಪ್ರಮುಖ ಆದ್ಯತೆಯಾಗಿದೆ ಎಂದು ಪ್ರಧಾನಿ ಹೇಳಿದರು.ಭಾರತ ಎಂದಿಗೂ ರೈತರು, ಮೀನುಗಾರರು ಮತ್ತು ಹೈನುಗಾರರ ಹಿತಾಸಕ್ತಿಗಳ ಜೊತೆ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಘೋಷಿಸಿದ್ದರು. ನಾನು ವೈಯಕ್ತಿಕವಾಗಿ ಇದಕ್ಕೆ ಭಾರಿ ಬೆಲೆ ತೆರಬೇಕಾಗುತ್ತದೆ ಎಂದು ನನಗೆ ತಿಳಿದಿದೆ. ನಾನು ಅದಕ್ಕೆ ಸಿದ್ಧನಿದ್ದೇನೆ. ಭಾರತ ಅದಕ್ಕೆ ಸಿದ್ಧವಾಗಿದೆ ಎಂದು ಪ್ರಧಾನಿ ಮೋದಿ ಸಮಾವೇಶದಲ್ಲಿ ಹೇಳಿದರು.

ಡೋನಾಲ್ಡ್ ಟ್ರಂಪ್ ಭಾರತೀಯ ಸರಕುಗಳ ಮೇಲೆ ಹೆಚ್ಚುವರಿಯಾಗಿ ಶೇ.25ರಷ್ಟು ಸುಂಕ ವಿಧಿಸಿದ ನಂತರ ಪ್ರಧಾನಿ ಮೋದಿಯಿಂದ ಪ್ರತಿಭಟನೆಯ ಈ ಹೇಳಿಕೆ ಬಂದಿದೆ. ಅಮೆರಿಕಾದ ಅಧ್ಯಕ್ಷ ಟ್ರಂಪ್, ಭಾರತದ ಆಮದು ಉತ್ಪನ್ನಗಳ ಮೇಲೆ ಶೇ.50 ರಷ್ಟು ಸುಂಕ ವಿಧಿಸುವುದಾಗಿ ಘೋಷಿಸಿದ್ದಾರೆ. ಬೇರೆ ಯಾವುದೇ ದೇಶಗಳ ಮೇಲೂ ಅಮೆರಿಕಾ ಶೇ.50 ರಷ್ಟು ಆಮದು ಸುಂಕ ವಿಧಿಸಿಲ್ಲ. ರಷ್ಯಾ, ಚೀನಾ, ಬ್ರೆಜಿಲ್ ಸೇರಿದಂತೆ ಬ್ರಿಕ್ಸ್ ರಾಷ್ಟ್ರಗಳ ಮೇಲೆ ಇಷ್ಟೊಂದು ದೊಡ್ಡ ಪ್ರಮಾಣದ ಆಮದು ಸುಂಕ ವಿಧಿಸಿಲ್ಲ. ಆದರೇ, ಭಾರತದ ಮೇಲೆ ಮಾತ್ರವೇ ಶೇ.50 ರಷ್ಟು ಆಮದು ಸುಂಕ ವಿಧಿಸಿದ್ದಾರೆ. ರಷ್ಯಾದಿಂದ ಭಾರತದಂತೆ ಚೀನಾವೂ ಕೂಡ ಕಚ್ಚಾತೈಲ ಖರೀದಿಸುತ್ತಿದೆ. ಚೀನಾದ ಮೇಲೆ ಶೇ.30 ರಷ್ಟು ಸುಂಕ ವಿಧಿಸಿದ್ದಾರೆ. ಟರ್ಕಿ ಮೇಲೆ ಶೇ.15 ರಷ್ಟು ಸುಂಕವನ್ನು ಡೋನಾಲ್ಡ್ ಟ್ರಂಪ್ ವಿಧಿಸಿದ್ದಾರೆ. ಟರ್ಕಿ, ಚೀನಾ ಕೂಡ ರಷ್ಯಾದಿಂದ ಕಚ್ಚಾ ತೈಲ ಖರೀದಿಸುತ್ತಿವೆ. ಆದರೇ, ಟರ್ಕಿ, ಚೀನಾಗಿಂತ ಭಾರತದ ಮೇಲೆ ಬರೋಬ್ಬರಿ ಶೇ.50 ರಷ್ಟು ಆಮದು ಸುಂಕವನ್ನು ಡೋನಾಲ್ಡ್ ಟ್ರಂಪ್ ವಿಧಿಸಿದ್ದಾರೆ. ಈ ಹಿಂದೆ ಆಗಸ್ಟ್ 1 ರಂದು ಶೇ.25ರಷ್ಟು ಆಮದು ಸುಂಕವನ್ನು ಭಾರತದ ಉತ್ಪನ್ನಗಳ ಮೇಲೆ ಟ್ರಂಪ್ ವಿಧಿಸಿದ್ದರು. ಇದು ಆಗಸ್ಟ್ 7 ರಿಂದ ಜಾರಿಗೆ ಬರಲಿದೆ ಎಂದು ಅಮೆರಿಕಾ ಹೇಳಿತ್ತು. ಬಳಿಕ ಈಗ ಮತ್ತೆ ಹೊಸದಾಗಿ ಶೇ.25ರಷ್ಟು ಹೆಚ್ಚುವರಿ ಸುಂಕವನ್ನು ಭಾರತದ ಮೇಲೆ ವಿಧಿಸುವುದಾಗಿ ಅಮೆರಿಕಾ ಘೋಷಿಸಿದೆ. ಇದರಿಂದಾಗಿ ಭಾರತದ ಆಮದು ಉತ್ಪನ್ನಗಳ ಮೇಲೆ ಶೇ.50 ರಷ್ಟು ಆಮದು ಸುಂಕ ವಿಧಿಸಿದಂತಾಗಿದೆ. ದಂಡದ ರೂಪದಲ್ಲಿ ಹೊಸದಾಗಿ ವಿಧಿಸಿದ ಸುಂಕವು ಆಗಸ್ಟ್ 27ರಿಂದ ಜಾರಿಗೆ ಬರಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

**2019ರ ಬಳಿಕ ಪ್ರಧಾನಿ ಮೋದಿ ಚೀನ ಭೇಟಿಗೆ ಸಜ್ಜು**

**ಭಾರಿ ಬೆಲೆ ತೆರಲು ಸಿದ್ಧ ಎಂದ ಮೋದಿ**

### ನಾನು ರೆಡಿ ಇದ್ದೇನೆ, ಭಾರತ ಕೂಡ ಸಿದ್ಧವಿದೆ

ಇಂತಹ ಗಟ್ಟಿ ನಿಲುವನ್ನು ತಾಳುವುದರಿಂದ ಎದುರಾಗಬಹುದಾದ ಪರಿಣಾಮಗಳ ಬಗ್ಗೆ ತಮಗೆ ಅರಿವಿದೆ. ರೈತರ ಹಿತಾಸಕ್ತಿ ರಾಜಿ ಮಾಡಿಕೊಳ್ಳದಿರುವುದಕ್ಕೆ ನಾವು ದೊಡ್ಡ ಬೆಲೆ ತೆರಬೇಕಾಗುತ್ತದೆ ಎಂಬುದು ನನಗೆ ಗೊತ್ತಿದೆ. ಅದಕ್ಕೆ ನಾನು ರೆಡಿ ಇದ್ದೇನೆ, ಭಾರತ ಕೂಡ ಸಿದ್ಧವಿದೆ ಎಂದು ಮೋದಿ ಹೇಳಿದ್ದಾರೆ. ಪ್ರಧಾನಿ ಮೋದಿ ಅವರ ಈ ಹೇಳಿಕೆ, ಅಮೆರಿಕವು ಭಾರತದ ಮೇಲೆ ಮತ್ತಷ್ಟು ಸುಂಕ ಹೇರಿದ ಬೆನ್ನಲ್ಲೇ ಬಂದಿವೆ. ಕಳೆದ ವಾರ ಘೋಷಿಸಲಾಗಿದ್ದ ಶೇ.25ರಷ್ಟು ಸುಂಕದ ಜೊತೆಗೆ, ರಷ್ಯಾದಿಂದ ತೈಲ ಖರೀದಿಸಿದ್ದಕ್ಕಾಗಿ ಭಾರತದ ಮೇಲೆ ಬುಧವಾರ ಮತ್ತೆ ಶೇ.25ರಷ್ಟು ಸುಂಕವನ್ನು ಟ್ರಂಪ್ ವಿಧಿಸಿದ್ದರು. ಇದರೊಂದಿಗೆ ಭಾರತದ ಮೇಲಿನ ಒಟ್ಟು ಸುಂಕ ಶೇ.50ಕ್ಕೆ ಏರಿಕೆಯಾಗಿದ್ದು, ಇದು ಅಮೆರಿಕವು ಯಾವುದೇ ದೇಶದ ಮೇಲೆ ವಿಧಿಸಿರುವ ಅತಿ ಹೆಚ್ಚಿನ ಸುಂಕಗಳಲ್ಲಿ ಒಂದಾಗಿದೆ. ಭಾರತದ ಮೇಲಿನ ಈ ಹೆಚ್ಚುವರಿ ಶೇ.25ರಷ್ಟು ಸುಂಕವು 21 ದಿನಗಳ ನಂತರ, ಅಂದರೆ ಆ.27ರಿಂದ ಜಾರಿಗೆ ಬರಲಿದೆ.

### ಖರ್ಗೆ ಆರೋಪ

ಡೊನಾಲ್ಡ್ ಟ್ರಂಪ್ ಸುಂಕವು ಮೋದಿ ವಿದೇಶಾಂಗ ನೀತಿಯ ದುರಂತ. ಭಾರತದ ರಾಜತಾಂತ್ರಿಕತೆ ವಿನಾಶಕಾರಿಯಾಗಿ ಹದಗೆಡುತ್ತಿರುವ ಸಮಯದಲ್ಲಿ ಟ್ರಂಪ್ ಶೇ.50 ರಷ್ಟು ಸುಂಕ ವಿಧಿಸಿದ್ದಾರೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪ ಮಾಡಿದ್ದಾರೆ. ಈ ದುರಂತವನ್ನು ನೀವು 70 ವರ್ಷದ ಕಾಂಗ್ರೆಸ್ ಮೇಲೆ ಹಾಕಲು ಸಾಧ್ಯವಿಲ್ಲ. ಅಮೆರಿಕದೊಂದಿಗೆ ವ್ಯಾಪಾರ ಒಪ್ಪಂದವನ್ನು ಮಾತುಕತೆ ನಡೆಸುವಲ್ಲಿ ಪ್ರಧಾನಿ ವಿಫಲರಾಗಿದ್ದಾರೆ ಎಂದು ಟೀಕಿಸಿದ್ದಾರೆ.

### ಶೇ.50ರಷ್ಟು ಆಮದು ಸುಂಕ

ರಷ್ಯಾದಿಂದ ಕಚ್ಚಾತೈಲ ಖರೀದಿ ಮತ್ತು ಮಿಲಿಟರಿ ಶಸ್ತ್ರಾಸ್ತ್ರವನ್ನು ಖರೀದಿಸುವುದನ್ನು ಭಾರತ ಮುಂದುವರಿಸಿದೆ. ರಷ್ಯಾದಿಂದ ಕಚ್ಚಾತೈಲ ಖರೀದಿಯನ್ನು ನಿಲ್ಲಿಸಬೇಕು ಅಂತ ಅಮೆರಿಕಾ ಹೇಳಿದ್ದನ್ನು ಭಾರತವು ಈಗಾಗಲೇ ತಿರಸ್ಕರಿಸಿದೆ. ಇದಕ್ಕೆ ನೇರ ಶಿಕ್ಷೆಯಾಗಿ, ದಂಡವಾಗಿ ಭಾರತದ ಉತ್ಪನ್ನಗಳ ಮೇಲೆ ಶೇ.50ರಷ್ಟು ಆಮದು ಸುಂಕವನ್ನು ಅಮೆರಿಕಾ ವಿಧಿಸಿದೆ. ಭಾರತವು ರಷ್ಯಾದ ವಾರ್ ಮೆಷಿನ್ ಗೆ ಕಚ್ಚಾತೈಲ ಖರೀದಿಸುವ ಮೂಲಕ ಹಣವನ್ನು ನೀಡುತ್ತಿದೆ ಅಂತ ಡೋನಾಲ್ಡ್ ಟ್ರಂಪ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆದರೇ, ನಮಗೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಎಲ್ಲಿ ಕಡಿಮೆ ಬೆಲೆಗೆ ಕಚ್ಚಾತೈಲ ಸಿಗುತ್ತೋ ಅಲ್ಲಿಂದ ನಾವು ಕಚ್ಚಾತೈಲ ಖರೀದಿಸುತ್ತೇವೆ, ನಮಗೆ ನಮ್ಮ ದೇಶದ ಜನರ ಹಿತಾಸಕ್ತಿ ಮುಖ್ಯ ಎಂದು ಈಗಾಗಲೇ ಭಾರತವು, ಅಮೆರಿಕಾಗೆ ತಿರುಗೇಟು ನೀಡಿದೆ. ಈಗ ಪ್ರಧಾನಿ ಮೋದಿ ಕೂಡ ನೇರವಾಗಿ ಅಮೆರಿಕಾದ ಒತ್ತಡಗಳಿಗೆ ನಾವು ಮಣಿಯಲ್ಲ, ನಮ್ಮ ದೇಶದ ಹಿತಾಸಕ್ತಿಯೇ ನಮಗೆ ಮೊದಲ ಆದ್ಯತೆ ಎಂದು ಮೋದಿ ಹೇಳಿದ್ದಾರೆ.

### ಟ್ರಂಪ್ ಸುಂಕ ದುರದೃಷ್ಟಕರ ಎಂದ ವಿದೇಶಾಂಗ ಇಲಾಖೆ

ಟ್ರಂಪ್ ಅವರ ಈ ಹೆಚ್ಚುವರಿ ಸುಂಕದ ಕ್ರಮಕ್ಕೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಪ್ರತಿಕ್ರಿಯಿಸಿದ್ದು, ಇದು ಅತ್ಯಂತ ದುರದೃಷ್ಟಕರ ಎಂದು ಹೇಳಿದೆ. ತಮ್ಮ ರಾಷ್ಟ್ರೀಯ ಹಿತಾಸಕ್ತಿಗಾಗಿ ತೆಗೆದುಕೊಳ್ಳುತ್ತಿರುವ ಕ್ರಮಗಳಿಗಾಗಿಯೇ ಅಮೆರಿಕವು ಭಾರತದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸಲು ನಿರ್ಧರಿಸಿರುವುದು ವಿಷಾದನೀಯ ಎಂದಿರುವ ಸಚಿವಾಲಯ, ಈ ವಿಷಯಗಳ ಬಗ್ಗೆ ನಾವು ಈಗಾಗಲೇ ನಮ್ಮ ನಿಲುವನ್ನು ಸ್ಪಷ್ಟಪಡಿಸಿದ್ದೇವೆ. 140 ಕೋಟಿ ಭಾರತೀಯರ ಇಂಧನ ಭದ್ರತೆಯನ್ನು ಖಚಿತಪಡಿಸುವ ಒಟ್ಟಾರೆ ಉದ್ದೇಶದಿಂದ ಮತ್ತು ಮಾರುಕಟ್ಟೆಯ ಅಂಶಗಳನ್ನು ಆಧರಿಸಿ ನಾವು ರಷ್ಯಾದಿಂದ ತೈಲವನ್ನು ಆಮದು ಮಾಡಿಕೊಳ್ಳುತ್ತಿದ್ದೇವೆ ಎಂದಿದೆ. ಅಮೆರಿಕದ ಈ ಕ್ರಮಗಳು ಅನ್ಯಾಯ, ಅಸಮರ್ಥನೀಯ ಮತ್ತು ಅವಿವೇಕದಿಂದ ಕೂಡಿವೆ.


# ಸಿದ್ದರಾಮಯ್ಯ ಒನ್ ಲೈನ್ ಉತ್ತರ, ಸಂಪುಟದಲ್ಲೂ ಚರ್ಚೆ!

## ಯೂಟ್ಯೂಬ್ ಪತ್ರಕರ್ತರ ಮೇಲೆ ಹಲ್ಲೆ ನಡೆಸಿದ ಆರೋಪ

• ಉದಯವಾಹಿನಿ, ಮಂಗಳೂರು

ಧರ್ಮಸ್ಥಳದಲ್ಲಿ ನಡೆದ ಎರಡು ಗುಂಪುಗಳ ನಡುವೆ ಗಲಾಟೆ ನಡೆದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಗುರುವಾರ ಮಾತನಾಡಿದ ಅವರು, ಒಂದೇ ಲೈನ್ ನಲ್ಲಿ ಉತ್ತರ ನೀಡಿದ್ದಾರೆ. ತಪ್ಪು ಯಾರೇ ಮಾಡಿದ್ರು ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಈ ಘಟನೆಯಲ್ಲಿ ಯಾರೇ ತಪ್ಪು ಮಾಡಿದ್ರು ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದಷ್ಟೇ ಉತ್ತರಿಸಿದರು. ಈ ಘಟನೆ ಬಗ್ಗೆ ತನಿಖೆ ಮಾಡಿ ವರದಿ ಸಲ್ಲಿಸಲು ಗೃಹ ಸಚಿವ ಪರಮೇಶ್ವರ್ ಸೂಚಿಸಿದ್ದಾರೆ.

**ಸಂಪುಟದಲ್ಲೂ ಚರ್ಚೆ!:** ಧರ್ಮಸ್ಥಳದಲ್ಲಿ ನಡೆದ ಗಲಾಟೆ ವಿಚಾರವಾಗಿ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆದಿದೆ. ಬುಧವಾರ ಧರ್ಮಸ್ಥಳದಲ್ಲಿ ಪತ್ರಕರ್ತರ ಮೇಲೆ ಹಲ್ಲೆ ನಡೆದಿತ್ತು. ಈ ಸಂಬಂಧಿಸಿದಂತೆ ಎರಡು ಗುಂಪುಗಳ ವಿರುದ್ಧ ಪ್ರಕರಣ ದಾಖಲಾಗಿದೆ. ಈ ಕುರಿತಾಗಿ ಪ್ರಾಥಮಿಕ






ಮಾಹಿತಿಯನ್ನು ಸಚಿವ ಸಂಪುಟ ಸಭೆಯಲ್ಲಿ ಗೃಹ ಸಚಿವ ಡಾ. ಜಿ ಪರಮೇಶ್ವರ್ ವಿವರಿಸಿದ್ದಾರೆ ಎಂದು ತಿಳಿದುಬಂದಿದೆ.

**ಧರ್ಮಸ್ಥಳದಲ್ಲಿ ಏನು ಘಟನೆ ಆಗಿದೆ?:** ಎಸ್ ಐ ಟಿ ತನಿಖೆ ಯಾವ ಹಂತದಲ್ಲಿ ನಡೆಯುತ್ತಿದೆ? ಸದ್ಯ ಪರಿಸ್ಥಿತಿ ಹೇಗಿದೆ ಹಾಗೂ ಯಾವ ರೀತಿಯಲ್ಲಿ ಬಂದೋಬಸ್ತ್ ಕೈಗೊಳ್ಳಲಾಗಿದೆ ಎಂಬುದನ್ನು ವಿವರಿಸಿದ್ದಾರೆ ಎಂದು ತಿಳಿದುಬಂದಿದೆ.

**ಏನಾಗ್ತಿದೆ ಧರ್ಮಸ್ಥಳದಲ್ಲಿ?:** ಧರ್ಮಸ್ಥಳದಲ್ಲಿ ಬುಧವಾರ ಎರಡು ಗುಂಪುಗಳ ಮಧ್ಯೆ ಗುಂಪು ಘರ್ಷಣೆ ನಡೆದಿದೆ. ಬಿಗ್ ಬಾಸ್ ಸ್ಪರ್ಧಿಯಾಗಿದ್ದ ರಜತ್ ಹಾಗೂ ತಂಡ ಸೌಜನ್ಯ ನಿವಾಸಕ್ಕೆ ಭೇಟಿ ಕೊಟ್ಟಿತ್ತು. ಈ ಸಂದರ್ಭದಲ್ಲಿ ಅವರನ್ನು ಮಾತನಾಡಿಸಲು ಹೋಗಿದ್ದ ಯೂಟ್ಯೂಬ್ ಪತ್ರಕರ್ತರ ಮೇಲೆ ಹಲ್ಲೆ ನಡೆಸಲಾಗಿದೆ ಎಂಬುದು ಆರೋಪವಾಗಿದೆ.

ಇದರ ಬೆನ್ನಲ್ಲೇ ಆಸ್ಪತ್ರೆಯೊಂದರ ಹೊರಭಾಗದಲ್ಲಿ ಖಾಸಗಿ ವಾಹಿನಿಯ ಪತ್ರಕರ್ತರ ಮೇಲೆ ಹಲ್ಲೆಗೆ ಯತ್ನಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ನಿಟ್ಟಿನಲ್ಲಿ ಎರಡು ಗುಂಪುಗಳ ವಿರುದ್ಧ ಪ್ರಕರಣ ದಾಖಲಾಗಿದೆ.

# ರಾಹುಲ್ ಗಾಂಧಿ ಮತಗಳ್ಳತನದ ಅಣುಬಾಂಬ್ 'ಶಿವಕಾಶಿ'ಯಿಂದ ಖರೀದಿಸಿದ್ದು: ಬಿಜೆಪಿ ವ್ಯಂಗ್ಯ

• ಉದಯವಾಹಿನಿ, ದಕ್ಷಿಣ ಕನ್ನಡ

■ ರಾಹುಲ್ ಗಾಂಧಿ ಆರೋಪಕ್ಕೆ ಬಿಜೆಪಿ ತಿರುಗೇಟು ■ ರಾಜಕೀಯ ಕಾರಣಕ್ಕೆ ಚುನಾವಣಾ ಆಯೋಗವನ್ನು ಎಳೆದು ತರುವುದು ತಪ್ಪು


ಕರ್ನಾಟಕದ ಮಹದೇವಪುರ ಅಸೆಂಬ್ಲಿ ಕ್ಷೇತ್ರವೂ ಸೇರಿದಂತೆ, ಮಹಾರಾಷ್ಟ್ರ ಮತ್ತು ಹರ್ಯಾಣದಲ್ಲೂ ಚುನಾವಣಾ ಅಕ್ರಮ ನಡೆದಿದೆ ಎಂದು ಲೋಕಸಭೆಯಲ್ಲಿ ವಿಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ. ರಾಹುಲ್ ಗಾಂಧಿ ನೇತೃತ್ವದಲ್ಲಿ ನಾಳೆ (ಆ. 8) ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ.

ದೆಹಲಿಯಲ್ಲಿ ದಾಖಲೆ ಸಮೇತ, ಕೇಂದ್ರ ಚುನಾವಣಾ ಆಯೋಗದಿಂದ ಏನು ತಪ್ಪಾಗಿದೆ ಎನ್ನುವುದನ್ನು ರಾಹುಲ್ ಗಾಂಧಿ, PPT presentation ಮೂಲಕ ವಿವರಿಸಿದ್ದಾರೆ. ರಾಹುಲ್ ಗಾಂಧಿಯ ಆರೋಪಕ್ಕೆ ಪ್ರತಿಕ್ರಿಯಿಸಿರುವ ಬಿಜೆಪಿ, ರಾಜಕೀಯ ಕಾರಣಕ್ಕಾಗಿ ಆಯೋಗವನ್ನು ದೂರುವುದು ತಪ್ಪು ಎಂದಿದೆ.

ಬಿಜೆಪಿ ನಾಯಕ ಮತ್ತು ಉಡುಪಿ ಜಿಲ್ಲೆ ಕಾರ್ಕಳ ಶಾಸಕ ವಿ.ಸುನಿಲ್ ಕುಮಾರ್ ಈ ಸಂಬಂಧ, ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ. ರಾಹುಲ್ ಗಾಂಧಿಯವರ ಮತಗಳ್ಳತನದ ಅಣುಬಾಂಬ್, ಬಹುಷಃ ತಮಿಳುನಾಡಿನ ಶಿವಕಾಶಿಯಿಂದ ತಂದಿರಬೇಕು ಎಂದು ಲೇವಡಿ ಮಾಡಿದ್ದಾರೆ.

ರಾಹುಲ್ ಗಾಂಧಿಯವರ ಮತಗಳ್ಳತನದ ಅಣುಬಾಂಬ್ ಶಿವಕಾಶಿಯಿಂದ ಖರೀದಿ ಮಾಡಿರುವ ಸಾಧ್ಯತೆ ದಟ್ಟವಾಗಿದೆ. ಚುನಾವಣಾ ಅಕ್ರಮ ಕಾಂಗ್ರೆಸ್ ಪಕ್ಷದ ಡಿಎನ್ ಎ ಯಲ್ಲೇ ಇದೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರಿಂದ ಮೊದಲ್ಗೊಂಡು ಇತ್ತೀಚಿನ ಬಳ್ಳಾರಿ ಲೋಕಸಭಾ ಚುನಾವಣೆಯ ಗೆಲುವಿನವರೆಗೂ ಕಾಂಗ್ರೆಸ್ ಅಕ್ರಮವನ್ನೇ ಸಕ್ರಮವಾಗಿಸಿಕೊಂಡಿದೆ ಎಂದು ಸುನಿಲ್ ಕುಮಾರ್ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಚುನಾವಣಾ ಆಯೋಗವನ್ನು ಬಳಸಿಕೊಂಡು ಮತಗಳ್ಳತನದ ಮೂಲಕ ಚುನಾವಣೆಗಳನ್ನು ಗೆಲ್ಲಲು, ಆ ಮೂಲಕ ದೇಶದ ಪ್ರಜಾಪ್ರಭುತ್ವವನ್ನೇ ಬುಡಮೇಲು ಮಾಡಲು ಕೇಂದ್ರದ ಬಿಜೆಪಿ ಸರ್ಕಾರ ಮುಂದಾಗಿದೆ. ಮಹಾರಾಷ್ಟ್ರದಲ್ಲಿ ಮತಗಳ್ಳತನ ನಡೆಯಿತು. ಆ ಮೂಲಕವೇ ಬಿಜೆಪಿ ಅಲ್ಲಿ ಗೆಲುವು ಸಾಧಿಸಿತು. ಈಗ ಬಿಹಾರದಲ್ಲಿಯೂ ಚುನಾವಣಾ ಆಯೋಗದ ಮೂಲಕವೇ ಅಕ್ರಮಗಳನ್ನು ನಡೆಸುತ್ತಿದೆ. ಕರ್ನಾಟಕದ ಲೋಕಸಭಾ ಚುನಾವಣೆಯಲ್ಲಿಯೂ ಅಕ್ರಮ ನಡೆದಿರುವುದಕ್ಕೆ ಸಾಕ್ಷಿಗಳು ಲಭ್ಯವಿದೆ ಎಂದು ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಟ್ವೀಟ್ ಮಾಡಿದ್ದರು.



ಸುನಿಲ್ ಕುಮಾರ್ ಮುಂದುವರಿಯುತ್ತಾ, ಸತತ ಸೋಲಿನ ಸುಳಿಯಲ್ಲಿ ಬಿದ್ದಿರುವ ರಾಹುಲ್ ಗಾಂಧಿ ಈಗ ಚುನಾವಣಾ ಆಯೋಗವನ್ನು ತಪ್ಪಿತಸ್ಥ ಸ್ಥಾನದಲ್ಲಿ ನಿಲ್ಲಿಸಿರುವುದು ಹಾಸ್ಯಾಸ್ಪದ. ಇದು ವ್ಯಕ್ತಿಗತ ಆರೋಪವಾದರೆ ನಿರ್ಲಕ್ಷಿಸಬಹುದಿತ್ತು. ಆದರೆ ಇದು ಪ್ರಜಾಪ್ರಭುತ್ವದ ಸಾಂಸ್ಥಿಕ ಸಂಸ್ಥೆಗಳನ್ನೇ ಆರೋಪಿ ಸ್ಥಾನದಲ್ಲಿ ನಿಲ್ಲಿಸುವ ಯೋಜಿತ ಅಪಪ್ರಚಾರ ಎಂದು ಬರೆದುಕೊಂಡಿದ್ದಾರೆ.

### ರಾಹುಲ್ ಗಾಂಧಿ ಆಪಾದನೆ ಆಧಾರ ರಹಿತ: ಚುನಾವಣಾ ಆಯೋಗ

ಬಿಜೆಪಿಯು ತನ್ನ ರಾಜಕೀಯ ಅನುಕೂಲಕ್ಕಾಗಿ ಚುನಾವಣಾ ಆಯೋಗವನ್ನು ಬಳಸಿಕೊಳ್ಳುತ್ತಿದೆ. ಚುನಾವಣಾ ಆಯೋಗವು ನೇರವಾಗಿ ಮತಗಳ ಕಳ್ಳತನದಲ್ಲಿ ಭಾಗಿಯಾಗಿದೆ. ಇದಕ್ಕೆ ಬೇಕಾದ ಸಾಕ್ಷಿಗಳು ನಮ್ಮಲ್ಲಿವೆ ಎಂದು ರಾಹುಲ್ ಗಾಂಧಿ ಹೇಳಿಕೊಂಡಿದ್ದರು. ಕಾಂಗ್ರೆಸ್ ಮತ್ತು ಇಂಡಿಯಾ ಮೈತ್ರಿಕೂಟದ ಭಾಗೀದಾರ ಪಾರ್ಟಿಗಳು ಮಾಡುತ್ತಿರುವ ಆಪಾದನೆ, ದೊಡ್ಡ ಮಟ್ಟದ ಚರ್ಚೆಗೆ ಕಾರಣವಾಗಿದೆ. ವಿಪಕ್ಷದ ನಾಯಕ ರಾಹುಲ್ ಗಾಂಧಿಯವರು ಹಿಂದಿನಿಂದಲೂ ಚುನಾವಣಾ ಆಯೋಗದ ವಿರುದ್ಧ ಆಪಾದನೆಯನ್ನು ಮಾಡಿಕೊಂಡು ಬರುತ್ತಿದ್ದಾರೆ. ಅವರ ಆಪಾದನೆ ಆಧಾರರಹಿತ, ಇಂತಹ ಹೇಳಿಕೆಗಳನ್ನು ನಾವು ನಿರ್ಲಕ್ಷ್ಯ ಮಾಡುತ್ತೇವೆ. ನಮ್ಮ ಕೆಲಸ ಪಾರದರ್ಶಕತೆಯಿಂದ ಕೂಡಿದೆ ಕೇಂದ್ರ ಚುನಾವಣಾ ಆಯೋಗದ ಅಧಿಕಾರಿಗಳು ಹೇಳಿದ್ದಾರೆ.

ಬೆಂಗಳೂರು ಕೇಂದ್ರದಲ್ಲಿ ಚುನಾವಣಾ ಅಕ್ರಮ ಆಗಿದೆ ಎಂದು ಆರೋಪಿಸುವುದಕ್ಕೆ ಮುನ್ನ ಬಳ್ಳಾರಿ ಲೋಕಸಭಾ ಕ್ಷೇತ್ರದ ಗೆಲುವಿಗೆ ಬಳಕೆಯಾದ ವಾಲ್ಮೀಕಿ ನಿಗಮದ ಅಕ್ರಮ ಹಣದ ಬಗ್ಗೆಯೂ ಮಾತನಾಡಲಿ. ನೂಲಿನಂತೆ ಸೀರೆ, ಸುಳ್ಳು ಹೇಳುವ ನಾಯಕನಿಗೆ ಸುಳ್ಳು ಹೇಳುವ ಹಿಂಬಾಲಕರು. ನಾಡಿದ್ದು ದಿಲ್ಲಿಯಿಂದ ಬರುವ ಸುಳ್ಳಿನ ಸಾಮ್ರಾಟನ ಮೆರವಣಿಗೆಗೆ ಹೊರಟಿರುವ ಕಾಂಗ್ರೆಸ್ ನಾಯಕರಿಗೆ ಈಗ ಸುಳ್ಳು ಬಿಟ್ಟರೆ ಬೇರೇನೂ ಕಾಣುತ್ತಿಲ್ಲ ಎಂದು ಸುನಿಲ್ ಕುಮಾರ್ ಲೇವಡಿ ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,255/Gram24ct ₹9,400/Gram22ct ಬೆಳ್ಳಿ: ₹117.00/Gram

# ಪಾದಚಾರಿ ಮಾರ್ಗ ವ್ಯವಸ್ಥೆಗೆ ಆದ್ಯತೆ; ವಲಯ ಆಯುಕ್ತ

• ಉದಯವಾಹಿನಿ, ಬೆಂಗಳೂರು

ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿ ಅಡತಡೆಯಿಲ್ಲದ ಪಾದಚಾರಿ ಮಾರ್ಗದ ವ್ಯವಸ್ಥೆಗೆ ಆದ್ಯತೆ ನೀಡಿ, ಪಾದಚಾರಿ ಮಾರ್ಗ ಒತ್ತುವರಿಯನ್ನು ನಿರಂತರವಾಗಿ ತೆರವುಗೊಳಿಸುವ ಕಾರ್ಯಾಚರಣೆ ನಡೆಸಲಾಗುವುದು ಎಂದು ವಲಯ ಆಯುಕ್ತ ಬಿ.ಸಿ. ಸತೀಶ್ ತಿಳಿಸಿದರು.

ಕೆಂಗೇರಿ ಉಪ ವಿಭಾಗ ವ್ಯಾಪ್ತಿಯ ಮಾಗಡಿ ಮುಖ್ಯರಸ್ತೆಯಿಂದ ಈಸ್ಟ್ ವೆಸ್ಟ್ ಕಾಲೇಜು, ಒಂದನೇ ಹಂತ, ಬಿಇಎಲ್ ಲೇಔಟ್ ವರೆಗೆ. ರಾಜರಾಜೇಶ್ವರಿನಗರ ವಿಭಾಗದ ಮೈಸೂರು ಮುಖ್ಯ ರಸ್ತೆ, ಗೋಪಾಲನ್ ಮಾಲ್ ಆರ್ಚ್‌ನಿಂದ ರಾಜರಾಜೇಶ್ವರಿನಗರದ 18ನೇ ಅಡ್ಡರಸ್ತೆ, ಐಡಿಯಲ್ ಹೋಮ್ಸ್ ರೆಗೆ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ನಡೆಸಲಾಯಿತು ಎಂದು ಮಾಹಿತಿ ನೀಡಿದರು. ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿದ್ದ ಅಂಗಡಿಗಳು, ತಾತ್ಕಾಲಿಕ ಚಾವಣಿಗಳು, ಮೆಟ್ಟಿಲುಗಳು, ತಾತ್ಕಾಲಿಕ ಶೆಡ್‌ಗಳು, ಕಟ್ಟಡ ನಿರ್ಮಾಣದ ಸಾಮಗ್ರಿ, ತಡೆಗೋಡೆಗಳು, ನಂದಿನಿ ಬೂತ್, ಜಾಹೀರಾತು ಫಲಕಗಳು, ಮಣ್ಣು ಮತ್ತು ತ್ಯಾಜ್ಯವನ್ನು ತೆರವುಗೊಳಿಸಲಾಯಿತು.



**ಪ್ಲಾಸ್ಟಿಕ್ ತಪಾಸಣೆ:** ಪಾದಚಾರಿ ಮಾರ್ಗ ತೆರವು ಕಾರ್ಯಾಚರಣೆಯೊಂದಿಗೆ ವಿವಿಧ ಅಂಗಡಿಗಳಿಗೆ ಭೇಟಿ ನೀಡಿ, ಏಕ ಬಳಕೆ ಪ್ಲಾಸ್ಟಿಕ್ ಬಳಸುತ್ತಿರುವ ಬಗ್ಗೆ ತಪಾಸಣೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಬಳಸುತ್ತಿದ್ದ 37 ಅಂಗಡಿಗಳಿಂದ ರೂ.64,300 ದಂಡ ವಸೂಲಿ ಮಾಡಲಾಯಿತು.

**ಆಯುಕ್ತ ಬಿ.ಸಿ. ಸತೀಶ್ ಹೇಳಿಕೆ**

ಆಗಸ್ಟ್ 14ರಂದು ವಲಯ ವ್ಯಾಪ್ತಿಯ ಕೆಂಗೇರಿ ವಿಭಾಗದ ಕೃಷ್ಣಪ್ರಿಯ ಕನ್ವೆನ್ಸನ್ ಹಾಲ್‌ನಿಂದ ಮೈಸೂರು ರಸ್ತೆಯ ಕಿಯಾ ಶೋರೂಂವರೆಗೆ, ರಾಜರಾಜೇಶ್ವರಿನಗರ ವಿಭಾಗದ ಬಾಂಬೆ ಡ್ರೈಯಿಂಗ್ ರಸ್ತೆ, ಮತ್ತಿಕೆರೆ ಮುಖ್ಯರಸ್ತೆಯಿಂದ ಯಶವಂತಪುರ ಹೂವಿನ ಮಾರುಕಟ್ಟೆವರೆಗೆ (ಎಡಭಾಗ) ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗುವುದು ಎಂದು ಸತೀಶ್ ಮಾಹಿತಿ ನೀಡಿದರು.

## ಎಸ್‌ಟಿಪಿ ಕಾಮಗಾರಿ ಕಾಲಮಿತಿಯಲ್ಲಿ ಪೂರ್ಣಗೊಳಿಸಿ: ಜಲಮಂಡಳಿ ಅಧ್ಯಕ್ಷ

• ಉದಯವಾಹಿನಿ, ಬೆಂಗಳೂರು

ಜಲಮಂಡಳಿಯಿಂದ ಹೊಸದಾಗಿ ನಿರ್ಮಿಸುತ್ತಿರುವ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ (ಎಸ್‌ಟಿಪಿ) ಕಾಮಗಾರಿಯನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಬೆಂಗಳೂರು ಜಲಮಂಡಳಿ ಅಧ್ಯಕ್ಷ ವಿ. ರಾಮ್ ಪ್ರಸಾತ್ ಮನೋಹರ್ ಅಧಿಕಾರಿಗಳಿಗೆ ಸೂಚಿಸಿದರು. ಜಲಮಂಡಳಿಯ ವೃಷಭಾವತಿ ವ್ಯಾಲಿಯ(ವಿವಿ) 150 ಎಂಎಲ್ ಡಿ ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣಾ ಘಟಕದ (ಎಸ್‌ಟಿಪಿ)ಯೋಜನೆ ಹಾಗೂ ಮೈಲಸಂದ್ರದಲ್ಲಿ ಉನ್ನತೀಕರಿಸಲಾಗುತ್ತಿರುವ ಎಸ್‌ಟಿಪಿ ಕಾಮಗಾರಿ ಪರಿಶೀಲಿಸಿ ಅವರು ಮಾತನಾಡಿದರು. ಮೈಲಸಂದ್ರ ಎಸ್‌ಟಿಪಿ ಕಾಮಗಾರಿ ಪೂರ್ಣಗೊಳಿಸದಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಡಿಸೆಂಬರ್ ಅಂತ್ಯಕ್ಕೆ ಕಾಮಗಾರಿ ಪೂರ್ಣಗೊಳ್ಳಬೇಕು ಎಂದರು. ವೃಷಭಾವತಿ ವ್ಯಾಲಿ ಯೋಜನೆಯ ಕಾಮಗಾರಿಯನ್ನು 2026ರ ಮಾರ್ಚ್ ವೇಳೆಗೆ ಪೂರ್ಣಗೊಳಿಸುವಂತೆ ನಿರ್ದೇಶಿಸಿದರು. ಇದೇ ವೇಳೆ ಈ ಎರಡೂ ಸ್ಥಳಗಳಲ್ಲಿ ಅಧ್ಯಕ್ಷರು ಸೇರಿದಂತೆ ಜಲ ಮಂಡಳಿ ಸಿಬ್ಬಂದಿ 350 ಗಿಡಗಳನ್ನು ನೆಟ್ಟರು.

## ಕಾನ್ಸ್‌ಟೆಬಲ್‌ಗಳಿಗೆ ನೇವಿ ಬ್ಲೂ ಪೀಕ್ ಕ್ಯಾಪ್: ಸರ್ಕಾರ ಸಮ್ಮತಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹೆಡ್ ಕಾನ್ಸ್‌ಟೆಬಲ್‌ಗಳು, ಧರಿಸುತ್ತಿರುವ ಗ್ಲೋಬ್ ಹ್ಯಾಟ್ ಟೋಪಿ ಬದಲಾಗಿ ನೇವಿ ಬ್ಲೂ ಪೀಕ್ ಕ್ಯಾಪ್ ವಿತರಿಸಲು ಸರ್ಕಾರ ಸಮ್ಮತಿ ನೀಡಿದೆ.ನೇವಿ ಬ್ಲೂ ಪೀಕ್ ಕ್ಯಾಪ್‌ಗಳನ್ನು ಖರೀದಿಸುವ ಸಂಬಂಧ ಟೆಂಡರ್ ಪ್ರಕ್ರಿಯೆ ಆರಂಭಿಸಲು ಆಗಸ್ಟ್ 7ರಂದು ಕೆಎಸ್‌ಆರ್‌ಪಿ ಎಡಿಜಿಪಿ ಉಮೇಶ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಕಿಟ್ ನಿರ್ದಿಷ್ಟತಾ ಸಮಿತಿ ಸಭೆ ಕರೆಯಲಾಗಿದೆ. ದಶಕಗಳಿಂದ ಪೊಲೀಸರು ಖಾಕಿ ಸಮವಸ್ತ್ರದ ಮೇಲೆ ಬಳಸುತ್ತಿದ್ದ ಗ್ಲೋಬ್ ಕ್ಯಾಪ್‌ಗೆ ವಿದಾಯ ಹೇಳಲಾಗುತ್ತದೆ. ಭಾರತೀಯ ನೌಕಾಪಡೆ, ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ, ಕೇರಳ, ಗೋವಾ, ದೆಹಲಿ ಸೇರಿದಂತೆ ಇತರೆ ರಾಜ್ಯಗಳ ಪೊಲೀಸರು ಧರಿಸುವ ಟೋಪಿಗಳನ್ನು ಇನ್ನುಮುಂದೆ ರಾಜ್ಯದ ಪೊಲೀಸ್ ಸಿಬ್ಬಂದಿ ಧರಿಸಲಿದ್ದಾರೆ. ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಜೂನ್ 16ರಂದು ನಡೆದ ವಾರ್ಷಿಕ ಸಮ್ಮೇಳನ ಸಭೆಯಲ್ಲಿ ಪೊಲೀಸ್ ಸಿಬ್ಬಂದಿಯ ಟೋಪಿ ಬದಲಾವಣೆ ಕುರಿತು ಚರ್ಚೆ ನಡೆಸಲಾಗಿತ್ತು.

## ಹಳೆ ದ್ವೇಷದಿಂದ ವಾಹನಕ್ಕೆ ಬೆಂಕಿ: ಮೂವರು ಆರೋಪಿಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಕಾಳಿಯಮ್ಮ ದೇವಸ್ಥಾನದ ಬೀದಿ ಬದಿ ಅಂಗಡಿ ಸೇರಿದಂತೆ ಹತ್ತಾರು ದ್ವಿಚಕ್ರ ವಾಹನಗಳಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಪರಾರಿಯಾಗಿದ್ದ ಮೂವರು ಆರೋಪಿಗಳನ್ನು ಹಲಸೂರು ಠಾಣೆ ಪೊಲೀಸರು ಬಂಧಿಸಿದ್ದಾರೆ.

ಡಿ.ಜೆ.ಹಳ್ಳಿ ಸುತ್ತಮುತ್ತಲಿನ ನಿವಾಸಿಗಳಾದ ಮಸ್ಕೂದ್ ಅಹಮದ್, ಇಜಾರ್ ಪಾಷಾ ಹಾಗೂ ಹಮಿತ್ ತಬ್ರೇಜ್ ಬಂಧಿತರು. ಜುಲೈ 28ರ ಬೆಳಗಿನ ಜಾವ ಕುಡಿದ ಅಮಲಿನಲ್ಲಿ ಆರೋಪಿಗಳು, ಉದ್ದೇಶಪೂರ್ವಕವಾಗಿ 10 ದ್ವಿಚಕ್ರ ವಾಹನಗಳು, 7 ಸೈಕಲ್ ಹಾಗೂ ಅಂಗಡಿಗೆ ಬೆಂಕಿ ಹಚ್ಚಿದ್ದರು. ವಾಹನಗಳು ಸುಟ್ಟುಹೋಗಿದ್ದವು. ಈ ಸಂಬಂಧ ಎರಡು ಪ್ರತ್ಯೇಕ ಪ್ರಕರಣ ದಾಖಲಿಸಿ ಮೂವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಗಳ ಪೈಕಿ ಮಕ್ಸೂದ್ ಅಹಮದ್, ಈ ಹಿಂದೆ ಹಲಸೂರಿನ ಬಜಾರ್ ಸ್ಟ್ರೀಟ್‌ನಲ್ಲಿ ತರಕಾರಿ ವ್ಯಾಪಾರ ಮಾಡುತ್ತಿದ್ದ. ಕೆಲ ತಿಂಗಳ ಹಿಂದೆಯಷ್ಟೇ ಡಿ.ಜೆ. ಹಳ್ಳಿಗೆ ಮನೆ ಬದಲಿಸಿದ್ದ. ಹಲಸೂರಿನಲ್ಲಿ ವಾಸವಿರುವಾಗ ಕೊಲೆ ಪ್ರಕರಣದಲ್ಲಿ ಭಾಗಿಯಾಗಿ ಜೈಲಿನಲ್ಲಿರುವ ಫಹಾದ್ ಸರ್ಫುದ್ದೀನ್ ಎಂಬುವರು ಕ್ಷುಲ್ಲಕ ಕಾರಣಕ್ಕಾಗಿ ಆರೋಪಿ ಮೇಲೆ ಸಾರ್ವಜನಿಕವಾಗಿ ಹಲ್ಲೆ ಮಾಡಿದ್ದರು. ಅವಮಾನಕ್ಕೆ ಒಳಗಾಗಿದ್ದ ಮಸ್ತೂದ್, ದ್ವೇಷ ಸಾಧಿಸುತ್ತಿದ್ದ. ಹಲಸೂರಿನಲ್ಲಿ ತಮ್ಮದೇ ಪ್ರಭಾವವಿರುವುದಾಗಿ ಸಂದೇಶ ಸಾರುವ ಸಲುವಾಗಿ ಮತ್ತಿಬ್ಬರನ್ನು ಒಗ್ಗೂಡಿಸಿ ಈ ರೀತಿಯ ದುಷ್ಕೃತವೆಸಗಿದ್ದಾನೆ. ಮೂವರು ಆರೋಪಿಗಳ ಮೇಲೆ ರೌಡಿಶೀಟ್ ತೆರೆಯಲಾಗುವುದು ಎಂದು ಪೂರ್ವ ವಿಭಾಗದ ಡಿಸಿಪಿ ದೇವರಾಜ್ ತಿಳಿಸಿದ್ದಾರೆ.

## ಬೆಂಗಳೂರಲ್ಲಿ ಭಾರೀ ಮಳೆ ಹಲವೆಡೆ ರಸ್ತೆಗಳು ಜಲಾವೃತ

• ಉದಯವಾಹಿನಿ, ಬೆಂಗಳೂರು


ತಡರಾತ್ರಿ ನಗರದ ಯಶವಂತಪುರ , ಮಲ್ಲೇಶ್ವರಂ, ಮೆಜೆಸ್ಟಿಕ್ ಮಾರ್ಕೆಟ್ ಸುತ್ತ ಮುತ್ತ ಭಾರೀ ಮಳೆಯಾಗಿದೆ. ಪರಿಣಾಮ ರಸ್ತೆಗಳ ಮೇಲೆ ನೀರು ಉಕ್ಕಿ ಹರಿದಿದೆ. ಮಂತ್ರಿಮಾಲ್ ಬಳಿಯ ರಸ್ತೆ ಕೆರೆಯಂತೆಯಾಗಿದೆ. ಕೃಷ್ಣ ಫ್ಲೋರ್ ಮಿಲ್ ರಸ್ತೆ ಸಂಪೂರ್ಣ ಜಲಾವೃತವಾಗಿದೆ. ರಸ್ತೆಗಳ ಮೇಲೆ ನೀರು ಹರಿಯಿಯುತ್ತಿದ್ದಿದ್ದರಿಂದ ವಾಹನ ಸವಾರರು ಪರದಾಡಿದ್ದಾರೆ. ಇನ್ನೊಂದೆಡೆ ಮಳೆಯನ್ನು ಲೆಕ್ಕಿಸದೆ ವರಮಹಾಲಕ್ಷ್ಮೀ ಹಬ್ಬಕ್ಕಾಗಿ ಸಿಟಿ ಮಾರ್ಕೆಟ್‌ನಲ್ಲಿ ಹೂವು, ಹಣ್ಣು ತರಕಾರಿ ಖರೀದಿಗೆ ಜನ ಮುಗಿಬಿದ್ದಿದ್ದಾರೆ.

# ಒಳ ಮೀಸಲು ವರದಿ ಭವಿಷ್ಯ ನಿರ್ಧಾರ

### ಸಾರಿಗೆ ಒಕ್ಕೂಟಗಳ ದೀರ್ಘಕಾಲದಿಂದ ಬಾಕಿ ಉಳಿದಿರುವ ಬೇಡಿಕೆಗಳು

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವ ಕುರಿತು ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ನೇತೃತ್ವದ ಏಕಸದಸ್ಯ ಆಯೋಗ ಸಲ್ಲಿಸಿರುವ ವರದಿಯ ಕುರಿತು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗುವ ಸಾಧ್ಯತೆಯಿದೆ.



ಉದಯವಾಹಿನಿ ಚಿತ್ರ

ಇದರ ಜೊತೆಗೆ ಸಾರಿಗೆ ಒಕ್ಕೂಟಗಳ ದೀರ್ಘಕಾಲದಿಂದ ಬಾಕಿ ಉಳಿದಿರುವ ಬೇಡಿಕೆಗಳು, ವಿಶೇಷವಾಗಿ ಕರ್ನಾಟಕ ಹೈಕೋರ್ಟ್‌ನಲ್ಲಿನ ಇತ್ತೀಚಿನ ಬೆಳವಣಿಗೆಗಳು ಮತ್ತು ಕಾಂಗ್ರೆಸ್ ಸರ್ಕಾರದ ಚುನಾವಣಾ ಪೂರ್ವ ಭರವಸೆಗಳ ಹಿನ್ನೆಲೆಯಲ್ಲಿ ಕಾರ್ಯಸೂಚಿಯಲ್ಲಿ ಪ್ರಾಬಲ್ಯ ಸಾಧಿಸುವ ಸಾಧ್ಯತೆಯಿದೆ. ಎರಡೂ ಸಮಸ್ಯೆಗಳನ್ನು ಸಮಗ್ರವಾಗಿ ಪರಿಹರಿಸಲು ಸಿದ್ಧತೆಗಳು ನಡೆಯುತ್ತಿವೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ.

**ಸಚಿವ ಸಂಪುಟ ಸಭೆ**

ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯು ರಾಜಕೀಯ ಗಮನ ಸೆಳೆದಿದೆ. ಉದ್ಯೋಗ ಹಕ್ಕುಗಳು, ಸುರಕ್ಷತೆ ಮತ್ತು ಆರ್ಥಿಕ ಬೆಂಬಲಕ್ಕೆ ಸಂಬಂಧಿಸಿದ ಸಾರಿಗೆ ಒಕ್ಕೂಟದ ಬೇಡಿಕೆಗಳನ್ನು ಸರ್ಕಾರದ ಪ್ರಣಾಳಿಕೆಯ ಬದ್ಧತೆಗಳ ಭಾಗವಾಗಿ ಮರುಪರಿಶೀಲಿಸುವ ನಿರೀಕ್ಷೆಯಿದೆ.

ಕೃಷಿ, ನೀರಾವರಿ, ಶಿಕ್ಷಣ, ಆರೋಗ್ಯ ಮತ್ತು ಗ್ರಾಮೀಣ ಮೂಲಸೌಕರ್ಯ ಕ್ಷೇತ್ರಗಳಲ್ಲಿ ಹಲವಾರು ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳನ್ನು ಸಚಿವ ಸಂಪುಟವು ಅನುಮೋದಿಸುವ ಸಾಧ್ಯತೆಯಿದೆ. ಅನುಮೋದನೆಗಾಗಿ ಇರುವ ಪ್ರಮುಖ ಪ್ರಸ್ತಾಪಗಳಲ್ಲಿ ಕೋಲ್ಡ್ ಸ್ಟೋರೇಜ್ ಸಹ ಸೇರಿದೆ, ಮಾರುಕಟ್ಟೆಯಲ್ಲಿ ದರ ಕುಸಿತದ ಸಮಯದಲ್ಲಿ ಬೆಳೆಗಳನ್ನು ಸಂಗ್ರಹಿಸಲು ರೈತರಿಗೆ ಸಹಾಯ ಮಾಡಲು 172 ಕೋಟಿ ರೂ. ವೆಚ್ಚದಲ್ಲಿ ರಾಜ್ಯದಲ್ಲಿ 13 ಕೋಲ್ಡ್ ಸ್ಟೋರೇಜ್ ಘಟಕಗಳನ್ನು ಸ್ಥಾಪಿಸಲಿದ್ದಾರೆ. ಇತ್ತೀಚೆಗೆ ಮಾವಿನ ಬೆಲೆ ಕುಸಿತದ ನಂತರ ಕೈಗೊಳ್ಳಲಾಗಿದೆ, ಮಾವಿನ ಬೆಲೆ ಪ್ರತಿ ಕೆಜಿಗೆ 2 ರೂ.ಗೆ ಇಳಿದಿತ್ತು.

ಇನ್ನೊಂದು ನೀರಾವರಿ ಕಾಮಗಾರಿಗಳು, ಬರಪೀಡಿತ ಹಾವೇರಿಯಲ್ಲಿ 111 ಒಣ ಟ್ಯಾಂಕ್‌ಗಳನ್ನು ತುಂಬಲು 220 ಕೋಟಿ ರೂ. ಬಾಗಲಕೋಟೆಯಲ್ಲಿ ಲಿಫ್ಟ್ ನೀರಾವರಿಗೆ 17 ಕೋಟಿ ರೂ. ಕಟ್ಟೆಮಲ್ವಾಡಿ ನೀರಾವರಿ ಯೋಜನೆಯನ್ನು ಆಧುನೀಕರಿಸಲು 50 ಕೋಟಿ ರೂ. ಹಾರಂಗಿ ಬಲದಂಡೆ ಕಾಲುವೆಗೆ 90 ಕೋಟಿ ರೂ. ಮತ್ತು ಹೇಮಾವತಿ ಎಡದಂಡೆ ಕಾಲುವೆಗೆ 65 ಕೋಟಿ ರೂ. ಸೇರಿದಂತೆ 440 ಕೋಟಿ ರೂ.ಗೂ ಹೆಚ್ಚು ಮೌಲ್ಯದ ಯೋಜನೆಗಳ ಬಗ್ಗೆ ಚರ್ಚಿಸಲಾಗುವುದು.

**ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳನ್ನು ಹೊಸ ಮಂಚಗಳು ಮತ್ತು ಹಾಸಿಗೆಗಳೊಂದಿಗೆ ಮೇಲ್ದರ್ಜೆಗೇರಿಸಲು 40 ಕೋಟಿ ರೂ.ಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ. ಅಲ್ಲದೆ, ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಕರಿಗೆ 33 ಕೋಟಿ ರೂ. ವೆಚ್ಚದಲ್ಲಿ 11,000 ವಿದ್ಯುತ್ ಮೊಬೈಲ್ ಆಹಾರ ಕಿಯೋಸ್ಕ್‌ಗಳನ್ನು ಒದಗಿಸುವ ಪ್ರಸ್ತಾವನೆಗೆ ಸಂಪುಟದ ಅನುಮೋದನೆ ದೊರೆಯುವ ನಿರೀಕ್ಷೆಯಿದೆ. ಕಿತ್ತೂರು ಬೆಳಗಾವಿ ಮತ್ತು ಮೊಳಕಾಲ್ಮೂರು ಚಿತ್ರದುರ್ಗಗಳಲ್ಲಿ ಒ ಟ್ಟು 120 ಕೋಟಿ ರೂ. ವೆಚ್ಚದಲ್ಲಿ ಹೊಸ ಆಸ್ಪತ್ರೆಗಳು ಮತ್ತು ಬೀದರ್‌ನಲ್ಲಿ 36 ಕೋಟಿ ರೂ. ವೆಚ್ಚದಲ್ಲಿ 100 ಹಾಸಿಗೆಗಳ ಕ್ಯಾನ್ಸರ್ ಆಸ್ಪತ್ರೆಯನ್ನು ನಿರ್ಮಿಸಲು ಸಂಪುಟ ಅನುಮೋದನೆ ನೀಡುವ ಸಾಧ್ಯತೆ ಇದೆ.**

ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಪ್ರಸ್ತಾವನೆಗಳಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗಾಗಿ 15 ಬಾಲಕಿಯರ ಹಾಸ್ಟೆಲ್‌ಗಳನ್ನು ಪ್ರಾರಂಭಿಸುವುದು ರೂ. 87 ಕೋಟಿ ಮತ್ತು ಅಲ್ಪಸಂಖ್ಯಾತರು ನಡೆಸುವ ತಾಂತ್ರಿಕ ಶಿಕ್ಷಣ ಕಾರ್ಯಕ್ರಮಗಳನ್ನು ಬೆಂಬಲಿಸಲು ನಿಯಮಗಳನ್ನು ಪರಿಷ್ಕರಿಸುವುದು ಸೇರಿವೆ. ಹಲವಾರು ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪುರಸಭೆಗಳಾಗಿ ಮೇಲ್ದರ್ಜೆಗೇರಿಸುವ ಸಾಧ್ಯತೆಯಿದೆ.

## ಮಹಿಳೆ ಸಾವು; ಆಸ್ಪತ್ರೆ ವಿರುದ್ಧ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ವೈದ್ಯರ ನಿರ್ಲಕ್ಷ್ಯದಿಂದ ಮಹಿಳೆ ಮೃತಪಟ್ಟಿದ್ದಾರೆ ಎಂದು ಆರೋಪಿಸಿ ಮೃತರ ಸಂಬಂಧಿಕರು ಕುಮಾರಸ್ವಾಮಿ ಪೊಲೀಸ್ ಠಾಣೆ ವ್ಯಾಪ್ತಿಯ ಖಾಸಗಿ ಆಸ್ಪತ್ರೆ ಎದುರು ಪ್ರತಿಭಟನೆ ನಡೆಸಿದರು. ಮಂಡ್ಯ ಮೂಲದವರಾದ. ನಗರದ ಜರಗನಹಳ್ಳಿ ನಿವಾಸಿ ತನುಶ್ರೀ(27) ಮೃತಪಟ್ಟವರು. ತನುಶ್ರೀ ಅವರು ಹೆರಿಗೆ ನೋವಿನಿಂದಾಗಿ ಸೋಮವಾರ ಆಸ್ಪತ್ರೆಗೆ ದಾಖಲಾಗಿದ್ದು, ಮಂಗಳವಾರ ಬೆಳಿಗ್ಗೆ ಹೆರಿಗೆ ಆಗಿದೆ.

ಬುಧವಾರ ಬೆಳಿಗ್ಗೆ ಮೃತಪಟ್ಟಿದ್ದಾರೆ. ವೈದ್ಯರ ನಿರ್ಲಕ್ಷ್ಯದಿಂದ ತನುಶ್ರೀ ಮೃತಪಟ್ಟಿದ್ದಾರೆ' ಎಂದು ಆರೋಪಿಸಿ ಕುಟುಂಬದ ಸದಸ್ಯರು ಆಸ್ಪತ್ರೆ ಮುಂದೆ ಪ್ರತಿಭಟನೆ ನಡೆಸಿದರು. ವಿಷಯ ತಿಳಿದು ಕುಮಾರಸ್ವಾಮಿ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದರು. ಆಸ್ಪತ್ರೆಗೆ ತನುಶ್ರೀ ದಾಖಲಾದಾಗ ವೈದ್ಯರು ಸಹಜ ಹೆರಿಗೆ ಆಗುತ್ತದೆ ಎಂದಿದ್ದರು. ಆದರೆ, ಸಿಸೇರಿಯನ್ ಮಾಡಿ ಮಗುವನ್ನು ಹೊರತೆಗೆದಿದ್ದಾರೆ. ತನುಶ್ರೀ ಮೂಗಿನಲ್ಲಿ ರಕ್ತ ಸೋರುತ್ತಿತ್ತು. ಆಕೆಯ ಸಾವಿನ ಬಗ್ಗೆ ಮಾಹಿತಿ ನೀಡದ ವೈದ್ಯರು ಒಂದೂವರೆ ಲಕ್ಷ ರೂಪಾಯಿ ಬಿಲ್ ಕಟ್ಟಿಸಿಕೊಂಡಿದ್ದಾರೆ' ಎಂದು ಮೃತರ ಸಂಬಂಧಿಕರು ಆರೋಪಿಸಿದರು. ನ್ಯಾಯ ಸಿಗುವವರೆಗೂ ಮೃತದೇಹವನ್ನು ಕೊಂಡೊಯ್ಯುವುದಿಲ್ಲ ಎಂದು ಪ್ರತಿಭಟನೆ ನಡೆಸಿದರು. ಪೊಲೀಸರು ಮನವೊಲಿಸಿದ ಬಳಿಕ ಕುಟುಂಬ ಸದಸ್ಯರು ಮೃತದೇಹವನ್ನು ಪಡೆದರು. ಸದ್ಯ ಎನ್‌ಐಸಿಯುನಲ್ಲಿ ಮಗುವಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ರಕ್ತದೊತ್ತಡ ನಿಯಂತ್ರಣಕ್ಕೆ ಬಾರದೆ, ಹೆಚ್ಚಿನ ರಕ್ತಸ್ರಾವದಿಂದಾಗಿ ತನುಶ್ರೀ ಮೃತಪಟ್ಟಿದ್ದಾರೆ. ಇದರಲ್ಲಿ ವೈದ್ಯರ ನಿರ್ಲಕ್ಷ್ಯವಿಲ್ಲವೆಂದು ಆಸ್ಪತ್ರೆಯವರು ಸ್ಪಷ್ಟನೆ ನೀಡಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

# ಹಲವೆಡೆ ಸಂಚಾರ ಬಂದ್, ಟ್ರಾಫಿಕ್ ತಪ್ಪಿಸೋಕೆ ಪರ್ಯಾಯ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

(ಆ.8) ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನಾ ರ್‍ಯಾಲಿ ನಡೆಯಲಿದ್ದು, ಈ ಹಿನ್ನೆಲೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಬೆಂಗಳೂರಿಗೆ ಆಗಮಿಸುತ್ತಿದ್ದಾರೆ. ಹೀಗಾಗಿ ಬೆಂಗಳೂರಿಗರಿಗೆ ಟ್ರಾಫಿಕ್ ಬಿಸಿ ತಪ್ಪಿಸುವ ನಿಟ್ಟಿನಲ್ಲಿ ಪೊಲೀಸರು ಕೆಲವು ರಸ್ತೆಗಳಲ್ಲಿ ಸಂಚಾರ ಬಂದ್ ಮಾಡಿದ್ದು, ಪರ್ಯಾಯ ಮಾರ್ಗಗಳನ್ನು ಸೂಚಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ರಾಹುಲ್ ಗಾಂಧಿ ಅವರು ಮತಗಳ್ಳತನ ಆರೋಪ ಮಾಡಿದ್ದರು. ಕೇಂದ್ರದ ಈ ಕ್ರಮ ವಿರೋಧಿಸಿ ಪ್ರತಿಭಟನಾ ರ್‍ಯಾಲಿ ನಡೆಯಲಿದ್ದು, ದಾಖಲೆ ಬಿಡುಗಡೆ ಮಾಡಲಿದ್ದಾರೆ. ಈ ಹಿನ್ನೆಲೆ ಕೆಲವೆಡೆ ಸಂಚಾರ್ ಬಂದ್ ಮಾಡಿ, ಅವುಗಳಿಗೆ ಪರ್ಯಾಯ ಮಾರ್ಗಗಳ ವ್ಯವಸ್ಥೆ ಕಲ್ಪಿಸಲಾಗಿದೆ.


ಉದಯವಾಹಿನಿ ಚಿತ್ರ

**ಎಲ್ಲೆಲ್ಲಿ ಸಂಚಾರ ಬಂದ್ ಪರ್ಯಾಯ ಮಾರ್ಗಗಳು ಯಾವವು:** ಶಾಂತಲಾ ಜಂಕ್ಷನ್, ಖೋಡ್ ಸರ್ಕಲ್‌ನಿಂದ ಆನಂದ್ ರಾವ್ ಫ್ಲೈಓವರ್, ಒಲ್ಡ್ ಜೆಡಿಎಸ್ ರಸ್ತೆ, ಶೇಷಾದ್ರಿಪುರ ರಸ್ತೆಯಲ್ಲಿ ಸಂಚಾರ ನಿರ್ಬಂಧಗೊಳಿಸಲಾಗಿದೆ. ಇವುಗಳ ಬದಲು ಲುಲು ಮಾಲ್, ರಾಜೀವ್ ಗಾಂಧಿ ಸರ್ಕಲ್, ಮಂತ್ರಿ ಮಾಲ್, ಸ್ವಸ್ತಿಕ್ ಸರ್ಕಲ್, ಶೇಷಾದ್ರಿಪುರಂ, ನೆಹರು ಸರ್ಕರ್, ರೇಸ್ ಕೋರ್ಸ್ ಫ್ಲೈಓವರ್ ಕಡೆಯಿಂದ ಪ್ರಯಾಣಿಸಬಹುದು. ಮೈಸೂರು ಬ್ಯಾಂಕ್ ಕಡೆಯಿಂದ ಚಾಲುಕ್ಯ ಕಡೆಗೆ ಸಂಚಾರ ನಿರ್ಬಂಧಿಸಲಾಗಿದೆ. ಪರ್ಯಾಯವಾಗಿ ಕೆಜಿ ರಸ್ತೆ, ಮೈಸೂರು ಬ್ಯಾಂಕ್ ಜಂಕ್ಷನ್, ಸಾಗರ್ ಜಂಕ್ಷನ್, ರಾಜೀವ್ ಗಾಂಧಿ ಸರ್ಕಲ್, ರೇಸ್ ಕೋರ್ಸ್ ಫ್ಲೈಓವರ್ ಮೂಲಕ ಹೋಗಬಹುದು ಚಾಲುಕ್ಯದಿಂದ ಮೈಸೂರು ಬ್ಯಾಂಕ್ ಕಡೆಗೆ ಸಂಚಾರ ನಿಷೇಧಿಸಲಾಗಿದ್ದು, ಚಾಲುಕ್ಯ ಸರ್ಕಲ್, ರಾಜಭವನ ರಸ್ತೆ, ಇನ್‌ಫೆಂಟ್ರಿ ರಸ್ತೆ, ಇಂಡಿಯನ್ ಎಕ್ಸ್‌ಪ್ರೆಸ್‌ನಿಂದ ಸಂಚರಿಸಲು ಸೂಚಿಸಲಾಗಿದೆ. ಕಾಳಿದಾಸ ರಸ್ತೆ, ಕನಕದಾಸ ಜಂಕ್ಷನ್‌ಕಡೆಯಿಂದ ಫ್ರೀಡಂಪಾರ್ಕ್ ಕಡೆಗೆ ಸಂಚರಿಸುವ ವಾಹನಗಳು ಕನಕದಾಸ ಜಂಕ್ಷನ್‌ನಿಂದ ಬಲ ತಿರುವು ಪಡೆದು ಸಾಗರ ಜಂಕ್ಷನ್‌ಕಡೆಗೆ ಸಂಚರಿಸಬಹುದು. ಮೌರ್ಯ ಸುಬ್ಬಣ್ಣ ಜಂಕ್ಷನ್‌ನಿಂದ ಫ್ರೀಡಂಪಾರ್ಕ್‌ಗೆ ತೆರಳುವವರು ಸುಬ್ಬಣ್ಣ ಜಂಕ್ಷನ್‌ನಿಂದ ಬಲ ತಿರುವು ಆನಂದ್ ರಾವ್ ಸರ್ಕಲ್ ಕಡೆಗೆ ಸಂಚರಿಸಬಹುದು


## ಶಾಲಾ ತಪಾಸಣೆಗೆ ಮೊಬೈಲ್ ಆಧಾರಿತ ಆ್ಯಪ್ ಬಳಕೆ

• ಉದಯವಾಹಿನಿ, ಬೆಂಗಳೂರು

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಶೀಘ್ರದಲ್ಲೇ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮೊಬೈಲ್ ಆಧಾರಿತ ಶಾಲಾ ತಪಾಸಣೆ ಅಪ್ಲಿಕೇಶನ್ ಅನ್ನು ಬಿಡುಗಡೆ ಮಾಡಲಿದೆ. ಈ ಅಪ್ಲಿಕೇಶನ್ ಶಾಲಾ ತಪಾಸಣೆ ಪ್ರಕ್ರಿಯೆಯನ್ನು ಡಿಜಿಟಲೀಕರಣಗೊಳಿಸುವುದು, ರಿಯಲ್-ಟೈಂ ಮೇಲ್ವಿಚಾರಣೆ, ಯೋಜನೆ ಮತ್ತು ಮೇಲ್ವಿಚಾರಣೆಗೆ ಡೇಟಾ ಲಭ್ಯತೆಯನ್ನು ಸುಧಾರಿಸುವ ಗುರಿಯನ್ನು ಹೊಂದಿದೆ.

ಸಾರ್ವಜನಿಕ ಶಿಕ್ಷಣ ಆಯುಕ್ತ ಕೆವಿ ತ್ರಿಲೋಕ್ ಚಂದ್ರ ಮಾತನಾಡಿ, ಈ ಆ್ಯಪ್ ಕ್ಷೇತ್ರ ಸಿಬ್ಬಂದಿಗೆ ಶಾಲೆಗಳಿಗೆ ಭೇಟಿ ನೀಡಿದ ವೇಳೆ ಭೌತಿಕ ಮತ್ತು ಶೈಕ್ಷಣಿಕ ಮೂಲಸೌಕರ್ಯ, ಶಾಲೆಯ ಕಾರ್ಯವೈಖರಿ ಮತ್ತು ವಿದ್ಯಾರ್ಥಿಗಳ ಕಲಿಕೆಯ ಫಲಿತಾಂಶಗಳಿಗೆ ಸಂಬಂಧಿಸಿದ ಫೋಟೋಗಳು ಮತ್ತು ಅವಲೋಕನಗಳನ್ನು ಒಳಗೊಂಡಂತೆ ಮಾಹಿತಿ ಅಪ್‌ಲೋಡ್ ಮಾಡಲು ಅವಕಾಶ ನೀಡುತ್ತದೆ ಎಂದು ಹೇಳಿದರು.

ಎಲ್ಲಾ ಕ್ಷೇತ್ರ ಸಿಬ್ಬಂದಿ ಶಾಲೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಪ್ರಾಥಮಿಕವಾಗಿ ಫೋಟೋಗಳೊಂದಿಗೆ ಡೇಟಾವನ್ನು ಅಪ್ ಲೋಡ್ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಉದ್ದೇಶಿಸಲಾಗಿದೆ. ಆದ್ದರಿಂದ ನಾವು ರಾಜ್ಯಾದ್ಯಂತ ಶಾಲೆಗಳ ಸಮಗ್ರ ನೋಟವನ್ನು ಪಡೆಯಬಹುದು' ಎಂದು ಅವರು ಹೇಳಿದರು.



ಆಗಸ್ಟ್ 4 ರಂದು ಹೊರಡಿಸಲಾದ ಸರ್ಕಾರಿ ಆದೇಶದಲ್ಲಿ, 2025-26ನೇ ಶೈಕ್ಷಣಿಕ ವರ್ಷದಿಂದ ಅಪ್ಲಿಕೇಶನ್ ಬಳಕೆಯನ್ನು ಅನುಮೋದಿಸಿದೆ.

ಅಪ್ಲಿಕೇಶನ್ ಮೂಲಕ ಸಂಗ್ರಹಿಸಲಾದ ಡೇಟಾವನ್ನು ವಿದ್ಯಾರ್ಥಿ ಸಾಧನೆ ಟ್ರ್ಯಾಕಿಂಗ್ ಸಿಸ್ಟಮ್ ಪೋರ್ಟಲ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗುವುದು. ಡ್ಯಾಶ್‌ಬೋರ್ಡ್‌ಗಳ ಮೂಲಕ ಉನ್ನತ ಅಧಿಕಾರಿಗಳು ಈ ಮಾಹಿತಿ ಪಡೆಯಬಹುದು. ಈ ಅಪ್ಲಿಕೇಶನ್ ಸಿಂಗಲ್-ಲೈನ್ ತಪಾಸಣೆ ವರದಿಗಳನ್ನು ಸಹ ರಚಿಸುತ್ತದೆ.

**ಅಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡುತ್ತಾರೆ. ಆದರೆ, ಈಗ ಆ್ಯಪ್ ಮೂಲಕ ಸ್ಥಳದಲ್ಲಿಯೇ ತಪಾಸಣೆಯ ಡೇಟಾವನ್ನು ಅಪ್ ಲೋಡ್ ಮಾಡಬೇಕಾಗುತ್ತದೆ. ಇಲಾಖೆ ಈಗಾಗಲೇ ಕ್ಷೇತ್ರ ಪ್ರಯೋಗಗಳನ್ನು ಮತ್ತು ಸಾಫ್ಟ್ ಲಾಂಚ್ ಅನ್ನು ಪೂರ್ಣಗೊಳಿಸಿದೆ. ಮುಂದಿನ ವಾರದೊಳಗೆ ಔಪಚಾರಿಕ ಬಿಡುಗಡೆಯನ್ನು ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದರು.**

ಅಧಿಕಾರಿಗಳಿಗೆ ಆನ್‌ಲೈನ್‌ನಲ್ಲಿ ತರಬೇತಿ ನೀಡಲಾಗುವುದು.

ಅಪ್ಲಿಕೇಶನ್ ಅಭಿವೃದ್ಧಿಪಡಿಸುವಲ್ಲಿ ಯಾವುದೇ ಸರ್ಕಾರಿ ಹಣವನ್ನು ಬಳಸಲಾಗಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದ್ದು, ಇಲಾಖೆಯು ಅನುಷ್ಠಾನ ಮಾರ್ಗಸೂಚಿಗಳನ್ನು ಹೊರಡಿಸುವ ಮತ್ತು ತಾಲ್ಲೂಕು, ಜಿಲ್ಲೆರಾಜ್ಯ ಮಟ್ಟದಲ್ಲಿ ತಪಾಸಣೆಯ ಡೇಟಾವನ್ನು ವಿಶ್ಲೇಷಿಸಲು ಕ್ರಮಗಳನ್ನು ತೆಗೆದುಕೊಳ್ಳುವ ನಿರೀಕ್ಷೆಯಿದೆ.

## ಮತದಾರರು ಕಾಂಗ್ರೆಸ್ ಅನ್ನು ಕಿತ್ತೊಗೆಯಲಿದ್ದಾರೆ: ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಮತದಾರರು ನೂರಕ್ಕೆ ನೂರರಷ್ಟು ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯಲಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು. ಜೆಡಿಎಸ್ ಹಮ್ಮಿಕೊಂಡಿದ್ದ ಸದಸ್ಯತ್ವ ನೋಂದಣಿ ಅಭಿಯಾನ, ಸಂಘಟನಾ ಪ್ರವಾಸವನ್ನು ಉದ್ದೇಶಿಸಿ ಅವರು ಮಾತನಾಡಿದರು.

'ಕಳೆದ ಲೋಕಸಭಾ ಚುನಾವಣೆಯಲ್ಲಿ 151 ವಿಧಾನಸಭಾ ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿಗಳು ಮುನ್ನಡೆ ಸಾಧಿಸಿದ್ದಾರೆ. ಇದು ನಮ್ಮ ಗೆಲುವಿಗೆ ದಿಕ್ಸೂಚಿಯಾಗಿದೆ. ಆದ್ದರಿಂದ ಯಾರೂ ಹತಾಶರಾಗದೆ ಇಂದಿನಿಂದಲೇ ಸಂಘಟನೆಯಲ್ಲಿ ಕಾರ್ಯಪ್ರವೃತ್ತರಾಗಿ' ಎಂದರು. 'ಬೆಂಗಳೂರಿನ ಕೊಳಚೆ ನೀರನ್ನು ವೃಷಭಾವತಿ ಯೋಜನೆ ಮೂಲಕ ಕೆರೆಗಳಿಗೆ ತುಂಬಿಸುವ ಯೋಜನೆಯನ್ನು ಕಾಂಗ್ರೆಸ್ ಹಮ್ಮಿಕೊಂಡಿದೆ. ಇದರ ವಿರುದ್ಧ ಹೋರಾಟ ರೂಪಿಸುತ್ತೇವೆ ಎಂದರು. ಇದೇ ವೇಳೆ ನಗರಸಭೆ ವ್ಯಾಪ್ತಿಯ ಯುವ ಘಟಕದ ಅಧ್ಯಕ್ಷರಾಗಿ ವಿಷ್ಣು, ವಕ್ತಾರರಾಗಿ ಕನಕರಾಜು, ತಾಲ್ಲೂಕು ವಿದ್ಯಾರ್ಥಿ ಘಟಕದ ಅಧ್ಯಕ್ಷರನ್ನಾಗಿ ಸಿ.ಪಾಲ್ಯಾತೀಥ ಅವರನ್ನು ನೇಮಿಸಿ, ನೇಮಕಾತಿ ಪತ್ರ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಚೌಡೇಶ್ವರಿ ದೇವಸ್ಥಾನದಿಂದ ವೇದಿಕೆವರೆಗೆ ಬೈಕ್ ರ್‍ಯಾಲಿ ಮೂಲಕ ನಿಖಿಲ್ ಅವರನ್ನು ತೆರೆದ ವಾಹನದಲ್ಲಿ ಮೆರವಣಿಗೆ ಮಾಡಲಾಯಿತು.

ಮಾಜಿ ಶಾಸಕರಾದ ಕೆ. ಶ್ರೀನಿವಾಸಮೂರ್ತಿ, ಎ.ಮಂಜು, ಇ.ಕೃಷ್ಣಪ್ಪ, ಬಮೂಲ್ ನಿರ್ದೇಶಕ ಭವಾನಿ ಶಂಕರ್ ಬೈರೇಗೌಡ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಟಿ.ತಿಮ್ಮರಾಯಪ್ಪ, ನಗರಸಭೆ ಸದಸ್ಯ ಮುಖಂಡಾದ ಎಸ್.ಎಂಟಿ ಪ್ರಕಾಶ್, ಎಸ್. ಮಂಜುನಾಥ್, ಸುರೇಂದ್ರ, ಇದ್ದರು.

# ಲಾಲ್‌ಭಾಗ್ ಫಲಪುಷ್ಪ ಪ್ರದರ್ಶನಕ್ಕೆ ಚಾಲನೆ ಕೊಟ್ಟ ಸಿಎಂ

### ಬ್ರಿಟಿಷರ ವಿರುದ್ಧ ರಾಯಣ್ಣ ವೀರಾವೇಶದಿಂದ ಹೋರಾಡಿದ್ರು, ಎಂದ ಸಿಎಂ

• ಉದಯವಾಹಿನಿ, ಬೆಂಗಳೂರು

(ಆಗಸ್ಟ್ 7) ಆಗಸ್ಟ್18 ರವರೆಗೆ ನಡೆಯಲಿರುವ ಫಲಪುಷ್ಪ ಪ್ರದರ್ಶನಕ್ಕೆ ಸಿಎಂ ಸಿದ್ದರಾಮಯ್ಯ ಚಾಲನೆ ಕೊಟ್ಟಿದ್ದಾರೆ.

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಆಯೋಜಿಸಿದ್ದ ವೀರರಾಣಿ ಕಿತ್ತೂರು ಚೆನ್ನಮ್ಮ ಮತ್ತು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ವಿಷಯಾಧಾರಿತ ಸ್ವಾತಂತ್ರ್ಯೋತ್ಸವದ ಫಲಪುಷ್ಪ ಪ್ರದರ್ಶನವನ್ನು ಉದ್ಘಾಟಿಸಿ, ಸ್ವಾತಂತ್ರ್ಯ ಸೇನಾನಿಗಳಿಗೆ ನಮಿಸಿದರು.

ತೋಟಗಾರಿಕೆ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ, ಹರಿಹರ ವೀರಶೈವ ಲಿಂಗಾಯತ ಪಂಚಮಸಾಲಿ ಗುರುಪೀಠದ ಶ್ರೀ ವಚನಾನಂದ ಸ್ವಾಮಿಗಳು, ಮಹರ್ಷಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಸಿಎಂ, 218ನೇ ವರ್ಷದ ಲಾಲ್ ಭಾಗ್ ಫಲಪುಷ್ಪ ಪ್ರದರ್ಶನ ಇದು. ಈ ಬಾರಿ ಕಿತ್ತೂರು ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಅವರಿಗೆ ಗೌರವ ಸಲ್ಲಿಸುವ ಕೆಲಸ ಆಗಿದೆ.

ಚೆನ್ನಮ್ಮ ಅವರಿಗೆ ಬ್ರಿಟಿಷರ ವಿರುದ್ಧದ ಮೊದಲನೇ ಯುದ್ಧಗಳಲ್ಲಿ ಜಯ ಸಿಕ್ತು. ಎರಡನೇ ಯುದ್ಧದಲ್ಲಿ ಚೆನ್ನಮ್ಮನ ಸೆರೆಯಾಯಿತು. ರಾಯಣ್ಣ, ಚೆನ್ನಮ್ಮನ ಬಲಗೈ ಬಂಟ. ರಾಯಣ್ಣನಿಗೆ ನ್ಯಾಯಾಲಯದಲ್ಲಿ ಗಲ್ಲು ಶಿಕ್ಷೆ ಆಯ್ತು.


ಉದಯವಾಹಿನಿ ಚಿತ್ರ

**ರಾಣಿ ಚೆನ್ನಮ್ಮ, ಸಂಗೊಳ್ಳಿ ರಾಯಣ್ಣ ಅವರಿಗೆ ಗೌರವ ಸಲ್ಲಿಕೆ**

ರಾಯಣ್ಣ ಹುಟ್ಟಿದ್ದು ಸ್ವಾತಂತ್ರ್ಯ ಬಂದ ದಿನ. ಗಲ್ಲು ಶಿಕ್ಷೆ ಆಗಿದ್ದು ಗಣರಾಜ್ಯ ದಿನ. ಇದು ಕಾಕತಾಳೀಯ ಅಂತಾನೇ ಎನ್ನಬಹುದು ,ಬ್ರಿಟಿಷರ ವಿರುದ್ಧ ರಾಯಣ್ಣ ವೀರಾವೇಶದಿಂದ ಹೋರಾಡಿದ್ರು ಎಂದು ನೆನಪಿಸಿದರು. ತೋಟಗಾರಿಕೆ ಇಲಾಖೆಯಿಂದ ಗೌರವ ಸಲ್ಲಿಸಲಾಗಿದೆ.

#### ಆನ್‌ಲೈನ್ ಟಿಕೆಟ್ ಪಡೆಯಲು ಪ್ರೋತ್ಸಾಹ

**ಟಿಕೆಟ್ ಪಡೆಯಲು ಉದ್ದನೆಯ ಸರತಿ ಸಾಲು ತಪ್ಪಿಸಲು ಆನ್‌ಲೈನ್ ಟಿಕೆಟ್ ಪಡೆಯಲು ಈ ಭಾರಿ ಪ್ರೋತ್ಸಾಹ ನೀಡಲಾಗುತ್ತಿದೆ. ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಟಿಕೆಟ್ ಪಡೆಯಬಹುದು. ಇದೇ ಮೊದಲ ಬಾರಿಗೆ ಸರಕಾರದ ನಾನಾ ಇಲಾಖೆಗಳ ವೆಬ್‌ಸೈಟ್‌ಗಳಲ್ಲಿ ಫಲ ಪುಷ್ಪ ಪ್ರದರ್ಶನದ ಆನ್‌ಲೈನ್ ಟಿಕೆಟ್ ಖರೀದಿ ಮಾಡಬಹುದಾದ ವೆಬ್ ಸೈಟ್‌ನ ಲಿಂಕ್ ಅಳವಡಿಸಲಾಗಿದೆ. ಸರಕಾರಿ ವೆಬ್‌ಸೈಟ್‌ಗಳನ್ನು ತೆರೆಯುತ್ತಿದ್ದಂತೆ ಆನ್‌ಲೈನ್ ಟಿಕೆಟಿಂಗ್ ಮಾಹಿತಿ ಪುಟ ಪ್ರದರ್ಶನವಾಗುತ್ತಿದೆ. ಮಾಹಿತಿ ಪುಟ ಕ್ಲಿಕ್ ಮಾಡುತ್ತಿದ್ದಂತೆ ತೋಟಗಾರಿಕೆ ಇಲಾಖೆ ವೆಬ್‌ಸೈಟ್‌ಗೆ ಸಂಪರ್ಕ ಕಲ್ಪಿಸುತ್ತದೆ. ಅಲ್ಲಿ ಮೊಬೈಲ್ ನಂಬರ್ ನಮೂದಿಸಿ ಒಟಿಪಿ ಪಡೆದು ಲಾಗ್‌ಇನ್ ಆಗಬಹುದಾಗಿದೆ. ಹೆಸರು ಯಾವ ದಿನಕ್ಕೆ, ಎಷ್ಟು ಟಿಕೆಟ್ ಬೇಕು ಎಂಬುದನ್ನು ನಮೂದಿಸಿ ಟಿಕೆಟ್ ಖರೀದಿಸಬಹುದಾಗಿದೆ.**

ಬ್ರಿಟಿಷರನ್ನು ಸೋಲಿಸಿ ಇನ್ನೂರು ವರ್ಷ ಆಯಿತು. ರಾಯಣ್ಣ ಹಿಂದುಳಿದ ಜಾತಿಗೆ ಸೇರಿದವರು.

ಎಲ್ಲಾ ಸೈನ್ಯದಲ್ಲಿ ಎಲ್ಲಾ ಜಾತಿಯವರಿದ್ದರು. ಜಾತ್ಯಾತೀತರಾಗಿ ಎಲ್ಲರನ್ನು ಬಳಸಿಕೊಂಡು ಕಿತ್ತೂರು ಪ್ರಾಂತ್ಯ ಆಳಿದ್ರು. ಚೆನ್ನಮ್ಮ ವೀರ ಮಹಿಳೆ, ವೀರ ವನಿತೆ. ಸರ್ಕಾರದಿಂದ ಕಿತ್ತೂರು ರಾಣಿ ಚೆನ್ನಮ್ಮನ ಜಯಂತಿ ಆಚರಣೆ ಮಾಡಲಾಗುತ್ತೆ. ಸಂಗೊಳ್ಳಿ ರಾಜಣ್ಣ ಪ್ರಾಧಿಕಾರ ಮಾಡಲಾಗಿದೆ. ಇವತ್ತು ಈ ವೀರರನ್ನ ಸ್ಮರಿಸಬೇಕು, ದೇಶಕ್ಕಾಗಿ ಹೋರಾಡಿದವರನ್ನ ಸ್ಮರಿಸಬೇಕು ಎಂದರು. ಒಮ್ಮೆಲೆ ಹೆಚ್ಚು ಜನ ಬಂದಾಗ ಪ್ರವೇಶ ದ್ವಾರಗಳಲ್ಲಿನ ಟಿಕೆಟ್ ಕೌಂಟರ್ ಗಳಲ್ಲಿಸಾಕಷ್ಟು ಸಮಯ ಕ್ಯೂ ನಲ್ಲಿನಿಲ್ಲಬೇಕಾಗುತ್ತದೆ. ವಾರಾಂತ್ಯ, ಸರಕಾರಿ ರಜಾ ದಿನಗಳಂದು ನೂಕು ನುಗ್ಗಲು ಸಂಭವಿಸುವುದು ಸಾಮಾನ್ಯವಾಗಿದೆ. ಆನ್‌ಲೈನ್‌ನಲ್ಲಿಯೇ ಟಿಕೆಟ್ ಬುಕ್ ಮಾಡಿಕೊಂಡು ಟಿಕೆಟ್‌ಗಾಗಿ ಸರತಿಸಾಲಿನಲ್ಲಿ ನಿಲ್ಲುವುದು ತಪ್ಪಲಿದೆ, ಎಂದು ಎಂದು ತೋಟಗಾರಿಕೆ ಇಲಾಖೆ ನಿರ್ದೇಶಕ ಡಿ.ಎಸ್. ರಮೇಶ್ ತಿಳಿಸಿದರು.

**ಹಣ ಹಿಂಪಡೆಯಲು ಅವಕಾಶವಿಲ್ಲ:** ಆನ್‌ಲೈನ್‌ನಲ್ಲಿ ಒಂದು ಬಾರಿ ತಮಗೆ ಬೇಕಾದ ದಿನಾಂಕ, ಪ್ರವೇಶದಾರರ ಸಂಖ್ಯೆ ನಮೂದಿಸಿ ಹಣ ಪಾವತಿಸಿದರೆ ಮತ್ತೆ ಅದನ್ನು ಹಿಂಪಡೆಯಲು ಅವಕಾಶವಿಲ್ಲ. ಫಲಪುಷ್ಪ ಪ್ರದರ್ಶನವು ಆ.18ರವರೆಗೆ ನಡೆಯುತ್ತದೆ. ಪ್ರದರ್ಶನದ ಅವಧಿ ಬೆಳಗ್ಗೆ 9 ರಿಂದ ಸಂಜೆ 6.30ರವರೆಗೆ.

**ಪ್ರವೇಶ ಶುಲ್ಕ:** ಸಾಮಾನ್ಯ ದಿನಗಳಲ್ಲಿ ವಯಸ್ಕರಿಗೆ 80 ರೂ. ರಜಾ ದಿನಗಳಲ್ಲಿ 100 ರೂ., 12 ವರ್ಷದೊಳಗಿನ ಮಕ್ಕಳಿಗೆ ಪ್ರದರ್ಶನಗಳ ಎಲ್ಲಾ ದಿನಗಳಲ್ಲಿ 30 ರೂ. ಸಮವಸ್ತ್ರ ಧರಿಸಿ ಬರುವ ಶಾಲಾ ಮಕ್ಕಳಿಗೆ (1ರಿಂದ 10ನೇ ತರಗತಿ) ಮಾತ್ರ ಉಚಿತ ಪ್ರವೇಶ ಕಲ್ಪಿಸಲಾಗುವುದು. ವಾಯುವಿಹಾರಿಗಳಿಗೆ ಬೆಳಗ್ಗೆ 6 ರಿಂದ 9 ಗಂಟೆವರೆಗೆ ಟಿಕೆಟ್ ಪಡೆದು ವೀಕ್ಷಿಸಲು ಅವಕಾಶ ಕಲ್ಪಿಸಲಾಗುತ್ತಿದೆ. ನಂತರ ಬೆಳಗ್ಗೆ 9 ರಿಂದ ಸಂಜೆ 6.30ರವರೆಗೆ ಸಾರ್ವಜನಿಕರು ಟಿಕೆಟ್ ಪಡೆದು ವೀಕ್ಷಿಸಬಹುದು.

ಅಂತರಾಳದಿಂದ..
EDITORIAL

# ಒತ್ತುವರಿ ತೆರವು ಕಾರ್ಯಾಚರಣೆ; ಕೋಮುದ್ವೇಷದ ರಾಜಕಾರಣ



ಅಸ್ಸಾಂನ ಕೆಲವು ಜಿಲ್ಲೆಗಳಲ್ಲಿ ಒತ್ತುವರಿ ಭೂಮಿಯನ್ನು ತೆರವುಗೊಳಿಸಲು ಅಲ್ಲಿನ ರಾಜ್ಯ ಸರ್ಕಾರ ನಡೆಸುತ್ತಿರುವ ಕಾರ್ಯಾಚರಣೆಯು, ಮುಸ್ಲಿಂ ಸಮುದಾಯವನ್ನು ಗುರಿ ಮಾಡಿಕೊಂಡಿರುವುದು ಸ್ಪಷ್ಟವಾಗಿದೆ. ರಾಜ್ಯದಾದ್ಯಂತ ಎಲ್ಲಾ ಸಮುದಾಯಗಳ ಜನರೂ ಸರ್ಕಾರಿ ಭೂಮಿ ಹಾಗೂ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿದ್ದಾರೆ. ಸರ್ಕಾರದ ಕಂದಾಯ ಭೂಮಿ, ಗೋಮಾಳ ಹಾಗೂ ಅರಣ್ಯ ಪ್ರದೇಶಗಳಲ್ಲಿ ನಡೆದಿರುವ ಒತ್ತುವರಿಯನ್ನು ತೆರವುಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಸರ್ಕಾರ ಹೇಳಿದೆ. ಮನುಷ್ಯ ಹಾಗೂ ವನ್ಯಮೃಗಗಳ ನಡುವಣ ಸಂಘರ್ಷವನ್ನು ಕಡಿಮೆ ಮಾಡಲು ಸಹಕಾರಿ ಆಗುವಂತೆ ಒತ್ತುವರಿಯನ್ನು ತೆರವುಗೊಳಿಸಲು ಗುವಾಹಟಿ ಹೈಕೋರ್ಟ್ ನೀಡಿರುವ ನಿರ್ದೇಶನದ ಮೇರೆಗೆ ತೆರವು ಕಾರ್ಯಾಚರಣೆ ನಡೆಯುತ್ತಿದೆ ಎಂದು ಹೇಳಲಾಗಿದೆ.

**ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ಅವರು ತಮ್ಮ ತಾರತಮ್ಯ ಧೋರಣೆಯನ್ನೇ ಸಾರ್ವಜನಿಕ ನೀತಿಯನ್ನಾಗಿ ಅನುಸರಿಸುತ್ತಿರುವಂತಿದೆ. ಸ್ಥಳೀಯರಿಂದ ಆಗಿರುವ ಒತ್ತುವರಿ ಅಪರಾಧವಲ್ಲ ಎಂದು ಹೇಳಿರುವ ಅವರು, ವಲಸಿಗ ಮುಸ್ಲಿಮರನ್ನು ಮಾತ್ರ ಒಕ್ಕಲೆಬ್ಬಿಸುವುದಾಗಿ ಹೇಳಿದ್ದಾರೆ.**

ಆದರೆ, ಕೆಲವು ನಿರ್ದಿಷ್ಟ ಪ್ರದೇಶಗಳು ಹಾಗೂ ಕುಟುಂಬಗಳನ್ನು ಗುರಿಯಾಗಿಸಿಕೊಂಡು ಕಾರ್ಯಾಚರಣೆ ನಡೆಯುತ್ತಿರುವುದು, ಕ್ಷಿಪ್ರಗತಿಯಲ್ಲಿ ತೆರವು ಪ್ರಕ್ರಿಯೆ ನಡೆಯುತ್ತಿರುವುದು, ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ಅವರಿಗೆ ಕೋಮು ಉದ್ದೇಶ ಇರುವುದರ ಸ್ಪಷ್ಟ ಸೂಚನೆಯಾಗಿದೆ. ಒತ್ತುವರಿ ಭೂಮಿಯನ್ನು ತೆರವುಗೊಳಿಸುವ ಕಾರ್ಯಾಚರಣೆ 2021ರಿಂದಲೂ ನಡೆಯುತ್ತಿದೆ. ಕಾರ್ಯಾಚರಣೆಯನ್ನು ರಾಜಕೀಯ ಉದ್ದೇಶಗಳಿಗಾಗಿ ಈಗ ಇದ್ದಕ್ಕಿದ್ದಂತೆ ತೀವ್ರಗೊಳಿಸಲಾಗಿದೆ. ಪರಿಸರ ಸಂರಕ್ಷಣೆ ಹಾಗೂ ಭೂಮಿ ನಿರ್ವಹಣೆಯ ಕಾಳಜಿಯಿಂದ ಹೈಕೋರ್ಟ್ ನೀಡಿರುವ ನಿರ್ದೇಶನ ವನ್ನು, ಅಕ್ರಮ ವಲಸೆಗಾರರು ಎಂದು ಗುರ್ತಿಸಲಾಗುವ ಹಾಗೂ ಬೆಂಗಾಲಿ ಮಾತನಾಡುವ ಮುಸ್ಲಿಮರನ್ನು ಹತ್ತಿಕ್ಕಲು ಸರ್ಕಾರ ಬಳಸುತ್ತಿದೆ. ಮುಸ್ಲಿಂ ಸಮುದಾಯ ಗಣನೀಯ ಪ್ರಮಾಣದಲ್ಲಿರುವ ಪ್ರದೇಶಗಳನ್ನು ಗುರ್ತಿಸಿ ಕಾರ್ಯಾಚರಣೆ ನಡೆಸಲಾಗುತ್ತಿದೆ. ಒತ್ತುವರಿದಾರರು ಎಂದು ಗುರ್ತಿಸ ಲಾಗಿರುವ ನಾಗರಿಕರು, ಪ್ರಾಕೃತಿಕ ವಿಕೋಪಗಳಲ್ಲಿ ತಮ್ಮ ಮನೆಗಳನ್ನು ಕಳೆದುಕೊಂಡವರಾಗಿದ್ದಾರೆ ಹಾಗೂ ಲಭ್ಯವಿರುವ ಖಾಲಿ ಜಾಗಗಳಲ್ಲಿ ವಸತಿ ವ್ಯವಸ್ಥೆ ಮಾಡಿಕೊಂಡಿದ್ದಾರೆ. ಒತ್ತುವರಿ ಕಾರ್ಯಾಚರಣೆಯ ನಂತರ ಇವರಲ್ಲಿ ಬಹುತೇಕರಿಗೆ ವಾಸಿಸಲು ಮನೆ ಇಲ್ಲದಂತಾಗಿದೆ ಹಾಗೂ ಅವರ ಜೀವನೋಪಾಯದ ದಾರಿಗಳೂ ಮುಚ್ಚಿ ಹೋಗಿವೆ. ವಾಸಸ್ಥಳಕ್ಕೆ ಸಂಬಂಧಿಸಿದಂತೆ ಅಧಿಕೃತ ದಾಖಲೆಗಳನ್ನು ಹೊಂದಿರುವ ಹಾಗೂ ದಶಕಗಳಿಂದ ವಾಸಿಸುತ್ತಿರುವ ಸ್ಥಳದಿಂದ ನಿರ್ದಿಷ್ಟ ಸಮುದಾಯಕ್ಕೆ ಸೇರಿದವರನ್ನು ಒಕ್ಕಲೆಬ್ಬಿಸಿ ಬೀದಿಪಾಲು ಮಾಡಲಾಗಿದೆ. ಯಾವುದೇ ಸರ್ಕಾರಿ ಕಾರ್ಯಾಚರಣೆ, ಅದೆಷ್ಟೇ ಆಡಳಿತಾತ್ಮಕ ಹಾಗೂ ಕಾನೂನುಬದ್ಧ ಆಗಿದ್ದರೂ, ಮಾನವೀಯ ಸ್ಪಂದನಗಳನ್ನು ಹೊಂದಿರುವುದು ಅಗತ್ಯ ಅಂಥ ಮಾನವೀಯ ಆಯಾಮ ಅಸ್ಸಾಂನಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಇಲ್ಲವಾಗಿದೆ.

ಜನರ ನಡುವೆ ತಾರತಮ್ಯ ಎಸಗುವಂತೆ ಸರ್ಕಾರದ ನೀತಿ ಇರಬಾರದು. ಒತ್ತುವರಿ ಮಾಡಿದವರು ಸ್ಥಳೀಯರಾದ ಮಾತ್ರಕ್ಕೆ ಅದು ಕಾನೂನುಬದ್ಧವೂ ಆಗುವುದಿಲ್ಲ. ಒಕ್ಕಲೆಬ್ಬಿಸಿದ ಜನಕ್ಕೆ ಆಶ್ರಯ ನೀಡುವುದು ಸೇರಿದಂತೆ ಯಾವುದೇ ರೀತಿಯ ನೆರವು ನೀಡಬಾರದೆಂದು ಮುಖ್ಯಮಂತ್ರಿ ಜನರಿಗೆ ಕರೆ ನೀಡಿದ್ದಾರೆ. ಅಸ್ಸಾಂನ ಕಾನೂನುಬದ್ಧ ನಿವಾಸಿಗಳು ಯಾರು ಹಾಗೂ ಅತಿಕ್ರಮಣಕಾರರು ಯಾರು ಎನ್ನುವುದನ್ನು ಸರ್ಕಾರ ಮತ್ತು ಅಧಿಕಾರಿಗಳು ತೀರ್ಮಾನಿಸುತ್ತಿದ್ದಾರೆ.

ಭೂಮಿ ಜಿಹಾದ್ ನಿರ್ದಿಷ್ಟ ಧರ್ಮಕ್ಕೆ ಸಂಬಂಧಿಸಿದ ಜನರಿಂದ ಜನಸಂಖ್ಯಾ ಆಕ್ರಮಣಶೀಲತೆ' ಎನ್ನುವ ಪ್ರಚೋದನಕಾರಿ ಪದಗಳನ್ನು ಮುಖ್ಯಮಂತ್ರಿ ಬಳಸಿದ್ದಾರೆ. ಮುಖ್ಯಮಂತ್ರಿ ಬಳಸುತ್ತಿರುವ ಭಾಷೆ ಹಾಗೂ ಇಡೀ ತೆರವು ಕಾರ್ಯಾಚರಣೆ ಪ್ರಕ್ರಿಯೆಯು ಇತ್ತೀಚಿನ ವರ್ಷಗಳಲ್ಲಿ ರಾಜ್ಯ ಸರ್ಕಾರ ಅನುಸರಿಸುತ್ತಿರುವ ಮುಸ್ಲಿಂ ವಿರೋಧಿ ಧೋರಣೆಯ ಭಾಗವಾಗಿವೆ. 2026ರಲ್ಲಿ ಅಸ್ಸಾಂನಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದೆ.

ಆ ಚುನಾವಣೆಯನ್ನು ಗಮನದಲ್ಲಿ ಇಟ್ಟುಕೊಂಡು ನಡೆಯುತ್ತಿರುವ ರಾಜಕೀಯಪ್ರೇರಿತ ಕಾರ್ಯಾಚರಣೆಯ ರೂಪದಲ್ಲಿ ಅಲ್ಲಿನ ಪ್ರಸಕ್ತ ವಿದ್ಯಮಾನಗಳನ್ನು ಗಮನಿಸಬಹುದು. ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳಲ್ಲಿ ವಾಸಸ್ಥಳದ ಹಕ್ಕೂ ಒಂದಾಗಿದೆ. ಆ ಹಕ್ಕನ್ನು, ಸಂಕುಚಿತ ರಾಜಕೀಯ ಕಾರಣಗಳಿಗಾಗಿ ಸರ್ಕಾರ ಕಿತ್ತುಕೊಳ್ಳಬಾರದು.

# ಬೇಷರತ್ತಾಗಿ ಕ್ಷಮೆಯಾಚಿಸಿ; ಇಲ್ಲದಿದ್ದರೆ ಕಾನೂನು ಕ್ರಮ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗೆ, ಮಾಲೆಗಾಂವ್ ಬಾಂಬ್ ಸ್ಫೋಟ ಪ್ರಕರಣದ ತೀರ್ಪು ಪ್ರಕಟವಾಯಿತು. ಅದರ ನಂತರ, ಕೇಸರಿ ಭಯೋತ್ಪಾದನೆಯ ಕಾಂಗ್ರೆಸ್ ಪಿತೂರಿ ಬಹಿರಂಗವಾಯಿತು. ಇದರ ಸಾರಾಂಶವನ್ನು ನೀಡುತ್ತಾ, ಮಾಜಿ ಕಾಂಗ್ರೆಸ್ ಮುಖ್ಯಮಂತ್ರಿ ಪೃಥ್ವಿರಾಜ್ ಚವ್ಹಾಣ್ ಸನಾತನ ಧರ್ಮವನ್ನು ಮತ್ತೊಮ್ಮೆ ಟೀಕಿಸಿದರು, ಮೊದಲು, ಇದನ್ನು ಕೇಸರಿ ಭಯೋತ್ಪಾದನೆ ಎಂಬುದರ ಬದಲು 'ಸನಾತನೀ ಭಯೋತ್ಪಾದನೆ' ಕರೆಯಿರಿ ಎಂದು ಹೇಳಿ ಸನಾತನ ಧರ್ಮವನ್ನು ಪುನಃ ಟೀಕಿಸಿದರು. ಇದರ ಬಗ್ಗೆ ಸ್ಪಷ್ಟೀಕರಣ ನೀಡುವಾಗ ಅವರು 'ನಾನು ಧರ್ಮವನ್ನು ಅಲ್ಲ, ಸನಾತನ ಸಂಸ್ಥೆಯನ್ನು ಭಯೋತ್ಪಾದಕ ಸಂಘಟನೆ ಕರೆದೆ' ಎಂದು ಹೇಳಿದರು. ಈ ಹೇಳಿಕೆ ಸುಳ್ಳು, ಆಧಾರರಹಿತ ಮತ್ತು ದಾರಿತಪ್ಪಿಸುವಂತಿದೆ ಮತ್ತು ಈ ಕುರಿತು, ಸನಾತನ ಸಂಸ್ಥೆಯ ವಿಶ್ವಸ್ಥರಾದ ಶ್ರೀ ವೀರೇಂದ್ರ ಮರಾಠೆ ಪರವಾಗಿ ಚವ್ಹಾಣ್ ಅವರಿಗೆ 10 ಕೋಟಿ ರೂ. ಮಾನನಷ್ಟ ಮೊಕದ್ದಮೆ



ನೋಟಿಸ್ ಕಳುಹಿಸಲಾಗಿದೆ.

ಅಲ್ಲದೆ, ಪೃಥ್ವಿರಾಜ್ ಚವ್ಹಾಣ್ ಸನಾತನ ಸಂಸ್ಥೆಗೆ ಬೇಷರತ್ತಾಗಿ ಕ್ಷಮೆಯಾಚಿಸಬೇಕು ಅಥವಾ ಕಾನೂನು ಕ್ರಮ ಎದುರಿಸಲು ಸಿದ್ಧರಾಗಿರಬೇಕು ಎಂದು ಸನಾತನ ಸಂಸ್ಥೆಯ ವಕ್ತಾರ ಶ್ರೀ ಅಭಯ್ ವರ್ತಕ್ ಎಚ್ಚರಿಸಿದ್ದಾರೆ.

ಈ ನೋಟಿಸ್‌ನಲ್ಲಿ, ಪೃಥ್ವಿರಾಜ್ ಚವ್ಹಾಣ್ 15 ದಿನಗಳಲ್ಲಿ ಲಿಖಿತವಾಗಿ ಕ್ಷಮೆಯಾಚಿಸಬೇಕು, ಮೂಲ ಸಂದರ್ಶನದಂತೆಯೇ ಪ್ರಚಾರದೊಂದಿಗೆ ಕ್ಷಮೆಯಾಚನೆಯನ್ನು ಪ್ರಕಟಿಸಬೇಕು, ಭವಿಷ್ಯದಲ್ಲಿ ಯಾವುದೇ ಮಾನನಷ್ಟ ಹೇಳಿಕೆಗಳನ್ನು ನೀಡಬಾರದು ಕಾನೂನು ವೆಚ್ಚಗಳಿಗೆ ಪರಿಹಾರವಾಗಿ 10,000 ರೂ.ಗಳನ್ನು ಪಾವತಿಸಬೇಕು.

ಸಂಸ್ಥೆಯ ಗೌರವ ಕಾನೂನು ಸಲಹೆಗಾರ ಮತ್ತು ಬಾಂಬೆ ಹೈಕೋರ್ಟ್‌ನ ವಕೀಲ ರಾಮದಾಸ್ ಕೇಸರ್ಕರ್ ಅವರು, ಚವ್ಹಾಣ್ ಅವರ ಹೇಳಿಕೆಯು ಸನಾತನ ಸಂಸ್ಥೆಯ ಪ್ರತಿಷ್ಠೆಗೆ ಧಕ್ಕೆ ತಂದಿದೆ ಮತ್ತು ಸಾವಿರಾರು ಸಾಧಕರ ಭಾವನೆಗಳಿಗೆ ನೋವುಂಟು ಮಾಡಿದೆ ಎಂದು ನೋಟಿಸ್‌ನಲ್ಲಿ ತಿಳಿಸಿದ್ದಾರೆ. ಈ ನೋಟಿಸ್ ಸಿಕ್ಕ ನಂತರವೂ ಚವ್ಹಾಣ್ ಪ್ರತಿಕ್ರಿಯಿಸದಿದ್ದರೆ, ಅವರ ವಿರುದ್ಧ ಕ್ರಿಮಿನಲ್ ಮತ್ತು ಸಿವಿಲ್ ಮೊಕದ್ದಮೆಗಳನ್ನು ಹೂಡಲಾಗುವುದು. ಇದರ ಬಗ್ಗೆ ಹೆಚ್ಚಿನ ಮಾಹಿತಿ ನೀಡಿದ ಶ್ರೀ ಅಭಯ್ ವರ್ತಕ್, ಪೃಥ್ವಿರಾಜ್ ಚವ್ಹಾಣ್ ಕೇಸರಿ ಮಹಾರಾಷ್ಟ್ರದ ಮರಾಠಿ ಸಂಸ್ಕೃತಿಯ, ಛತ್ರಪತಿ ಶಿವಾಜಿ ಮಹಾರಾಜರ, ಸಂತ ಜ್ಞಾನೇಶ್ವರರಿಂದ ಹಿಡಿದು ಎಲ್ಲಾ ಸಂತರು ವಾರಕರಿಗಳ ಪವಿತ್ರ ಕೇಸರಿ ಎಂದು ಹೇಳಿ ಎಂದು ಹೇಳಿದರು. ಆದ್ದರಿಂದ, ಯಾರೂ ಇದನ್ನು ಕೇಸರಿ ಭಯೋತ್ಪಾದನೆ ಎಂದು ಕರೆಯಬಾರದು ಎಂದು ಅವರು ಕಾಂಗ್ರೆಸ್ ನಾಯಕರಿಗೆ ಮನವಿ ಮಾಡುತ್ತಿದ್ದಾರೆ ಆದರೆ ಮಾಲೆಗಾಂವ್ ಘಟನೆ ನಡೆದಾಗ, ಕಾಂಗ್ರೆಸ್ ನಾಯಕರಾದ ಪಿ. ಚಿದಂಬರಂ, ದಿಗ್ವಿಜಯ್ ಸಿಂಗ್, ಸುಶೀಲ್ ಕುಮಾರ್ ಶಿಂಧೆ, ಇತರ ನಾಯಕರು ಇದನ್ನು ಕೇಸರಿ ಭಯೋತ್ಪಾದನೆ ಎಂದು ಕರೆದು ಹಿಂದೂಗಳನ್ನು ಗುರಿಯಾಗಿಸಿಕೊಂಡರು. ಕೇಸರಿ ಛತ್ರಪತಿಗೆ, ಸಂತರಿಗೆ ಸೇರಿದ್ದು ಎಂದು ಚವ್ಹಾಣ್‌ಗೆ ಆಗ ಅರಿವಾಗಲಿಲ್ಲವೇ ಅವರು ಇಷ್ಟು ವರ್ಷಗಳಿಂದ ನಿದ್ರಿಸುತ್ತಿದ್ದರೆ ಎಂದು ಪ್ರಶ್ನಿಸಿದರು.

# ರಕ್ಷಾ ಬಂಧನ

ವಿಶ್ವಾಸ್.ಡಿ.ಗೌಡ

■ ಉದಯವಾಹಿನಿ, ವಿಶೇಷ



ರಕ್ಷಾಬಂಧನ ಹಬ್ಬದಂದು ಸಹೋದರನು ಸಹೋದರಿಯ ಮನೆಗೆ ಹೋಗಬೇಕು ಸಹೋದರಿಯು ಸಹೋದರನ ಆರತಿ ಬೆಳಗಿ, ನಿರಪೇಕ್ಷವಾಗಿ ರಾಖಿ ಕಟ್ಟಬೇಕು ಸಹೋದರಿಯು ಸಹೋದರನಿಗೆ ನಮಸ್ಕರಿಸಿ ಆಶೀರ್ವಾದ ಪಡೆಯಬೇಕು ಈ ದಿನವು ಸಹೋದರ-ಸಹೋದರಿಯರ ನಡುವಿನ ಕೊಡ-ಕೊಳ್ಳುವಿಕೆಯ ಲೆಕ್ಕಾಚಾರ ಕಡಿಮೆ ಮಾಡಲು ಪೂರಕವಾಗಿರುತ್ತದೆ. ಸಹೋದರಿಯು ನಿಸ್ವಾರ್ಥವಾಗಿ ರಾಖಿಯನ್ನು ಕಟ್ಟಿದರೆ ಈ ಲೆಕ್ಕಾಚಾರ ಇನ್ನಷ್ಟು ವೇಗವಾಗಿ ಕಡಿಮೆಯಾಗುತ್ತದೆ. ಸಹೋದರನು ಸಹೋದರಿಗೆ ಸಾತ್ತ್ವಿಕ ಉಡುಗೊರೆಯನ್ನು ನೀಡಬೇಕು ರಕ್ಷಾ ಬಂಧನದಂದು ರಾಖಿ ಕಟ್ಟಿಸಿಕೊಂಡು ಸಹೋದರನು ಸಹೋದರಿಗೆ ಏನಾದರೂ ಉಡುಗೊರೆ ನೀಡುತ್ತಾನೆ. ಇದರಿಂದ ಇಬ್ಬರಿಗೂ ಪರಸ್ಪರರ ನೆನಪಾಗುತ್ತದೆ. ಸಹೋದರಿಯ ಪ್ರೀತಿಗೆ ಬೆಲೆಕಟ್ಟಲು ಸಾಧ್ಯವಿಲ್ಲ ಆದರೆ ಪ್ರೀತಿಯ ಸಂಕೇತವೆಂದು ಉಡುಗೊರೆ ನೀಡಿ ಸ್ವಲ್ಪ ಮಟ್ಟಿಗೆ ಸಹೋದರಿಗೆ ಆನಂದ ನೀಡಬಹುದು. ಉಡುಗೊರೆ ಕೊಡುವಾಗ, ಸಹೋದರನ ಮನಸ್ಸಿನಲ್ಲಿರುವ ಈಶ್ವರನ ಬಗ್ಗೆ ಇರುವ ಭಾವವು ಸಹೋದರಿಯ ಮೇಲೆಯೂ ಪರಿಣಾಮ ಬೀರುತ್ತದೆ.

ಆದುದರಿಂದ ಸಹೋದರಿಯು ಉಡುಗೊರೆಯನ್ನು ಕೇಳಿ ಪಡೆದುಕೊಳ್ಳದೆ, ಸಹೋದರನು ಸ್ವೇಚ್ಛೆಯಿಂದ ನೀಡಿರುವುದನ್ನು ಸ್ವೀಕರಿಸಿದರೆ ಒಳ್ಳೆಯದಾಗುತ್ತದೆ. ಸಾತ್ತ್ವಿಕ ವಸ್ತುಗಳಿಂದ ಜೀವದ ಮೇಲೆ ವ್ಯಾವಹಾರಿಕ ಪರಿಣಾಮವಾಗುವುದಿಲ್ಲ. ಸಾತ್ತ್ವಿಕ ವಸ್ತುಗಳು ಕೊಡುವ ಜೀವಕ್ಕೆ 20% ಮತ್ತು ಸ್ವೀಕರಿಸುವ ಜೀವಕ್ಕೆ 18% ಲಾಭವಾಗುತ್ತದೆ. ಸಾತ್ತ್ವಿಕ ಕೃತಿಗಳಿಂದ ಕೊಡ-ಕೊಳ್ಳುವ ಲೆಕ್ಕ ಕಡಿಮೆಯಾಗಿ, ಹೊಸ ಲೆಕ್ಕಾಚಾರ ನಿರ್ಮಾಣವಾಗುವುದಿಲ್ಲ.

**ಪ್ರಾರ್ಥನೆ ಮಾಡಿ**

ಏನ ಬದ್ಧೋ ಬಲೀ ರಾಜಾ ದಾನವೇಂದ್ರೋ ಮಹಾಬಲಃ।
ತೇನ ತ್ವಾಮಪಿ ಬಧ್ನಾಮಿ ರಕ್ಷೇ ಮಾ ಚಲ ಮಾ ಚಲ॥

**ಅರ್ಥ** : ಮಹಾಬಲಿ ಮತ್ತು ದಾನವೇಂದ್ರನಾದ ಬಲಿರಾಜನು ಯಾವುದರಿಂದ ಬದ್ಧನಾದನೋ, ಆ ರಾಖಿಯಿಂದ ನಾನು ನಿನ್ನನ್ನೂ ಕಟ್ಟುತ್ತೇನೆ. ಎಲೈ ರಾಖಿಯೇ, ನೀನು ವಿಚಲಿತಳಾಗಬೇಡ. ಸಹೋದರಿಯು ಸಹೋದರನ ಕಲ್ಯಾಣಕ್ಕಾಗಿ ಮತ್ತು ಸಹೋದರನು ಸಹೋದರಿಯ ರಕ್ಷಣೆಗಾಗಿ ಪ್ರಾರ್ಥನೆಯನ್ನು ಮಾಡುವುದರೊಂದಿಗೆ ಇಬ್ಬರೂ ರಾಷ್ಟ್ರ ಮತ್ತು ಧರ್ಮರಕ್ಷಣೆಗಾಗಿ ನಮ್ಮಿಂದ ಪ್ರಯತ್ನವಾಗಲಿ, ಎಂದು ಈಶ್ವರನಲ್ಲಿ ಪ್ರಾರ್ಥನೆಯನ್ನು ಮಾಡಬೇಕು. ರಕ್ಷಾಬಂಧನ ಹಬ್ಬದಂದು ಇವನ್ನು ಮಾಡಬೇಡಿ ಸಹೋದರನಿಗೆ ಅಸಾತ್ತ್ವಿಕ ಅಥವಾ ದೇವತೆಗಳ ಚಿತ್ರವಿರುವ ರಾಖಿ ಕಟ್ಟಬೇಡಿ ಇತ್ತೀಚೆಗೆ ರಾಖಿಯ ಮೇಲೆ ಓಂ ಅಥವಾ ದೇವತೆಗಳ ಚಿತ್ರಗಳಿರುತ್ತವೆ.

ರಾಖಿಯನ್ನು ಉಪಯೋಗಿಸಿದ ನಂತರ ಅದು ಆಚೀಚೆ ಬಿದ್ದು ದೇವತೆಗಳ ಅಥವಾ ಧರ್ಮಪ್ರತೀಕಗಳ ವಿಡಂಬನೆಯಾಗುತ್ತದೆ. ಇದರಿಂದ ಪಾಪ ತಗಲುತ್ತದೆ.

ಇದನ್ನು ತಡೆಗಟ್ಟಲು ರಾಖಿಯನ್ನು ನೀರಿನಲ್ಲಿ ವಿಸರ್ಜಿಸಬೇಕು. ಅದೇ ರೀತಿ ಅಸಾತ್ತ್ವಿಕ ನಕ್ಷೆಯಿರುವ ರಾಖಿಗಳನ್ನೂ ಉಪಯೋಗಿಸಬೇಡಿ. ಸಹೋದರಿಯು 'ತನಗೆ ಇದು ಬೇಕು, ಅದು ಕೊಡಿಸಬೇಕು' ಎಂಬ ಅಪೇಕ್ಷೆ ಇಟ್ಟುಕೊಳ್ಳಬಾರದು ಇತ್ತೀಚೆಗೆ ಸಹೋದರಿಯರು ರಾಖಿ ಕಟ್ಟಿಸಿಕೊಂಡ ಮೇಲೆ ಇದನ್ನೇ ಕೊಡಬೇಕು ಎಂದು ಮೊದಲೇ ಸಹೋದರನಿಗೆ ತಿಳಿಸಿರುತ್ತಾರೆ. ಈ ರೀತಿ ಸಹೋದರಿಯು ತನ್ನ ಸಹೋದರನಿಂದ ಯಾವುದಾದರೊಂದು ವಸ್ತುವನ್ನು ಪಡೆಯುವ ಅಪೇಕ್ಷೆಯನ್ನು ಇಟ್ಟುಕೊಂಡರೆ, ಆ ದಿನ ಪ್ರಾಪ್ತವಾಗುವ ಆಧ್ಯಾತ್ಮಿಕ ಲಾಭದಿಂದ ವಂಚಿತಳಾಗುತ್ತಾಳೆ. ಮಾತ್ರವಲ್ಲ, ಅಪೇಕ್ಷೆ ಇಟ್ಟುಕೊಂಡು ವಸ್ತು ಪಡೆದರೆ ಅದರಿಂದ 3 ಪಟ್ಟು ಹೆಚ್ಚು ಕೊಡ-ಕೊಳ್ಳುವ ಲೆಕ್ಕ ನಿರ್ಮಾಣವಾಗುತ್ತದೆ. ಈ ದಿನದಂದು ವಾತಾವರಣದಲ್ಲಿರುವ ಪ್ರೇಮ ಮತ್ತು ಆನಂದದ ಲಹರಿಗಳನ್ನು ಅನುಭವಿಸಲು ಆ ಅಪೇಕ್ಷೆ ಅಡ್ಡ ಬರುತದೆ. ಆಧ್ಯಾತ್ಮಿಕ ದೃಷ್ಟಿಯಲ್ಲಿ ಕೊಡುಕೊಳ್ಳುವ ಲೆಕ್ಕವನ್ನು ಕಡಿಮೆ ಮಾಡಲು ಈ ದಿನವು ಮಹತ್ವದ್ದಾಗಿದೆ.

ಅಶುಭ ಅಥವಾ ಭದ್ರಾಕಾಲದಲ್ಲಿ ರಾಖಿ ಕಟ್ಟಬೇಡಿ ಶನಿಯಂತೆಯೇ ಶನಿಯ ಸಹೋದರಿಯಾದ ಭದ್ರೆಯ ದೃಷ್ಟಿಯಿಂದ ಹಾನಿಯುಂಟಾಗುತ್ತದೆ.

ಭದ್ರೆಯ ಕುದೃಷ್ಟಿಯಿಂದ ಕುಲಕ್ಕೆ ಹಾನಿಯುಂಟಾಗುವ ಸಾಧ್ಯತೆಯಿದೆ. ಆದುದರಿಂದ ಭದ್ರಾಕಾಲದಲ್ಲಿ ರಾಖಿಯನ್ನು ಕಟ್ಟಬಾರದು (ಆಧಾರ : ಧರ್ಮಸಿಂಧು). ರಾವಣನು ಭದ್ರಾಕಾಲದಲ್ಲಿ ಸೂರ್ಪನಖಿಯಿಂದ ರಾಖಿ ಕಟ್ಟಿಸಿಕೊಂಡನು, ಆದುದರಿಂದ ಅದೇ ವರ್ಷ ಅವನ ಸಂಪೂರ್ಣ ಕುಲದ ನಾಶವಾಯಿತು ಎಂಬ ನಂಬಿಕೆಯಿದೆ. ಇತರ ಕೃತಿಗಳು ರಾಖಿಯನ್ನು ಕಟ್ಟಿಸಿಕೊಳ್ಳುವಾಗ ಸಹೋದರನು ಕುಳಿತುಕೊಳ್ಳುವ ಮಣೆಯ ಸುತ್ತಲೂ ಸಾತ್ವಿಕ ರಂಗೋಲಿಯನ್ನು ಬಿಡಿಸಬೇಕು. ಸಾತ್ವಿಕ ರಂಗೋಲಿಯಿಂದ ಸಾತ್ವಿಕ ಸ್ಪಂದನಗಳು ಪ್ರಕ್ಷೇಪಿತವಾಗುತ್ತವೆ. ಅದರಿಂದ ವಾತಾವರಣವು ಸಾತ್ವಿಕವಾಗುತ್ತದೆ.

ರಾಖಿಯನ್ನು ಕಟ್ಟಿದ ನಂತರ ಸಹೋದರನಿಗೆ ತುಪ್ಪದ ನೀಲಾಂಜನದಿಂದ ಆರತಿಯನ್ನು ಬೆಳಗಿಸುತ್ತಾರೆ. ತುಪ್ಪದ ದೀಪವು ಶಾಂತರೀತಿಯಲ್ಲಿ ಉರಿಯುತ್ತದೆ. ಅದರಿಂದ ಸಹೋದರನಲ್ಲಿ ಶಾಂತ ರೀತಿಯಲ್ಲಿ ವಿಚಾರ ಮಾಡುವ ಬುದ್ಧಿಯು ವೃದ್ಧಿಯಾಗುವಲ್ಲಿ ಸಹಾಯವಾಗುತ್ತದೆ.

ಆರತಿಯ ತಟ್ಟೆಯಲ್ಲಿ ದುಡ್ಡು ಅಥವಾ ಇತರ ಬೆಲೆಬಾಳುವ ವಸ್ತುಗಳನ್ನು ಇಡಬಾರದು. ಇಂತಹ ವಸ್ತುಗಳನ್ನು ಇಟ್ಟರೆ ಸಹೋದರಿಯ ಮನಸ್ಸಿನಲ್ಲಿ ಆ ದಿಕ್ಕಿನಲ್ಲಿ ಅಪೇಕ್ಷೆ ನಿರ್ಮಾಣವಾಗಿ ಅದೇ ಸಂಸ್ಕಾರ ಪ್ರಬಲವಾಗುತ್ತದೆ. ಇದರಿಂದ ಅವಳಲ್ಲಿ ರಜ ತಮ ಸಂಸ್ಕಾರಗಳ ಪ್ರಮಾಣ ಹೆಚ್ಚಾಗಿ ಅವಳಲ್ಲಿರುವ ಪ್ರೇಮವು ಕಡಿಮೆ ಆಗಿ ಸಹೋದರನ ಜೊತೆ ಕಲಹ ನಿರ್ಮಾಣವಾಗುತ್ತದೆ.



# ದ್ವೇಷ ಭಾಷಣ, ದ್ವೇಷ ಅಪರಾಧ ತಡೆ ಕಾಯಿದೆ

## 2025 ವಿರೋಧಿಸಿ ಪ್ರಮುಖ ಶಾಸಕರಿಗೆ ಮನವಿ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರವು ಮುಂಬರುವ ಮಳೆಗಾಲ ಅಧಿವೇಶನದಲ್ಲಿ ಜಾರಿಗೆ ತರಲು ಉದ್ದೇಶಿಸಿರುವ ಎರಡು ವಿವಾದಾತ್ಮಕ ಮಸೂದೆಗಳಾದ ಕರ್ನಾಟಕ ರೋಹಿತ್ ವೇಮುಲಾ ಬಿಲ್-2025 ಮತ್ತು ಕರ್ನಾಟಕ ದ್ವೇಷ ಭಾಷಣ ಹಾಗೂ ದ್ವೇಷ ಅಪರಾಧ ತಡೆ ಕಾಯಿದೆ-2025 ವಿರೋಧಿಸಿ, ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ನೇತೃತ್ವದಲ್ಲಿ ಅನೇಕ ಶಾಸಕರು, ಸಂಸದರಿಗೆ ಮನವಿ ಸಲ್ಲಿಸಲಾಯಿತು. ಈ ಮನವಿಯನ್ನು ಭಾಜಪದ ರಾಜ್ಯಾಧ್ಯಕ್ಷ ಶ್ರೀ ಬಿ. ವೈ. ವಿಜಯೇಂದ್ರ, ಸಂಸದ ತೇಜಸ್ವಿ ಸೂರ್ಯ, ಶಾಸಕರುಗಳಾದ ಗೋಪಾಲಯ್ಯ (ಮಹಾಲಕ್ಷ್ಮೀ ಲೇಔಟ್), ಸಿ.ಕೆ. ರಾಮಮೂರ್ತಿ (ಜಯನಗರ), ಎಸ್.ಆರ್. ವಿಶ್ವನಾಥ್ (ಯಲಹಂಕ), ಮುನಿರಾಜು (ದಾಸರಹಳ್ಳಿ), ಎಚ್.ಕೆ. ಸುರೇಶ್ (ಬೇಲೂರು) ಮತ್ತು ಹಲವು ವಿಧಾನ ಪರಿಷತ್ ಸದಸ್ಯರಿಗೆ ಸಲ್ಲಿಸಲಾಯಿತು.

**ಮಸೂದೆಗಳ ವಿರೋಧದ ಪ್ರಮುಖ ಅಂಶಗಳು :**

1. ಸಂವಿಧಾನ ಬದ್ಧ ಸಮಾನತೆಗೆ ಧಕ್ಕೆ: ರೋಹಿತ್ ವೇಮುಲಾ ಮಸೂದೆ ನಿರ್ದಿಷ್ಟ ಸಮುದಾಯಕ್ಕೆ ವಿಶೇಷ ಕಾನೂನು ರಕ್ಷಣೆ ನೀಡುವ ಮೂಲಕ, ಹಿಂದೂ ವಿದ್ಯಾರ್ಥಿಗಳನ್ನು ಉದ್ದೇಶಪೂರ್ವಕವಾಗಿ ಮೂಲೆಗುಂಪು ಮಾಡಲು ಪ್ರಯತ್ನಿಸುತ್ತದೆ.
2. ಶೈಕ್ಷಣಿಕ ಸಂಸ್ಥೆಗಳ ಸ್ವಾಯತ್ತತೆಗೆ ಧಕ್ಕೆ: ಮಸೂದೆ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರದ ಹಿಡಿತವನ್ನು ಹೆಚ್ಚಿಸುತ್ತದೆ ಹಾಗೂ ಭಿನ್ನಾಭಿಪ್ರಾಯದ ಮೇಲೆ ತಾರತಮ್ಯ ರೂಪಿಸುವ ಭೀತಿ ಉಂಟುಮಾಡುತ್ತದೆ.
3. ದ್ವೇಷ ಭಾಷಣ ಮಸೂದೆಯಲ್ಲಿ ವ್ಯಾಖ್ಯಾನ ಸ್ಪಷ್ಟವಿಲ್ಲ: ಹಿಂದುಳಿದ ವರ್ಗ, ಹಿಂದೂ ಸಂಘಟನೆಗಳ ಧ್ವನಿಯನ್ನು ದ್ವೇಷ ಭಾಷಣ ಎಂದು ಬಣ್ಣಿಸಿ ದಮನ ಮಾಡುವ ಸಾಧ್ಯತೆ ಇದೆ.
4. ಹಿಂದೂ ಧರ್ಮ ಪ್ರಚಾರದ ಮೇಲೆ ಪ್ರಭಾವ: ಹಿಂದುತ್ವ ಪರವಾದ ಚಟುವಟಿಕೆಗಳು, ಐತಿಹಾಸಿಕ ಅನ್ಯಾಯದ ವಿರುದ್ಧ ಧ್ವನಿ ಎತ್ತುವುದು ಅಪರಾಧವೆಂದು ಪರಿಗಣಿಸುವ ಸಾಧ್ಯತೆ.

**ಸಮಿತಿಯ ಬೇಡಿಕೆಗಳು**

- **1. ಮಸೂದೆಗಳನ್ನು ಸಾರ್ವಜನಿಕವಾಗಿ ತಿರಸ್ಕರಿಸಿ.**
- **2. ವಿಧಾನಸಭೆಯಲ್ಲಿ ಈ ಮಸೂದೆಗಳ ವಿರುದ್ಧ ಧ್ವನಿ ಎತ್ತಿ.**
- **3. ಮಸೂದೆಗಳ ಅಪಾಯಗಳನ್ನು ಸರಕಾರದ ಗಮನಕ್ಕೆ ತಂದು ತಡೆಯಿರಿ.**
- **4. ತಜ್ಞರ ಸಮಿತಿಯನ್ನು ರಚಿಸಿ ಸಮಗ್ರ ಪರಿಶೀಲನೆ ನಡೆಸಬೇಕು.**
- **5. ಭವಿಷ್ಯದ ಯಾವುದೇ ಮಸೂದೆ ಸಮಾನತೆ, ನೈಸರ್ಗಿಕ ನ್ಯಾಯ ಮತ್ತು ಸಂವಿಧಾನ ಸಿದ್ಧಾಂತಗಳಿಗೆ ಧಕ್ಕೆ ಉಂಟುಮಾಡಬಾರದು.**

**ಹೆಚ್ಚಿನ ಆತಂಕಕಾರಿ ಅಂಶಗಳು :** ಮಸೂದೆಗಳಲ್ಲಿ ನ್ಯಾಯಾಂಗ ಪ್ರಕ್ರಿಯೆಗಳ ಕೊರತೆ, ದುರುಪಯೋಗಕ್ಕೆ ಅವಕಾಶ, ಸಂವಿಧಾನದ 14ನೇ ವಿಧಿಗೆ ವಿರುದ್ಧವಾದ ತಾರತಮ್ಯ ಮತ್ತು ಜಾತಿಯ ಮೇಲೆ ವಿಭಜನೆ ಮಾಡುವ, ಹಿಂದೂಗಳ ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಅಪಾಯವಾಗುವ ಅಂಶಗಳು ಇದೆ.

ಹಿಂದೂ ಸಮುದಾಯದ ಧ್ವನಿಗೆ ಪ್ರತಿಧ್ವನಿಯಾಗಿ, ಈ ಮಸೂದೆಗಳನ್ನು ತಡೆಗಟ್ಟುವಲ್ಲಿ ನಿಷ್ಠೆ, ಧೈರ್ಯ ಹಾಗೂ ನ್ಯಾಯ ಪರ ಧೋರಣೆಯ ಅಗತ್ಯವಿದೆ ಎಂಬ ನಂಬಿಕೆಯಿಂದ ಈ ಮನವಿಯನ್ನು ಸಲ್ಲಿಸಲಾಗಿದೆ.

# ಆ.16ಕ್ಕೆ ವಿಶೇಷ ಸಂಪುಟ ಸಭೆ

• ಉದಯವಾಹಿನಿ, ಬೆಂಗಳೂರು

ಒಳಮೀಸಲಾತಿ ವರ್ಗೀಕರಣ ಸಂಬಂಧ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದ ನ್ಯಾ.ನಾಗಮೋಹನ್ ದಾಸ್ ವರದಿ ಸಂಪುಟದಲ್ಲಿ ಮಂಡನೆಯಾಗಿದೆ.

**ಕ್ಯಾಬಿನೆಟ್‌ನಲ್ಲಿ ನ್ಯಾ.ನಾಗಮೋಹನ್ ದಾಸ್ ವರದಿ ಮಂಡನೆ**

ಕ್ಯಾಬಿನೆಟ್‌ನಲ್ಲಿ ವರದಿ ಸ್ವೀಕಾರ ಮಾಡಿ ಯಾವುದೇ ಚರ್ಚೆ ನಡೆಸದೇ ಎಲ್ಲಾ ಸಚಿವರಿಗೂ ವರದಿ ಪ್ರತಿ ನೀಡಲು ಸೂಚಿಸಲಾಗಿದೆ. ಅಲ್ಲದೆ ಆ.16ರಂದು ವಿಶೇಷ ಸಂಪುಟ ಸಭೆ ಕರೆದಿದ್ದು, ಆ ಸಭೆಯಲ್ಲಿ ಮೀಸಲಾತಿ ಸಂಬಂಧ ತೀರ್ಮಾನ ತೆಗೆದುಕೊಳ್ಳುವ ಸಾಧ್ಯತೆ ಇದೆ.



ಸಂಪುಟ ಸಭೆಯಲ್ಲಿ ಮಂಡನೆಯಾದ ನ್ಯಾ.ನಾಗಮೋಹನ್ ದಾಸ್ ಶಿಫಾರಸ್ಸಿನ ಪ್ರಕಾರ 5 ವರ್ಗಗಳನ್ನ ಗುರುತಿಸಿದ್ದು, ಪ್ರವರ್ಗ ಎ ವರ್ಗಕ್ಕೆ 1% ಮೀಸಲಾತಿ, ಪ್ರವರ್ಗ ಬಿ (ಎಡ)ಗೆ 6% ಮೀಸಲಾತಿ, ಪ್ರವರ್ಗ ಸಿ(ಬಲ)ಗೆ 5%, ಪ್ರವರ್ಗ ಡಿಗೆ 4%, ಪ್ರವರ್ಗ ಇಗೆ 1% ಮೀಸಲಾತಿಗೆ ಶಿಫಾರಸು ಮಾಡಲಾಗಿದೆ. ಆದರೆ ಈ ವಿಚಾರದಲ್ಲಿ ಸಂಪುಟದ ಎಸ್‌ಸಿ ಸಮುದಾಯದ ಸಚಿವರಲ್ಲೇ ಭಿನ್ನಾಭಿಪ್ರಾಯ ಇದೆ ಎನ್ನಲಾಗಿದ್ದು, ಸಿದ್ದರಾಮಯ್ಯ ಅಡಕತ್ತರಿಯಲ್ಲಿ ಸಿಲುಕಿದ್ದಾರೆ.

# ರಾಮಾಯಣ



ಶ್ರೀರಾಮನು ಪಾದುಕೆಗಳನ್ನು ಕೊಟ್ಟು ಭರತನನ್ನು ಕಳುಹಿಸಿದ್ದು

• ಹಿಂದಿನ ಸಂಚಿಕೆಯಿಂದ

## 112 ನೆಯ ಅಧ್ಯಾಯ

ನಾನೂ ಹದಿನಾಲ್ಕು ವರುಷಗಳ ಪರ್ಯಂತ ಜಡೆ ನಾರುಬಟ್ಟೆಗಳನ್ನು ಧರಿಸಿ ಕೊಂಡು ಕಂದಮೂಲ ಫಲಾಹಾರಾದಿಗಳನ್ನು ಮಾಡಿಕೊಂಡು ನೀನು ಬರುವುದನ್ನೇ ನಿರೀಕ್ಷಿಸುತ್ತ ಅಯೋಧ್ಯಾಪಟ್ಟಣದ ಹೊರಗಿರುವೆನು. ಸಮಸ್ತ ರಾಜ್ಯಭಾರವನ್ನೂ ನಿನ್ನ ಪಾದುಕೆಗಳ ವಶಕ್ಕೆ ಒಪ್ಪಿಸಿ ಹದಿನಾಲ್ಕು ವರುಷಗಳ ಪರ್ಯಂತವೂ ವ್ರತಸ್ಥನಾಗಿರುವೆನು. ಹದಿನಾಲ್ಕನೆಯ ವರುಷವು

ಮೀರಕೂಡದೆಂದು ಇಚ್ಛೆ ಹೊಂದಿದ್ದರೆ ಸುವರ್ಣಮಯವಾದ ನಿನ್ನ ಪಾದುಕೆಗಳನ್ನು ಭರತನ ವಶಕ್ಕೆ ಕೊಡು. ಅವು ರಾಜ್ಯಭಾರವನ್ನು ವಹಿಸಿಕೊಂಡು ಸಮಸ್ತ ಪ್ರಜೆಗಳ ಯೋಗಕ್ಷೇಮಗಳನ್ನೂ ವಿಚಾರಿಸುವುವು' ಎಂದು ನನ್ನ ಪ್ರಾರ್ಥನೆಯನ್ನು ಮನ್ನಿಸಿ ನುಡಿದನು. ಶ್ರೀರಾಮನು ಹರ್ಷಪಟ್ಟು ಮೂಡಲು ಮುಖವಾಗಿ ನಿಂತು ಪಾದುಕೆಗಳನ್ನು ರಾಜ್ಯಪರಿಪಾಲನಕ್ಕೋಸ್ಕರ ನನ್ನ ವಶಕ್ಕೆ ಕೊಟ್ಟನು. ನಾನು ಆ ಪಾದುಕೆಗಳನ್ನು ತೆಗೆದುಕೊಂಡು ಆತನಿಂದ ಬೀಳ್ಕೊಂಡು ಅಯೋಧ್ಯಾ ಪಟ್ಟಣಕ್ಕೆ ತಿರುಗಿ ಹೋಗುತ್ತಿರುವೆನು ಎಂದು ಹೇಳಿದನು.

ಮಹಾತ್ಮನಾದ ಭರದ್ವಾಜಮುನೀಶ್ವರನು ಭರತ, ನಿಮ್ಮ ವಂಶದಲ್ಲಿ ಧರ್ಮ ನೀತಿ ಗುರುಭಕ್ತಿ, ವಿನಯಾದಿ ಗುಣಸಂಪತ್ತಿಯು ನೆಲೆಗೊಂಡಿರುವುದು. ಧರ್ಮವತ್ಸಲನಾದ ನಿನ್ನಂಥ ಪುತ್ರನನ್ನು ಪಡೆದು ದಶರಥಮಹಾರಾಜನು ಋಣಮುಕ್ತನಾದನು ಎಂದು ನುಡಿದನು.ಭರತನು ಆ ಮುನಿಗೆ ಪುನಃಪುನಃ ಪ್ರದಕ್ಷಿಣನಮಸ್ಕಾರಗಳನ್ನು ಮಾಡಿ ಆತನಿಂದ ಬೀಳ್ಕೊಂಡು ರಥಾರೂಢನಾಗಿ ಮಂತ್ರಿಗಳನ್ನು ಕೂಡಿಕೊಂಡು ಯಮುನಾನದಿಯನ್ನು ದಾಟಿ ಗಂಗಾತೀರಕ್ಕೆ ಬಂದನು.

ಆ ನದಿಯನ್ನು ಕಂಡು ಅಭಿವಂದಿಸಿ ಸಮಸ್ತ ಸೇನಾಸಮೇತನಾಗಿ ಗುಹನ ಶೃಂಗಿದೇರಪುರಕ್ಕೆ ಹೋದನು. ಅಲ್ಲಿಂದ ಆಯೋಧ್ಯಾಪಟ್ಟಣಕ್ಕೆ ಬಂದು ತಮ್ಮ ತಂದೆಯಾದ ದಶರಥರಾಯನಿಂದಲೂ ತಮ್ಮ ಹಿರಿಯ ಅಣ್ಣನಾದ ಶ್ರೀರಾಮನಿಂದಲೂ ಹೊರತಾದ ಆ ಪಟ್ಟಣವನ್ನು ಕಂಡು ದುಃಖಾಕ್ರಾಂತನಾಗಿ ತನ್ನ ಸಾರಥಿಯಾದ ಸುಮಂತ್ರನೊಡನೆ ಎಲೈ ಸುಮಂತ್ರ, ನರೇಂದ್ರನಿಲ್ಲದ ಈ ನಗರವು ಸಿಂಹವಿಲ್ಲದ ಗುಹೆಯಂತಿದೆ ಎಂದು ಹೇಳತೊಡಗಿದನು,

**ಭರತನ ಆಯೋಧ್ಯಾಪ್ರವೇಶ**

ತರುವಾಯ ಅತ್ಯಂತ ಕೀರ್ತಿಸಂಪನ್ನನಾದ ಭರತನು ಗಂಭೀರವೂ ಮನೋಹರವೂ ಆದ ಧ್ವನಿಯುಳ್ಳ ರಥವನ್ನೇರಿಕೊಂಡು ಅಯೋಧ್ಯಾಪಟ್ಟಣವನ್ನು ಪ್ರವೇಶಿಸಿದನು. ಆ ಪಟ್ಟಣವನ್ನು ನೋಡಿ ಸುಮಂತ್ರನನ್ನು ಕುರಿತು ಹೀಗೆ ನುಡಿದನು: ಎಲೈ ಸುಮಂತ್ರನೆ, ಈ ಪಟ್ಟಣವನ್ನು ನೋಡು, ಭಯಂಕರವಾಗಿದೆ. ಎಡೆಬಿಡದೆ ಸಂಚರಿಸುವ ಆನೆ ಕುದುರೆ ಮನುಷ್ಯರಿಂದಿಟ್ಟಣಿಸಿದ್ದ ಈ ಪಟ್ಟಣವು ಈಗ ಜನಸಂಚಾರವಿಲ್ಲದೆ ಬೆಕ್ಕು ಗೂಬೆ ಹದ್ದು ಮೊದಲಾದ ಅಮಂಗಳಕರವಾದ ಪ್ರಾಣಿಗಳಿಂದ ಪರಿಪೂರ್ಣವಾಗಿ ಅಂಧಕಾರದಿಂದ ಕೌಚಲ್ಪಟ್ಟು ನಕ್ಷತ್ರ ಪ್ರಕಾಶವಿಲ್ಲದಿರುವ ಕೃಷ್ಣಪಕ್ಷದ ರಾತ್ರಿಯಂತೆ ತೋರುತ್ತಿದೆ.

ಮುಂದುವರಿಯುವುದು...

# ರಮ್ಯ ನೃತ್ಯ ರೂಪಕ ಗುರುಕುಲದಲ್ಲಿ ಶ್ರೀಕೃಷ್ಣ

ಕಲಾ ಸಾಹಿತ್ಯ



ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಶ್ರೀಕೃಷ್ಣನ ಮುದ್ದು ರೂಪ- ಸಾಹಸ- ಲೀಲಾವಳಿಗಳ ಅದ್ಭುತ ಕಥಾನಕವೇ ನಮ್ಮ ಭಾರತೀಯ ಮಹಾ ಕಾವ್ಯಗಳಲ್ಲಿ ಒಂದು ಸುಂದರ ಸಾಂಸ್ಕೃತಿಕ ರೂಪಕ ಎನ್ನಬಹುದು. ಅನಂತ ಅರ್ಥ ವೈವಿಧ್ಯಗಳ ಸಾಗರ. ವರ್ಣರಂಜಿತ ಲೀಲಾ ವಿನೋದಗಳ ಆಗರ- ಕಥಾ ಕಣಜ. ಕೃಷ್ಣ ಎಂಬ ಪರಾತ್ಪರ ಶಕ್ತಿ ಎಂದೂ ಬತ್ತದ ಅಕ್ಷಯ ಭಂಡಾರ ಎಂದರೆ ಖಂಡಿತ ಅತಿಶಯೋಕ್ತಿಯಲ್ಲ.

ಇಂಥ ನೆಚ್ಚಿನ ಶ್ರೀಕೃಷ್ಣ, ನಮ್ಮ ಸಮಸ್ತ ಕಾವ್ಯ-ನಾಟಕಾದಿ, ನೃತ್ಯ ಕಲಾ ಪರಂಪರೆಗೆ ಸ್ಫೂರ್ತಿಯಾದ ಕಾರಣ, ಈ ಕಥಾವಸ್ತುವನ್ನು ಒಳಗೊಂಡ ಎಷ್ಟು ಪ್ರದರ್ಶನಗಳನ್ನು ವೀಕ್ಷಿಸಿದರೂ ಅದು ಚಿತ್ತಾಕರ್ಷಕವೇ ಸರಿ.

ಇತ್ತೀಚೆಗೆ 'ಸಾಧನ ಸಂಗಮ' ನೃತ್ಯಶಾಲೆಯ ನಿಪುಣ ನರ್ತಕರ ತಂಡ, ವಾರ್ಷಿಕೋತ್ಸವದ ಅಂಗವಾಗಿ ಬೆಂಗಳೂರಿನ ಕಾಸಿಯಾ ಸಭಾಂಗಣದಲ್ಲಿ ಪ್ರದರ್ಶಿಸಿದ 'ಗುರುಕುಲದಲ್ಲಿ ಶ್ರೀಕೃಷ್ಣ' -ನೃತ್ಯರೂಪಕ ಇದಕ್ಕೊಂದು ಉತ್ತಮ ನಿದರ್ಶನ. ತುಂಬಾ ಸರಳವಾಗಿದ್ದ ಸಾಹಿತ್ಯವನ್ನು ಅಚ್ಚುಕಟ್ಟಾಗಿ ದೃಶ್ಯೀಕರಿಸಿದ ಗುರು ಡಾ. ಸಾಧನಾ, ತಮ್ಮ ಕಲಾತ್ಮಕ ನಿರ್ದೇಶನದಲ್ಲಿ ಇದುವರೆಗೂ ಅಷ್ಟಾಗಿ ಚಿತ್ರಿಸಿರದ ಶ್ರೀಕೃಷ್ಣನ ವಿದ್ಯಾಭ್ಯಾಸದ ದಿನಗಳನ್ನು ಸುಂದರ ನೃತ್ಯರೂಪಕದಲ್ಲಿ ಕಟ್ಟಿಕೊಟ್ಟರು.

**ಶ್ರೀಕೃಷ್ಣನ ವರ್ಣರಂಜಿತ ವ್ಯಕ್ತಿತ್ವ**

ಹಿರಿಯ ಗುರು ಜ್ಯೋತಿ ಪಟ್ಟಾಭಿರಾಮ್ ಅವರ ವಿಶಿಷ್ಟ ಪರಿಕಲ್ಪನೆಯಲ್ಲಿ ಮೂಡಿಬಂದ 'ಗುರುಕುಲದಲ್ಲಿ ಶ್ರೀಕೃಷ್ಣನ ಬಾಲ್ಯದ ದಿನಗಳು ಬೇರೆಯದೇ ಆದ ಮಜಲಿನಲ್ಲಿ ಕಣ್ಮನ ಸೆಳೆಯಿತು. ಸಾಂದೀಪನಿ ವಿದ್ಯಾಗುರುಗಳ ಆಶ್ರಮವನ್ನು ಕೃಷ್ಣ-ಬಲರಾಮರು ವಿದ್ಯಾರ್ಥಿಗಳಾಗಿ ಪ್ರವೇಶಿಸಿದ ಆಸಕ್ತಿಕರ ಘಟ್ಟದಲ್ಲಿ, ವಿದ್ಯಾರ್ಥಿಗಳ ಈರ್ಷಾ ಮನೋಭಾವ- ಸಹಜ ನಡವಳಿಕೆಗಳ ಹುಡುಗಾಟದ ವಾತಾವರಣವನ್ನು ಚೆನ್ನಾಗಿ ಚಿತ್ರಿಸಲಾಗಿತ್ತು. ಮಿಂಚಿನಂತೆ ಗುರುಕುಲವನ್ನು ಹೊಕ್ಕ ಸೋದರರ ದಿನಚರಿ ಆಕರ್ಷಕ ಬಗೆಯಲ್ಲಿ ಸಾಗಿತು.

ಗುರುಗಳ ಆಶೀರ್ವಾದ ಪಡೆದ ಪ್ರತಿಭಾವಂತ ಕೃಷ್ಣ, ತನ್ನ ಸಂಗೀತ- ನೃತ್ಯಾದಿಗಳ ವೈಶಿಷ್ಟ್ಯದಿಂದ, ಯೋಗ, ಆಟ-ಓಟ-ಪಾಠಗಳ ಸೊಗಸಿನಿಂದ ಸಹಪಾಠಿಗಳನ್ನು ಆಕರ್ಷಿಸಿ ಅವರ ಸ್ನೇಹ ಗಳಿಸಿದ್ದು ಕುತೂಹಲ ಆಸಕ್ತಿದಾಯಕವಾಗಿತ್ತು. ಗುರುಕುಲದಲ್ಲಿ ಕೇಂದ್ರಬಿಂದುವಾಗಿದ್ದ ಚಟುವಟಿಕೆಯ ಖನಿ ಶ್ರೀಕೃಷ್ಣ, ಅತ್ಯಲ್ಪ ಕಾಲದಲ್ಲೇ ಜನಪ್ರಿಯನಾದ ಬಗೆಯನ್ನು ನಿರ್ದೇಶಕಿ ಸಾಧನಾ ನೃತ್ಯದ ಸಮರ್ಥ ಮಾಧ್ಯಮದಲ್ಲಿ ಸೆರೆ ಹಿಡಿದಿದ್ದರು. ಎಲ್ಲೆಲ್ಲಿ ಮನಮೋಹಕ ನೃತ್ಯಕಲೆಯ ಪ್ರದರ್ಶನಕ್ಕೆ ಅವಕಾಶವಿದೆಯೋ ಅಲ್ಲೆಲ್ಲ ಬಹು ಸಮರ್ಥವಾಗಿ- ಸುಂದರವಾಗಿ ನೃತ್ಯದ ಸೊಗಡನ್ನು ಉಣಬಡಿಸಿದರು. ಕಿವಿದುಂಬಿದ ಸಂಗೀತ (ಗಾಯನ- ಬಾಲಸುಬ್ರಮಣ್ಯ ಶರ್ಮ ಮತ್ತು ಸಂಗೀತ ಸಂಯೋಜನೆ- ಜಿ. ಗುರುಮೂರ್ತಿ) ದ ಅಲೆಗಳಲ್ಲಿ, ಲಯಾತ್ಮಕ ಹೆಜ್ಜೆ-ಗೆಜ್ಜೆಗಳ ದೃಶ್ಯಾವಳಿಗಳಲ್ಲಿ ಮುದ್ದು ಕೃಷ್ಣ ಎಲ್ಲರಿಗೂ ಪ್ರಿಯನೇ ಆಗುತ್ತಾನೆ.

ಕಡೆಯಲ್ಲಿ ಗುರುದಕ್ಷಿಣೆ ನೀಡುವ ಸಂದರ್ಭ- ಗುರುಪುತ್ರ ಆಕಸ್ಮಿಕವಾಗಿ ಮರಣ ಹೊಂದಿ, ಅವರಿಗೆ ಪುತ್ರವಿಯೋಗದ ದುಃಖ ಮಡುಗಟ್ಟಿರುವಾಗ, ನಿಜವಾದ ಶಿಷ್ಯನಾಗಿ ಕೃಷ್ಣ, ಅನೇಕಾನೇಕ ಕಷ್ಟಗಳನ್ನೆದುರಿಸಿ, ಅಸುರರ ಸಂಹರಿಸಿ ಕಡೆಗೆ ಯಮನನ್ನು ಗೆದ್ದು ಬಂದ ಧೀರನಾಗಿ ಮರಳಿ ಗುರುಪುತ್ರನ ಜೀವ ಕಾಪಾಡಿ ಗುರುಗಳಿಗೆ ಕಾಣಿಕೆಯಾಗಿ ಅರ್ಪಿಸುವ ಪರಿಣಾಮಕಾರಿ ಸನ್ನಿವೇಶದಲ್ಲಿ ನೃತ್ಯರೂಪಕ ಸಂಪನ್ನಗೊಳ್ಳುತ್ತದೆ. ಸುಮಾರು ಒಂದುಗಂಟೆಯ ಅವಧಿಯ ಗುರುಕುಲದಲ್ಲಿ ಶ್ರೀಕೃಷ್ಣ ನೃತ್ಯರೂಪಕ ತನ್ನ ಚುರುಕಿನ ನಡೆಯಿಂದ, ಸುಮನೋಹರ ನೃತ್ಯ ಪ್ರದರ್ಶನದಿಂದ, ಸನ್ನಿವೇಶಕ್ಕೆ ತಕ್ಕಂತೆ ಪ್ರದರ್ಶಿತವಾದ ಯೋಗಾಸನಗಳು, ಹಗ್ಗ ಜಗ್ಗಾಟ, ಗೋಲಿಯಾಟ, ಧನುರ್ವಿದ್ಯೆ ಮುಂತಾದ ಕ್ರೀಡೆಗಳ ಸೂಚ್ಯ ನೋಟಗಳಿಂದ ಸೆಳೆಯುವುದಲ್ಲದೆ, ಕೃಷ್ಣ ಬಹುಬೇಗ ತನ್ನ ವಿವಿಧ ಪ್ರತಿಭಾ ಮಜಲುಗಳಿಂದ ಸಹವಿದ್ಯಾರ್ಥಿಗಳ ಪ್ರೀತಿ- ವಿಶ್ವಾಸ ಸಂಪಾದಿಸಿ ಮನಗೆದ್ದ ಪರಿಯನ್ನು ನೃತ್ಯನಾಟಕ ಮನರಂಜಕವಾಗಿ ಸಾಕಾರಗೊಳಿಸಿದ್ದು ಸ್ತುತ್ಯಾರ್ಹ ಪ್ರಯೋಗವಾಗಿತ್ತು. ನೃತ್ಯರೂಪಕದಲ್ಲಿ ಭಾಗವಹಿಸಿದ ಪ್ರತಿಯೊಬ್ಬ ನರ್ತಕರಿಗೂ ಇದರ ಯಶಸ್ಸು ಸಲ್ಲಬೇಕು. ಇದಕ್ಕಾಗಿ ಸಾಧನ ಸಂಗಮದ ಎಲ್ಲಾ ಪ್ರತಿಭಾ ನೃತ್ಯಮಣಿಗಳಿಗೂ ಹಾರ್ದಿಕ ಅಭಿನಂದನೆಗಳು.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಜೀವನ ಸಂಗಾತಿಯೊಂದಿಗೆ ಸೇರಿ ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು.

**ವೃಷಭ** ನೀವು ಹಣದ ಲಾಭವನ್ನು ಪಡೆಯಬಹುದು. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಪ್ರೀತಿಯಲ್ಲಿ ನಿರಾಶೆ ನಿಮ್ಮನ್ನು ಕಂಗೆಡಿಸುವುದಿಲ್ಲ.

**ಮಿಥುನ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ, ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ಕರ್ಕಾಟಕ** ವಿಶ್ರಾಂತಿ ತೆಗೆದುಕೊಳ್ಳಿ, ಕೆಲಸದ ನಡುವೆ ಸಾಧ್ಯವಾದಷ್ಟು ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಪ್ರಮುಖ ಜನರು ವಿಶೇಷವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.

**ಸಿಂಹ** ನಿಮ್ಮ ವಿಚ್ಛಿದ್ರಕಾರಕ ಭಾವಗಳು ಮತ್ತು ಉದ್ವೇಗಗಳನ್ನು ಹತೋಟಿಯಲ್ಲಿ ಇರಿಸಿಕೊಳ್ಳಿ. ನಿಮ್ಮ ಸಾಂಪ್ರದಾಯಿಕ ಚಿಂತನೆ, ಹಳೆಯ ವಿಚಾರಗಳು ನಿಮ್ಮ ಪ್ರಗತಿಯನ್ನು ಕುಂಠಿತಗೊಳಿಸಬಹುದು.

**ಕನ್ಯಾ** ಅನಂತ ಚೈತನ್ಯ, ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ.

**ತುಲಾ** ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ.

**ವೃಶ್ಚಿಕ** ನಿಮ್ಮಲ್ಲಿ ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ವ್ಯಾಪರದಲ್ಲಿ ಪ್ರಯೋಜನ ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ಧನಸ್ಸು** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮ್ಮ ಸಮರ್ಪಣೆ, ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ.

**ಮಕರ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ.

**ಕುಂಭ** ನಿಮ್ಮ ಬಳಿಯಿರುವ ಯಾರಾದರೂ ನಿಮ್ಮನ್ನು ಅತ್ಯಂತ ನಿಕಟವಾಗಿ ಗಮನಿಸುತ್ತಿದ್ದಾರೆ, ನಮ್ಮನ್ನು ಅವರ ಆದರ್ಶವೆಂದು ಪರಿಗಣಿಸುತ್ತಾರೆ. ಇದು ನಿಮ್ಮ ಖ್ಯಾತಿಯನ್ನು ಹೆಚ್ಚಿಸುತ್ತದೆ.

**ಮೀನ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ. ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

### ಜಿಲ್ಲೆಯಲ್ಲಿ 1015 ಪ್ರಕರಣಗಳ ಇತ್ಯರ್ಥಕ್ಕೆ ಮಾರ್ಗದರ್ಶನ ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ್ ಮಾಹಿತಿ

# ನ್ಯಾಯಾಲಯದ ನಿರ್ದೇಶನದಂತೆ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ

• ಉದಯವಾಹಿನಿ ಚಿತ್ರದುರ್ಗ

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಜುಲೈ 1 ರಿಂದ ಅಕ್ಟೋಬರ್ 7ನೇ ತಾರೀಖಿನ ವರೆಗೆ ಜಿಲ್ಲೆಯ ನ್ಯಾಯಾಲಯಗಳಲ್ಲಿ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ನಡೆಸಲಾಗುತ್ತಿದೆ. ಇದಕ್ಕಾಗಿ 1015 ಪ್ರಕರಣಗಳನ್ನು ಗುರುತಿಸಲಾಗಿದ್ದು, 51 ನುರಿತ ಮಧ್ಯಸ್ಥಿಕೆದಾರರು ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಪಕ್ಷಗಾರರಿಗೆ ಕಾನೂನಾತ್ಮಕ ಸಹಕಾರ ನೀಡಲಿದ್ದಾರೆ. ಈಗಾಗಲೇ 18 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ್ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಗುರುವಾರ ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಾಗೂ ಮುಂಬರುವ ಸೆಪ್ಟಂಬರ್ 13ರಂದು ಜರುಗಲಿರುವ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಜಿಲ್ಲಾ ಹಾಗೂ ತಾಲ್ಲೂಕು ಹಂತದ ನ್ಯಾಯಾಲಯಗಳಲ್ಲಿ ಚಾಲ್ತಿಯಲ್ಲಿರುವ ಕೌಟುಂಬಿಕ, ವೈವಾಹಿಕ, ಅಪಘಾತ ವಿಮಾ, ಚೆಕ್ ಅಮಾನ್ಯ, ಕಮರ್ಷಿಯಲ್ ಡಿಸ್‌ಪ್ಯೂಟ್, ಗ್ರಾಹಕರ ವ್ಯಾಜ್ಯಗಳು, ಸಾಲ ವಸೂಲಾತಿ,



ಉದಯವಾಹಿನಿ ಚಿತ್ರ

**ಮಧ್ಯಸ್ಥಿಕೆ ಮುಖಾಂತರ ಇತ್ಯರ್ಥ ಪಡಿಸಲಿಕೊಳ್ಳಲು ಮಾರ್ಗದರ್ಶನ**

ಆಸ್ತಿ ವಿಭಾಗ, ಭೂಸ್ವಾಧೀನ ಸೇರಿದಂತೆ ಎಲ್ಲಾ ರೀತಿಯ ಸಿವಿಲ್ ಸ್ವರೂಪದ ಪ್ರಕರಣಗಳನ್ನು ಮಧ್ಯಸ್ಥಿಕೆ ಮುಖಾಂತರ ಇತ್ಯರ್ಥ ಪಡಿಸಲಿಕೊಳ್ಳಲು ಪಕ್ಷಗಾರರಿಗೆ ಸೂಕ್ತ ಮಾರ್ಗದರ್ಶನ ಮತ್ತು ವೇದಿಕೆಯನ್ನು ಕಲ್ಪಿಸಿಕೊಡಲಾಗುತ್ತಿದೆ. ಮಧ್ಯಸ್ಥಿಕೆದಾರರ ಸಮಕ್ಷಮ ಪಕ್ಷಗಾರರು ಮಾಡಿಕೊಂಡ ರಾಜಿ ಒಡಂಬಡಿಕೆ ಹಾಗೂ ಒಪ್ಪಂದಗಳು ಕಾನೂನಾತ್ಮಕವಾಗಿ ನ್ಯಾಯವಾಗಿವೆಯೇ ಎಂಬುದನ್ನು ಪರಾಮರ್ಶಿಸಿ ನ್ಯಾಯಾಲಯದಿಂದ ಅಧಿಕೃತ ಮೊಹರು ಹಾಕುವ ಮೂಲಕ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುವುದು ಎಂದು ಜಿಲ್ಲಾ ನ್ಯಾಯಾಧೀಶರಾದ ರೋಣ ವಾಸುದೇವ್ ಹೇಳಿದರು. ಹೊಸದಾಗಿ ಮದುವೆಯಾದ ಯುವಜನತೆಯಲ್ಲಿ ಹೊಂದಾಣಿಕೆ ಸಮಸ್ಯೆಯಿಂದಾಗಿ ಮನಸ್ತಾಪಗಳು ಉಂಟಾಗುತ್ತಿವೆ. ಈ ಹಂತದಲ್ಲಿ ಕುಟುಂಬದ ಹಿರಿಯರ ಮಾರ್ಗದರ್ಶನವಿಲ್ಲದೇ ವೈವಾಹಿಕ ಸಂಬಂಧಗಳಲ್ಲಿ ಬಿರುಕು ಉಂಟಾಗಿ, ವಿಚ್ಛೇದನ ಹಂತಕ್ಕೆ ಹೋಗುತ್ತಿವೆ. ದುರದೃಷ್ಟಕರ ಸಂಗತಿ ಎಂದರೆ, ನ್ಯಾಯಾಲಯಗಳಲ್ಲಿ ವಿಚ್ಛೇಧನ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿವೆ. ನ್ಯಾಯಾಧೀಶರು ವೈವಾಹಿಕ ಸಂಬಂಧ ಗಟ್ಟಿಗೊಳಿಸುವ ಹಿನ್ನಲೆಯಲ್ಲಿ ಸರ್ವ ಪ್ರಯತ್ನಗಳನ್ನು ಮಾಡುತ್ತಾರೆ. ಪ್ರತಿ ಲೋಕ ಅದಾಲತ್‌ನಲ್ಲಿಯೂ ವಿಚ್ಛೇಧನಕ್ಕೆ ಅರ್ಜಿ ಸಲ್ಲಿಸಿದ 8 ರಿಂದ 10 ಜೋಡಿಗಳನ್ನು ಪುನಃ ಒಂದು ಮಾಡಲಾಗುತ್ತಿದೆ ಎಂದು ತಿಳಿಸಿದರು.

ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಬ್ಯಾಂಕ್, ಬಿ.ಎಸ್.ಎನ್.ಎಲ್, ಬೆಸ್ಕಾಂ, ನಗರ ಸಭೆಗೆ ಸಂಬಂಧಿಸಿದ ವ್ಯಾಜ್ಯಗಳು ಹೆಚ್ಚಿರುತ್ತವೆ. ಕೆಲವೊಮ್ಮೆ ನ್ಯಾಯಾಲಯ ಮಧ್ಯಸ್ಥಿಕೆ ವಹಿಸಿ ಬ್ಯಾಂಕ್ ಸಾಲ ಹಾಗೂ ಬಡ್ಡಿ ಮರುಪಾವತಿ, ಬಿಲ್‌ಗಳ ಪಾವತಿಯಲ್ಲಿ ರಿಯಾಯಿತಿ ನೀಡುವಂತೆ ಮಾಡುತ್ತದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ಸರ್ಕಾರಿ ಸಂಸ್ಥೆಗಳಿಗೆ ಅನುಕೂಲವಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಜ್ಯ ಪ್ರಕರಣಗಳು ಸಹ ವಿಲೇವಾರಿಯಾಗುತ್ತವೆ. ವಿಚ್ಛೇದನ ಪ್ರಕರಣಗಳೊಂದಿಗೆ ಜೀವನಾಂಶ ಕೋರಿಕೆ, ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಪ್ರಕರಣಗಳು ತಳುಕು ಹಾಕಿಕೊಂಡಿರುತ್ತವೆ. ವಿಚ್ಛೇದನ ಪ್ರಕರಣದಲ್ಲಿ ಸತಿ ಪತಿಯನ್ನು ಒಂದು ಮಾಡುವುದರಿಂದ ಸಾಕಷ್ಟು ಪ್ರಕರಣಗಳನ್ನು ಆರಂಭದಲ್ಲಿಯೇ ಅಂತ್ಯಗೊಳಿಸಬಹುದು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಾರ್ವಜನಿಕರಿಗೆ ದೊರಕಬೇಕಾದ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡುವಲ್ಲಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಚಿತ್ರದುರ್ಗ ತಾಲ್ಲೂಕಿನ ಜೋಡಿ ಚಿಕ್ಕೇನಹಳ್ಳಿಗೆ ಬಸ್ ಸೌಕರ್ಯವಿರಲಿಲ್ಲ. ಇದರಿಂದ ಶಾಲೆಗೆ ಹೋಗುವ ಮಕ್ಕಳಿಗೆ ತೊಂದರೆ ಉಂಟಾಗಿತ್ತು. ಈ ಕುರಿತು ಬಿತ್ತರವಾದ ವರದಿಯನ್ನು ಗಂಭೀರವಾಗಿ ಪರಿಗಣಿಸಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕೆ.ಎಸ್.ಆರ್.ಟಿ.ಸಿಗೆ ನಿರ್ದೇಶನ ನೀಡಿದ ಫಲವಾಗಿ ಜೋಡಿ ಚಿಕ್ಕೇನಹಳ್ಳಿಗೆ ಬಸ್ ಸೌಲಭ್ಯ ದೊರಕಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ್ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಇದ್ದರು.

#### ಸೆಪ್ಟಂಬರ್ 13ರಂದು ರಾಷ್ಟ್ರೀಯ ಲೋಕ ಅದಾಲತ್

**ಮುಂಬರುವ ಸೆಪ್ಟಂಬರ್ 13ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜನೆ ಮಾಡಲಾಗಿದೆ. ಕಳೆದ ಲೋಕ ಅದಾಲತ್‌ನಲ್ಲಿ ಜಿಲ್ಲೆಯ ನ್ಯಾಯಾಲಯಗಳಲ್ಲಿ ಚಾಲ್ತಿಯಲ್ಲಿದ್ದ 50,000 ಅಧಿಕ ಪ್ರಕರಣಗಳಲ್ಲಿ 4,321 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಇದರೊಂದಿಗೆ 99,272 ವ್ಯಾಜ್ಯಪೂರ್ವ ಪ್ರಕರಣಗಳು ಸೇರಿ 1,03,593 ಪ್ರಕರಣಗಳು ವಿಲೇವಾರಿಯಾಗಿವೆ. ವಿಚ್ಛೇಧನಕ್ಕಾಗಿ ಅರ್ಜಿ ಸಲ್ಲಿಸಿದ್ದ 06 ಜೋಡಿಗಳನ್ನು ಒಂದು ಮಾಡಲಾಗಿದೆ ನ್ಯಾಯಾಧೀಶ ರೋಣ ವಾಸುದೇವ್ ಮಾಹಿತಿ ನೀಡಿದರು.**

**ಪಕ್ಷಗಾರರು ವಿಶೇಷ ಮಧ್ಯಸ್ಥಿಕೆ ಅಭಿಯಾನ ಹಾಗೂ 2025ರ ಸೆಪ್ಟಂಬರ್ 13ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್ ಸದುಪಯೋಗ ಪಡಿಸಿಕೊಂಡು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಲೋಕ ಅದಾಲತ್‌ನಲ್ಲಿ ಭಾಗವಹಿಸಬಹುದು. ಸಾರ್ವಜನಿಕರು ಲೋಕ ಅದಾಲತ್ ಕುರಿತು ಹೆಚ್ಚಿನ ಪ್ರಶ್ನೆ ಮತ್ತು ಮಾಹಿತಿಗಾಗಿ ಬೇಕಾದಲ್ಲಿ ಇ-ಮೇಲ್ dlsachitradurga3@gmail.com ಹಾಗೂ ಟೋಲ್ ಫ್ರೀ ಸಂಖ್ಯೆ 15100 ಸಂಪರ್ಕಿಸುವಂತೆ ಎಂದು ನ್ಯಾಯಾಧೀಶ ರೋಣ ವಾಸುದೇವ ತಿಳಿಸಿದ್ದಾರೆ.**

## ಪ್ರತಿಭಟನೆಗೆ ಸಿದ್ಧತೆ

• ಉದಯವಾಹಿನಿ ವಾಡಿ

ಎಐಯುಟಿಯುಸಿಗೆ ಸಂಯೋಜಿತಗೊಂಡ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ಜಿಲ್ಲಾ ಸಮಿತಿಯಿಂದ ಜರುಗಲಿರುವ ಪ್ರತಿಭಟನೆಗೆ ತಾಲ್ಲೂಕಿನ ಆಶಾ ಪ್ರತಿಭಟನೆಗೆ ಸಜ್ಜಾಗುತ್ತಿದ್ದಾರೆ. ಆಗಸ್ಟ್ 13ರಂದು ಮೂರು ದಿನಗಳ ಕಾಲ ತಮ್ಮ ಕರ್ತವ್ಯಕ್ಕೆ ಗೈರಾಗಿ ಆಶಾ ಕಾರ್ಯಕರ್ತೆಯರ ಪ್ರತಿಭಟನೆ ಜರುಗಲಿದೆ. ತಾಲ್ಲೂಕಿನ ನೂರಾರು ಆಶಾ ಕಾರ್ಯಕರ್ತೆಯರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರತಿಭಟನೆ ಕುರಿತು ಆರೋಗ್ಯ ಇಲಾಖೆಯ ಪಿಎಚ್ ಸಿ ಹಾಗೂ ತಾಲ್ಲೂಕು ವೈದ್ಯಾಧಿಕಾರಿಗಳಿಗೆ ಪತ್ರ ನೀಡಿ ಗೈರಾಗುವ ಕುರಿತು ಮಾಹಿತಿ ನೀಡಿದರು.



ಉದಯವಾಹಿನಿ ಚಿತ್ರ

ಮುಖ್ಯಮಂತ್ರಿಗಳು ಘೋಷಿಸಿದ ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹಧನ ಸೇರಿಸಿ ಕನಿಷ್ಟ ಹತ್ತು ಸಾವಿರ ರೂಪಾಯಿ ಗೌರವಧನವನ್ನು ಏಪ್ರಿಲ್‌ನಿಂದ ಅನ್ವಯವಾಗುವಂತೆ ಮತ್ತು ಇದೇ ಬಜೆಟ್‌ನಲ್ಲಿ ರೂ.1000 ಹೆಚ್ಚಳ ಮಾಡುವ ಆದೇಶವನ್ನು ಕೂಡಲೇ ನೀಡಲು ಮತ್ತು ಜನಸಂಖ್ಯೆ, ಮೌಲ್ಯಮಾಪನದ ಹೆಸರಿನಲ್ಲಿ ಆಶಾ ಕಾರ್ಯಕರ್ತೆಯರನ್ನು ಕೆಲಸದಿಂದ ಕೈಬಿಡುವ ಆತಂಕ ಸೃಷ್ಟಿಸಿರುವುದರ ವಿರುದ್ಧ ಪ್ರತಿಭಟನೆ ನಡೆಯಲಿದೆ ಎಂದು ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ ತಾಲ್ಲೂಕು ಅಧ್ಯಕ್ಷೆ ಸುಗಂಧ ಹೊಸ್ಸೂರ, ಮಾಣಿಕಮ್ಮ ದಂಡೋತ್ತಿ ತಿಳಿಸಿದರು.

## ತಾಯಿ ಮಗುವಿಗೆ ಸ್ತನ್ಯಪಾನ ಮಾಡಿಸುವುದು ಪ್ರಕೃತಿಯ ಅದ್ಭುತ ವರದಾನ

• ಉದಯವಾಹಿನಿ ಚಿತ್ರದುರ್ಗ

ಜನಿಸಿದ ಮಗುವಿಗೆ ತಾಯಿಯ ಎದೆಹಾಲು ಉಣಿಸುವುದು ಪ್ರಕೃತಿಯ ಅದ್ಭುತ ವರದಾನ, ಇದು ಜೀವನಪರ್ಯಂತ ಮಗುವಿಗೆ ರೋಗನಿರೋಧಕ ಶಕ್ತಿಯನ್ನು ನೀಡುತ್ತದೆ ಎಂದು ಆರೋಗ್ಯ ನೀರಿಕ್ಷಣಾಧಿಕಾರಿ ಮಹೇಶ ಡಿ ಹೇಳಿದರು.

ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪಿಯ ಕಲ್ಲೇನಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ಮತ್ತು ಶಿಶು ಅಭಿವೃದ್ಧಿ ಇಲಾಖೆ ವತಿಯಿಂದ ಆಯೋಜಿಸಿದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ವರ್ಷದ ಧ್ಯೇಯ ವಾಕ್ಯ ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ, ಅಗಿದ್ದು ಜನಿಸಿದ ಮಗುವಿಗೆ ಎರಡು ವರ್ಷದ ತನಕ ತಪ್ಪದೇ ತಾಯಿ ಎದೆ ಹಾಲು ನೀಡಬೇಕು, ಆರು ತಿಂಗಳ ತನಕ ತಾಯಿಯ ಎದೆಹಾಲು ಬಿಟ್ಟು ಬೇರೆ ಏನನ್ನು ಮಗುವಿಗೆ ಕೊಡಬಾರದು. ನಂತರ ಎರಡು ವರ್ಷದ ತನಕ ಎದೆಹಾಲಿನ ಜೊತೆಗೆ ಪೂರಕ ಆಹಾರವನ್ನು ನೀಡಬೇಕು, ಎದೆಹಾಲು ಉಣಿಸುವ ತಾಯಿ ಪೋಷಕಾಂಶ ಇರುವ ಎಲ್ಲಾ ಆಹಾರ ಪದಾರ್ಥಗಳ ಸೇವನೆ ಮಾಡಬೇಕು ಎಂದರು.

ಗರ್ಭಿಣಿಯಾಗಿದ್ದಾಗಿನಿಂದ ತಾಯಿಯು ತನ್ನ ಎದೆ ತೊಟ್ಟಿನ ಹಾರೈಕೆ ಮಾಡಿಕೊಳ್ಳಬೇಕು. ಮಗು ಜನಿಸಿದ ಒಂದು ಗಂಟೆಯ ಒಳಗಡೆ ತಾಯಿ ಎದೆ ಹಾಲು ಮಗುವಿಗೆ ಉಣಿಸಬೇಕು, ಮಗುವಿಗೆ ಇರುಳುಗಣ್ಣು ಇತರೆ ಸೋಂಕು ರೋಗಗಳು ತಡೆಯಲು ತಾಯಿ ಮಗುವಿನ ಬಾಂಧವ್ಯ ಹೆಚ್ಚಿಸಲು ಸ್ತನ್ಯಪಾನ ಬಹುಮುಖ್ಯ ಎಂದರು. ತಾಯಂದಿರು ಮತ್ತು ಶಿಶುಗಳ ಆರೋಗ್ಯವನ್ನು ಉತ್ತೇಜಿಸಲು ಮತ್ತು ಜಾಗೃತಿ ಮೂಡಿಸಲು ಪ್ರತಿ ವರ್ಷ ಆಗಸ್ಟ್ ಒಂದರಿಂದ ಆಗಸ್ಟ್ ಏಳರವರೆಗೆ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತಿದೆ ಎಂದರು.



ಉದಯವಾಹಿನಿ ಚಿತ್ರ

ಮಗು ಅತ್ತಾಗಲೆಲ್ಲಾ ತಾಯಿ ಮಗುವಿಗೆ ಎದೆ ಹಾಲುಣಿಸಬೇಕು, ಉಚಿತವಾಗಿ ದೊರೆಯುವ ಅಮ್ಮನ ಎದೆ ಹಾಲು ನೀಡುವುದು ತಾಯಿಯ ಜವಾಬ್ದಾರಿ, ತಾಯಿ ಎದೆ ಹಾಲು ಉಣಿಸುವಾಗ ಅನುಸರಿಸುವ ಬಂಗಿ ಮತ್ತು ಹೊಂದಾಣಿಕೆಯ ಬಗ್ಗೆ ಮಾಹಿತಿ ನೀಡಿದರು.

**ಆಶಾ ಕಾರ್ಯಕರ್ತೆ ಮಹಾದೇವಿ ಅವರು ಗರ್ಭಿಣಿ ತಾಯಂದಿರು ಸಕಾಲಕ್ಕೆ ವೈದ್ಯರಲ್ಲಿ ಪರೀಕ್ಷೆ ಮತ್ತು ಚಿಕಿತ್ಸೆ ಪಡೆಯಬೇಕು. ಹೆರಿಗೆಯ ನಂತರ 2.5 ಕೆಜಿ ಗಿಂತ ಕಡಿಮೆ ತೂಕದ ಮಗು ಜನಿಸಿದರೆ 48 ಗಂಟೆ ಸ್ನಾನ ಮಾಡಿಸದೆ, ಸ್ವಚ್ಛತೆಗೆ ಆದ್ಯತೆ ನೀಡಿ ತಾಯಿಯ ಪಕ್ಕದಲ್ಲಿ ಮಗುವನ್ನ ಮಲಗಿಸುವುದರಿಂದ ತಾಯಿ ಮಗುವಿನ ಬಾಂಧವ್ಯ ಬೆಳೆಯುವುದಲ್ಲದೆ ಎದೆ ಹಾಲು ಉತ್ಪತ್ತಿ ಹೆಚ್ಚಾಗುತ್ತದೆ, ಪ್ರಶಾಂತವಾದ ವಾತಾವರಣದಲ್ಲಿ ಸಮಾಧಾನವಾಗಿ ಕುಳಿತು ತಾಯಿ ಮಗುವಿಗೆ ಎದೆ ಹಾಲು ಉಣಿಸಬೇಕು.**

**-ಮಹೇಶ ಡಿ., ಆರೋಗ್ಯ ನೀರಿಕ್ಷಣಾಧಿಕಾರಿ**

ಆಶಾ ಕಾರ್ಯಕರ್ತೆಯರಾದ ಹೇಮಲತ ಮತ್ತು ಸವಿತ ಇವರು ಕಾರ್ಯಕ್ರಮದಲ್ಲಿ ಡೆಂಗ್ಯೂ ಹಾಗೂ ಮಳೆಗಾಲದಲ್ಲಿ ಹರಡುವ ಕೀಟಜನ್ಯ ಸಾಂಕ್ರಾಮಿಕ ರೋಗಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಅಶಾ ಕಾರ್ಯಕರ್ತೆಯರು, ಹಾಗೂ ಎದೆ ಹಾಲುಣಿಸುವ ತಾಯಂದಿರು ಸಾರ್ವಜನಿಕ ತಾಯಂದಿರು ಹಾಜರಿದ್ದರು.

## ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಆ. 11ರಿಂದ ಧರಣಿ

• ಉದಯವಾಹಿನಿ ಬಳ್ಳಾರಿ

ಬರಲಿರುವ ಮಳೆಗಾಲದ ಅಧಿವೇಶನದಲ್ಲಿ ರಾಜ್ಯದಲ್ಲಿ ಒಳ ಮೀಸಲಾತಿಯನ್ನು ಜಾರಿಗೆ ತರಬೇಕೆಂದು ಅಸಗ್ರಹಿಸಿ ಆ.11 ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಅನಿರ್ಧಿಷ್ಟಾವಧಿಯ ಆಹೋರಾತ್ರಿ ಧರಣಿ ಸತ್ಯಾಗ್ರಹವನ್ನು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಹೋರಾಟ ಸಮಿತಿ ಹಮ್ಮಿಕೊಂಡಿದೆ. ಈ ಕುರಿತು ಸಮಿತಿಯ ಮುಖಂಡ ಕರಿಯಪ್ಪ ಗುಡಿಮನಿ ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಈ ವಿಷಯ ತಿಳಿಸಿದರು.

ಒಳ ಮೀಸಲಾತಿಯ ಬೇಡಿಕೆ ಮತ್ತು ಹೋರಾಟ ಕಳೆದ ಹಲವು ದಶಕಗಳಿಂದ ನನೆಗುದಿಗೆ ಬಿದ್ದಿದೆ. ಕಳೆದ ಆಗಸ್ಟ್ ಒಂದರಂದು ಸರ್ವೋಚ್ಚ ನ್ಯಾಯಾಲಯದ ತೀರ್ಪು ಸ್ಪಷ್ಟವಾಗಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ 101 ಸಮುದಾಯಗಳಿಗೂ ಜನಸಂಖ್ಯೆಗೆ ಅನುಗುಣವಾಗಿ ಒಳಮೀಸಲಾತಿ ನೀಡಲು ರಾಜ್ಯ ಸರ್ಕಾರಗಳಿಗೆ ಆದೇಶವನ್ನು ನೀಡಿದ್ದರೂ, ಕರ್ನಾಟಕ ಸರ್ಕಾರವು ಈ ಸರ್ವೋಚ್ಚ ನ್ಯಾಯಾಲಯದ ತೀರ್ಪುನ್ನು ಜಾರಿಗೊಳಿಸಲು ಅನಗತ್ಯವಾಗಿ ವಿಳಂಬ ಮಾಡುತ್ತಿರುವುದು



ಉದಯವಾಹಿನಿ ಚಿತ್ರ

ತೀವ್ರ ಅಸಮಾಧಾನಕ್ಕೆ ಕಾರಣ ಆಗಿದೆ. ಸುಪ್ರೀಂಕೋರ್ಟ್ ತೀರ್ಪಿನ ನಂತರ ಹರಿಯಾಣ, ತೆಲಂಗಾಣ, ಆಂಧ್ರಪ್ರದೇಶ ಸರ್ಕಾರಗಳು ಒಳ ಮೀಸಲಾತಿ ಜಾರಿ ಮಾಡಿ ಸಾಮಾಜಿಕ ನ್ಯಾಯದ ವಿಷಯದಲ್ಲಿ ಮೇಲ್ಪಂಕ್ತಿ ಹಾಕಿದ್ದಾರೆ. ಕರ್ನಾಟಕ ಸರ್ಕಾರ ಮಾತ್ರ ವಿಳಂಬ ನೀತಿ ಅನುಸರಿಸುತ್ತಿರುವುದು ಪರಿಶಿಷ್ಟ ಜಾತಿಗಳಲ್ಲಿ ಅದರಲ್ಲೂ ಮಾದಿಗ ಮತ್ತು 29 ಉಪಜಾತಿಗಳಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ನಾಗಮೋಹನ್ ದಾಸ್ ವರದಿಯ ಬಗೆಗಿನ ಗೊಂದಲಗಳು, ಸರ್ಕಾರದ ನಿರ್ಲಕ್ಷದ ಧೋರಣೆಯ ಬಗ್ಗೆ ಎಚ್ಚರಿಕೆಯ ಘಂಟೆ ಬಾರಿಸುತ್ತಿದ್ದೇವೆ. ತಕ್ಷಣ ಒಳಮೀಸಲಾತಿ ಜಾರಿಮಾಡಬೇಕೆಂಬುದು ಆಗ್ರಹಿಸಿದರು.

## ಬೀದರ-ನಾಂದೇಡ ಹೊಸ ರೈಲ್ವೆ ಲೈನ್ ರಾಜ್ಯ ಸರ್ಕಾರದಿಂದ ನಿರ್ಲಕ್ಷ್ಯ

• ಉದಯವಾಹಿನಿ ಬೀದರ

ನವದೇಹಲಿಯಲ್ಲಿ ರೈಲ್ವೆ ಸಚಿವರಾದ ಸನ್ಮಾನ್ಯ ಶ್ರೀ ಅಶ್ವಿನಿ ವೈಷ್ಣವರವರಿಗೆ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಭೇಟಿಯಾಗಿ, ಮಂಜೂರಾಗಿರುವ ಬೀದರ ನಾಂದೇಡ ವಾಯಾ ಔರಾದ - ದೇಗಲೂರ ಹೊಸ ರೈಲ್ವೆ ಲೈನ್ ಕಾಮಗಾರಿ ಆರಂಭಕ್ಕೆ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ನಿರ್ಲಕ್ಷ್ಯ ಮಾಡುತ್ತಿದೆ, ತಾವು ಮುತುವರ್ಜಿವಹಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಒತ್ತಡ ಹಾಕಿ, ರಾಜ್ಯ ಸರ್ಕಾರದ ಅನುಮತಿ / ಒಪಿಗೆ ಪಡೆದು ಕೊಳ್ಳಬೇಕೆಂದು ವಿನಂತಿಸಿಕೊಂಡಿದ್ದಾರೆ.

ಬೀದರ ಜಿಲ್ಲೆಯ ಸಂಪೂರ್ಣ ಅಭಿವೃದ್ದಿಯನ್ನು ಗಮನದಲ್ಲಿಟ್ಟುಕೊಂಡು, ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜಿಯವರು ಮತ್ತು ಅಂದಿನ ರೈಲ್ವೆ ಸಚಿವರಾಗಿದ್ದ ಶ್ರೀ.ಪಿಯೂಷ್ ಗೋಯಲ್ ರವರು 2019 ಫೇಬ್ರುವರಿ ತಿಂಗಳಲ್ಲಿ ಮಂಜೂರಾತಿ ನೀಡಿ, 2500ಕೋಟಿ ವೆಚ್ಚದಲ್ಲಿ 155 ಕೀಮಿ. ಅಂತರದ ಹೊಸ ರೈಲ್ವೆ ಲೈನ್ ಮಂಜೂರಾತಿ ಮಾಡಿಕೊಟ್ಟಿದ್ದಾರೆ.



ಉದಯವಾಹಿನಿ ಚಿತ್ರ

**ರೈಲ್ವೆ ಸಚಿವರಿಗೆ ಮನನವರಿಕೆ**

ಈ ರೈಲ್ವೆ ಲೈನ್ ಬೀದರ ಮತ್ತು ಮಹಾರಾಷ್ಟ್ರದ ಜೊತೆಗೆ ಉತ್ತರ ಭಾರತದಿಂದ ದಕ್ಷಿಣ ಭಾರತಕ್ಕೆ ನೇರವಾಗಿ ಸಂಪರ್ಕ ಕಲ್ಪಿಸುತ್ತದೆ ಮತ್ತು ಎಲ್ಲಾ ರೀತಿಯಲ್ಲೂ ಅಭಿವೃದ್ದಿಗೆ ಸಹಕಾರಿಯಾಗಿಲಿದೆ. ಹಾಗೆ ಬೀದರ ಜಿಲ್ಲೆಯ ಪ್ರವಾಸೋದ್ಯಮ ಕೂಡ ಅಭಿವೃದ್ದಿಗೊಳ್ಳಲಿದೆ. ಈ ಎಲ್ಲಾ ದೃಷ್ಟಿಕೊನದಿಂದ ರೈಲ್ವೆ ಸಚಿವಾಲಯವು ಬೀದರ-ನಾಂದೇಡ ರೈಲ್ವೆ ಲೈನ್ ಕಾಮಗಾರಿಯನ್ನು ಅದೇ ವರ್ಷದ ಬಜೆಟ್‌ನಲ್ಲಿ ಪಿಂಕ್ ಪುಸ್ತಕದಲ್ಲಿ ಸೇರಿಸಿರುತ್ತದೆ.

ಹಾಗೆ 2023-24ನೇ ಸಾಲಿನ ಬಜೆಟ್‌ನಲ್ಲಿ ಸದರಿ ಯೋಜನೆಗೆ ಕೇಂದ್ರದಿಂದ 100 ಕೋಟಿ ಅನುದಾನ ಮಿಸಲಿಟ್ಟಿತ್ತು, ಜೊತೆಗೆ ಈ ಯೋಜನೆಗೆ ಮಹಾರಾಷ್ಟ್ರ ಸರ್ಕಾರದಿಂದ ಸಹ ಅವರ ಪಾಲಿನ ಭೂಮಿ ಹಾಗೂ ನಿರ್ಮಾಣ ವೆಚ್ಚದ 50% ಅನುದಾನ ನೀಡುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಿರುತ್ತಾರೆ

ಈ ಹಿಂದೆ ರಾಜ್ಯದಲ್ಲಿದ್ದ ಬಸವರಾಜ ಬೊಮ್ಮಾಯಿ ಸರ್ಕಾರವು ಸಹ ಬೀದರ-ನಾಂದೇಡ (ಕರ್ನಾಟಕ ಬಾರ್ಡರ ಔರಾದವರೆಗೆ) ಅವಶ್ಯಕವಿರುವ ಭೂಮಿ ಹಾಗೂ ಅನುದಾನ ನೀಡುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಿರುತ್ತದೆ ಎಂದು ಭಗವಂತ ಖೂಬಾ ರೈಲ್ವೆ ಸಚಿವರಿಗೆ ಮನನವರಿಕೆ ಮಾಡಿಕೊಟ್ಟಿದ್ದಾರೆ.

## ಆಂಜನಾದ್ರಿಗೆ ಭೇಟಿ ನೀಡಿದ ರಾಜ್ಯಪಾಲ ಗೆಹ್ಲೋಟ

• ಉದಯವಾಹಿನಿ ಗಂಗಾವತಿ

ಅಂಜನಾದ್ರಿ ಬೆಟ್ಟಕ್ಕೆ ರಾಜ್ಯಪಾಲ ತಾವರ ಚಂದ್ ಗೆಹ್ಲೋಟ ತಮ್ಮ ಕುಟುಂಬ ಸಮೇತವಾಗಿ 548 ಮೆಟ್ಟಿಲುಗಳನ್ನು ಹತ್ತುವುದರ ಮೂಲಕ ಆಂಜನೇಯ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಪ್ರಧಾನ ಅರ್ಚಕ ವಿದ್ಯಾದಾಸ ಬಾಬಾಜಿ ಅವರು ತುಳಸಿದಾಸರ ಹನುಮಾನ್ ಚಾಲೀಸ್ ಪಾರಾಯಣವನ್ನು ಅತ್ಯಂತ ಶ್ರದ್ಧೆ ಭಕ್ತಿಯಿಂದ ನೆರವೇರಿಸಿ ಕೊಟ್ಟರು. ಜೊತೆಗೆ ಕಿಷ್ಕಿಂದ ಅಂಜನಾದ್ರಿ ಪರ್ವತ ಹಾಗೂ ಆಂಜನೇಯ ಕ್ಷೇತ್ರದ ಮಹತ್ವದ ಬಗ್ಗೆ ಮನವರಿಕೆ ಮಾಡಿದರು. ಶ್ರೀ ಕ್ಷೇತ್ರಕ್ಕೆ ಬರುವ ಆಗಮಿಸುವ ಭಕ್ತಾದಿಗಳಿಗೆ ಮೂಲಭೂತ ಸೌಲಭ್ಯ ಹಾಗೂ ವ್ಯಕ್ತಿ ಧರ್ಮ ಮಾರ್ಗದಲ್ಲಿ ಮುನ್ನಡೆಸಿಕೊಂಡು ಬರಲು ಸಂಸ್ಕೃತ ಪಾಠ ಶಾಲೆಯ ಪ್ರಾರಂಭ ಕುರಿತು ಮನವಿ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯಪಾಲರು ಸುಪ್ರೀಂ ಕೋರ್ಟ್ ವಿಷಯದ ಕುರಿತು ವಿದ್ಯಾದಾಸ್ ಬಾಬಾರೊಂದಿಗೆ ಚರ್ಚಿಸಿದರು. ವೇದ ಪಾಠಶಾಲೆ ಆದಷ್ಟು ಬೇಗನೆ ಪ್ರಾರಂಭಿಸಲು ಸೂಚನೆ ನೀಡುತ್ತೇನೆ ಎಂದು ಹೇಳಿದರು.

## ಹುಡಾ ಅಧ್ಯಕ್ಷ ಸ್ಥಾನ ಮುಸ್ಲಿಮರಿಗೆ ನೀಡಲು ಆಗ್ರಹ

• ಉದಯವಾಹಿನಿ ಹಾಸನ

ಇಲ್ಲಿನ ಹಾಸನ ನಗರಾಭಿವೃದ್ಧಿ ಪ್ರಾಧಿಕಾರ (ಹುಡಾ) ಅಧ್ಯಕ್ಷ ಸ್ಥಾನವನ್ನು ಮುಸ್ಲಿಂ ಸಮುದಾಯದ ಸೈಯದ್ ತಾಜೀಂ ಅವರಿಗೆ ನೀಡುವಂತೆ ಆಗ್ರಹಿಸಿ ಮುಸ್ಲಿಂ ಸಂಘಟನೆಗಳ ಮುಖಂಡರು, ಸದಸ್ಯರು ನಗರದ ಡಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಸೈಯ್ಯದ್ ಪರ ಘೋಷಣೆ ಕೂಗುತ್ತ ಮೆರವಣಿಗೆ ನಡೆಸಿದ ಅವರು, ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿದರು.

ಸಂಘಟನೆಯ ಮುಖಂಡ ಶಬೀರ್ ಅಹಮ್ಮದ್ ಮಾತನಾಡಿ, 3-4 ದಶಕಗಳಿಂದ ಹಾಸನದ ನಗರ ಅಭಿವೃದ್ಧಿ ಪ್ರಾಧಿಕಾರಕ್ಕೆ ಮುಸ್ಲಿಮರರನ್ನು ನೇಮಿಸಿಲ್ಲ. ಈ ಬಾರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಮುಸ್ಲಿಮರಿಗೆ ಅಧ್ಯಕ್ಷ ಸ್ಥಾನ ನೀಡಬೇಕು' ಎಂದು ಆಗ್ರಹಿಸಿದರು.

ಇದುವರೆಗೆ ಯಾವುದೇ ನಿಗಮ ಮಂಡಳಿಗಳಿಗೆ ಮುಸ್ಲಿಂ ಸಮುದಾಯದವರನ್ನು ಅಧ್ಯಕ್ಷರನ್ನಾಗಿ ಮಾಡಿಲ್ಲ. ಇದೀಗ ಹಾಸನ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವಂತೆ ಆರು ತಿಂಗಳ ಹಿಂದೆಯೇ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ, ಸಚಿವ ಜಮೀರ್ ಅಹಮ್ಮದ್ ಖಾನ್, ಹಲವು ಮುಖಂಡರಿಗೆ ಮನವಿ ನೀಡಲಾಗಿದೆ. ಜಿಲ್ಲೆಯ ಸುಮಾರು 57 ಧಾರ್ಮಿಕ ಸಂಘಟನೆಗಳ ಮುಖಂಡರು ಮನವಿ ಮಾಡಿದ್ದು, ಈ ಬಾರಿ ಅಧ್ಯಕ್ಷ ಸ್ಥಾನವನ್ನು ಮುಸ್ಲಿಂ ಸಮುದಾಯಕ್ಕೆ ನೀಡಬೇಕು ಎಂದು ಒತ್ತಾಯಿಸಲಾಗಿದೆ ಎಂದರು.

ಫೈರೋಜ್, ಸೈಯ್ಯದ್ ಪಾಷಾ, ಅದ್ ಪಾಳ್ಯ, ಸೈಯ್ಯದ್ ಅಹ್ಮದ್, ಪಾಷಾ, ರಂಗಯ್ಯ, ಮಲ್ಲೇಶ್, ಶಬೀರ್ ಅಹ್ಮದ್, ರಘು, ಚಾಂದ್ ಪಾಷಾ ಸೇರಿದಂತೆ ನೂರಾರು ಮಹಿಳಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ಎದೆ ಹಾಲುಣಿಸಿದ ತಾಯಿ ದೇವರಿಗೆ ಸಮಾನ : ಬಿರಾದರ

• ಉದಯವಾಹಿನಿ ಔರಾದ್

ಮಕ್ಕಳಿಗೆ ಎದೆ ಹಾಲು ಅಮೃತಕ್ಕೆ ಸಮಾನವಾಗಿದ್ದು, ಹೆರಿಗೆಯಾದ ತಕ್ಷಣವೇ ಎಲ್ಲಾ ತಾಯಂದಿರು ಮಕ್ಕಳನ್ನು ಎದೆಹಾಲು ಕುಡಿಸುವುದು ಅಗತ್ಯವಾಗಿದೆ. ಎದೆ ಹಾಲುಣಿಸಿದ ತಾಯಿ ದೇವರಿಗೆ ಸಮಾನರು ಎಂದು ಬೀದರ್ ಭಾರತೀಯ ಕುಟುಂಬ ಯೋಜನೆ ಶಾಖಾ ವ್ಯವಸ್ಥಾಪಕ ಶ್ರೀನಿವಾಸ ಬಿರಾದರ ನುಡಿದರು. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಎಫ್ ಪಿಎಐ ಬೀದರ್ ಶಾಖೆ ವತಿಯಿಂದ ಏರ್ಪಡಿಸಿದ ಹಾಲುಣಿಸುವ ತಾಯಂದಿರಿಗಾಗಿ ವಿಶ್ವ ಸ್ತನ್ಯಪಾನ ವಾರ ಜಾಗೃತಿ ಕಾರ್ಯಕ್ರಮದಲ್ಲಿ ಸಸಿಗೆ ನಿರೇರೆಯುವ ಮೂಲಕ ಚಾಲನೆ ನೀಡಿ, ಮಾತನಾಡಿದ ಅವರು, ಮೊದಲು ಬರುವ ಹಳದಿ ವರ್ಣದ ಗಟ್ಟಿ ಹಾಲು ಮಗುವಿಗೆ ಮೊದಲ ಲಸಿಕೆಯಿದ್ದಂತೆ, ಇದರಲ್ಲಿ ರೋಗ ನಿರೋಧಕ ಶಕ್ತಿ ಅಡಗಿರುತ್ತದೆ. ಮಗುವಿಗೆ ಎರಡು ವರ್ಷ ತುಂಬುವ ತನಕ ಎದೆ ಹಾಲು ಕುಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

### ಸಮುದಾಯದ ಬಾಲಕಿಯೊಬ್ಬಳು ಅಧ್ಯಕ್ಷರ ಕೈ ಹಿಡಿದು ಮೆಲ್ಲನೆ ಮುಂದಕ್ಕೆ ಕರೆದೊಯ್ದು ವಾಸ್ತವದ ಚಿತ್ರಣ ತೋರಿಸಿದಳು

# ಸೌಕರ್ಯ ವಂಚಿತ ಸಿಂಧೋಳು: ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಗರಂ

• ಉದಯವಾಹಿನಿ ಹಾವೇರಿ

ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಹಿರಂಜಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಂಸಬಾವಿಯಲ್ಲಿ ಅಲೆಮಾರಿ ಸಿಂಧೋಳು ಸಮುದಾಯದವರು ವಾಸವಿರುವ ಸ್ಥಳಕ್ಕೆ ಗುರುವಾರ ಭೇಟಿ ನೀಡಿದ್ದ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ, ಅಲ್ಲಿಯ ಅವ್ಯವಸ್ಥೆ ಕಂಡು ಮರುಗಿದರು. ಸಮುದಾಯದವರಿಗೆ ಸರ್ಕಾರದ ಸೌಲಭ್ಯ ತಲುಪಿಸಲು ವಿಫಲರಾದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

**ಇಂದಿಗೂ ಬಯಲು ಶೌಚವೇ ಗತಿ**

ಜಿಲ್ಲಾ ಪ್ರವಾಸದಲ್ಲಿರುವ ನಾಗಲಕ್ಷ್ಮಿ ಅವರು ನಿಗದಿಯಂತೆ ಹಂಸಬಾವಿಗೆ ಭೇಟಿ ನೀಡಿದರು. ಸಿಂಧೋಳು ಸಮುದಾಯದ ಮಹಿಳೆಯರ ಸಮಸ್ಯೆಗಳನ್ನು ಆಲಿಸಿದರು. ಸ್ಥಳದಲ್ಲಿ ಕೆಸರು ಹೆಚ್ಚಾಗಿದ್ದರಿಂದ ಸಮುದಾಯದ ಬಾಲಕಿಯೊಬ್ಬಳು ಅಧ್ಯಕ್ಷರ ಕೈ ಹಿಡಿದು ಮೆಲ್ಲನೆ ಮುಂದಕ್ಕೆ ಕರೆದೊಯ್ದು ವಾಸ್ತವದ ಚಿತ್ರಣ ತೋರಿಸಿದಳು. ಸಮುದಾಯದವರು ವಾಸವಿರುವ ಜಾಗ, ಕೆರೆ ಪ್ರದೇಶದಂತಿದೆ. ಕೇಸರಿನಲ್ಲೇ ಜೋಪಡಿ ಕಟ್ಟಿಕೊಂಡು ವಾಸವಿದ್ದು, ವೃದ್ಧರು ಹಾಗೂ ಮಕ್ಕಳಿಗೆ ಜೀವ ಭಯವಿದೆ. ಕನಿಷ್ಠ ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲ. ನಮ್ಮಲ್ಲಿ ಇಂದಿಗೂ ಬಯಲು ಶೌಚವೇ ಗತಿ ಎಂದು ಮಹಿಳೆಯರು ಅಳಲು ತೋಡಿಕೊಂಡರು.

ವಾಸಕ್ಕೆ ಯೋಗ್ಯವಾದ ಮನೆಗಳಿಲ್ಲ. ಶಾಶ್ವತ ಸೂರು ಸಿಗುವ ಭರವಸೆಯೇ ಹೋಗಿದೆ. ಮಳೆ ಬಂದರೆ, ಜೋಪಡಿ ಇರುವ ಸ್ಥಳದಲ್ಲಿ ಓಡಾಡಲು ಆಗುವುದಿಲ್ಲ. ಇಲ್ಲಿಯ ಗರ್ಭಿಣಿಯವರಿಗೆ ಮಾತೃವಂದನ ನೋಂದಣಿ ಮಾಡಿಲ್ಲ. ಅವರಿಗೆ ಲಸಿಕೆಯನ್ನೂ ಹಾಕಿಸಿಲ್ಲ. ಅರ್ಹರಿಗೆ ವಿಧವಾ ವೇತನ, ಏಕ ಪೋಷಕ ಮಕ್ಕಳಿಗೆ ಪ್ರಾಯೋಜಕತ್ವ ಯೋಜನೆಯ ಸೌಲಭ್ಯವೂ ಸಿಕ್ಕಿಲ್ಲ ಎಂದು ಮಹಿಳೆಯರು ಹೇಳಿದರು.

**ದಾಖಲೆ ನೀಡಲು ಲಂಚ;** ನಮ್ಮ ಪ್ರದೇಶಕ್ಕೆ ಯಾವ ಅಧಿಕಾರಿಯೂ ಬರುವುದಿಲ್ಲ. ನಮಗೆ ಯಾವುದೇ ಜಾತಿ ಪ್ರಮಾಣ ಪತ್ರವೂ ಇಲ್ಲ. ಆಧಾರ್ ಕಾರ್ಡ್ ಹಾಗೂ ಪಡಿತರ ಚೀಟಿಯನ್ನೂ ನೀಡುತ್ತಿಲ್ಲ. ಅವುಗಳನ್ನು ಮಾಡಿಸಲು ಸಂಬಂಧಪಟ್ಟ ಕಚೇರಿಯ ಕೆಲವರು ಲಂಚ ಕೇಳುತ್ತಿದ್ದಾರೆ' ಎಂದು ಮಹಿಳೆಯರು ದೂರಿದರು. ಆಧಾರ್ ಕಾರ್ಡ್ ಮಾಡಿಸಲು 9,000, ವಿಧವಾ ವೇತನ ಮಾಡಿಸಲು 20,000 ಲಂಚ ಕೇಳುತ್ತಾರೆ.



ಉದಯವಾಹಿನಿ ಚಿತ್ರ

ಒಂದು ಹೊತ್ತಿನ ಊಟಕ್ಕೂ ನಿತ್ಯವೂ ದುಡಿಯುತ್ತಿರುವ ನಾವು, ಎಲ್ಲಿಂದ ಲಂಚ ಕೊಡುವುದು. ಆಧಾರ್ ಕಾರ್ಡ್ ಇಲ್ಲದಿದ್ದರಿಂದ ಮಕ್ಕಳನ್ನು ಶಾಲೆಗೆ ಸೇರಿಸಿಕೊಳ್ಳುತ್ತಿಲ್ಲ. ನಮ್ಮ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ' ಎಂದರು. ಶುದ್ಧ ಕುಡಿಯುವ ನೀರು ನೀಡುವಂತೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ನೀಡಿದ್ದೇವೆ. ಅವರಿಂದ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಕೂಡಲೇ ನಮ್ಮ ಪ್ರದೇಶದಲ್ಲಿ ಕೊಳವೆ ಬಾವಿ ಕೊರೆಸಬೇಕು. ಜಾತಿ ಪ್ರಮಾಣ ಪತ್ರ ಮಾಡಿಸಿಕೊಡಬೇಕು' ಎಂದು ಕೋರಿದರು.

**ನೋಟಿಸ್ ನೀಡಲು ಸೂಚನೆ:** ಮಹಿಳೆಯರ ಅಳಲು ಆಲಿಸಿದ ನಾಗಲಕ್ಷ್ಮಿ, ಅಲೆಮಾರಿ, ಅರೇ ಅಲೆಮಾರಿ ಜನರಿಗೆ ಕಾನೂನಾತ್ಮಕವಾಗಿ ಹಾಗೂ ಸಂವಿಧಾನಾತ್ಮಕವಾಗಿ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಅಧಿಕಾರಿಗಳಿಗೆ ತಿಳಿಹೇಳಿದರು. ಸಿಂಧೋಳು ಸಮುದಾಯದ ಜನರಿಗೆ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಒದಗಿಸಬೇಕು. ಯಾವುದೇ ಮಹಿಳೆ ಕಚೇರಿಗೆ ಬಂದರೆ, ಅವರಿಗೆ ಸರಿಯಾಗಿ ಸ್ಪಂದಿಸಬೇಕು. ಅವರ ಸಮಸ್ಯೆ ಆಲಿಸಿ ಅದನ್ನು ಪರಿಹರಿಸಲು ಜವಾಬ್ದಾರಿಯಿಂದ ಕೆಲಸ ಮಾಡಬೇಕು' ಎಂದು ಸೂಚಿಸಿದರು.

#### ತಾಲ್ಲೂಕು ಆಸ್ಪತ್ರೆ ನೂರೆಂಟು ಸಮಸ್ಯೆ

**ಇಲ್ಲಿಯ ತಾಲ್ಲೂಕು ಆಸ್ಪತ್ರೆಗೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅವರು ಭೇಟಿ ನೀಡಿ ಮಹಿಳಾ ರೋಗಿಗಳು ಹಾಗೂ ಮಹಿಳಾ ಸಿಬ್ಬಂದಿಯ ಅಹವಾಲು ಆಲಿಸಿದರು. 'ಆಸ್ಪತ್ರೆಯಲ್ಲಿ ಶುದ್ಧ ಕುಡಿಯುವ ನೀರಿಲ್ಲ. ವೈದ್ಯರು ಮತ್ತು ಸಿಬ್ಬಂದಿ ರೋಗಿಗಳನ್ನು ಕಾಳಜಿಯಿಂದ ನೋಡಿಕೊಳ್ಳುವುದಿಲ್ಲ. ಶೌಚಾಲಯ ನಿರ್ವಹಣೆ ಶೋಚನೀಯವಾಗಿದ್ದು ನಿತ್ಯವೂ ದುರ್ವಾಸನೆ ಬರುತ್ತದೆ' ಎಂದು ರೋಗಿಗಳು ಅಳಲು ತೋಡಿಕೊಂಡರು 'ಆಸ್ಪತ್ರೆಯಲ್ಲಿ ಬಿಸಿ ನೀರಿಲ್ಲ. ಸ್ವಚ್ಛತೆ ಕೊರತೆಯೂ ಇದೆ. ಸಮರ್ಪಕವಾಗಿ ಔಷಧಿ ದೊರೆಯುವುದಿಲ್ಲ. ಸ್ಕ್ಯಾನಿಂಗ್ ವ್ಯವಸ್ಥೆಯೂ ಇಲ್ಲ. ರಾತ್ರಿ ಸಮಯದಲ್ಲಿ ವೈದ್ಯರು ಇರುವುದಿಲ್ಲ. ರೋಗಿಗಳಿಗೆ ಸಣ್ಣ ಸಮಸ್ಯೆಯಿದ್ದರೂ ಶಿವಮೊಗ್ಗ ಹಾಗೂ ಹಾವೇರಿ ಜಿಲ್ಲಾಸ್ಪತ್ರೆಗೆ ಕಳುಹಿಸುತ್ತಿದ್ದಾರೆ. 108 ಆಂಬುಲೆನ್ಸ್ ಸೌಲಭ್ಯವೂ ಇಲ್ಲ ಎಂದು ಸಮಸ್ಯೆ ಹೇಳಿಕೊಂಡರು. ಐಸಿಯು ಇದ್ದರೂ ಇಲ್ಲದಂಥ ಸ್ಥಿತಿಯಿದೆ. ರಕ್ತ ಮೂತ್ರದ ಪರೀಕ್ಷಾ ಕೇಂದ್ರದಲ್ಲಿ ಸೂಕ್ತ ವ್ಯವಸ್ಥೆಯಿಲ್ಲ. ಹೊರಗಡೆ ಪರೀಕ್ಷೆಗೆ ಬರೆದುಕೊಡುತ್ತಾರೆ. ವೈದ್ಯರು ಹಾಗೂ ಸಿಬ್ಬಂದಿ ನಿಗದಿತ ಸಮಯದಲ್ಲಿ ಆಸ್ಪತ್ರೆಯಲ್ಲಿ ಇರುವುದಿಲ್ಲ ಎಂದು ಜನರು ದೂರಿದರು. ಆಸ್ಪತ್ರೆಯಲ್ಲಿ ಕೆಲಸ ಮಾಡುವ ಶುಶ್ರೂಷಕಿ ಹಾಗೂ ಡಿ ಗ್ರೂಪ್ ನೌಕರರು ಸಹ ತಮ್ಮ ವೇತನ ಪಾವತಿ ವಿಳಂಬವಾಗುತ್ತಿರುವ ಬಗ್ಗೆ ಅಳಲು ತೋಡಿಕೊಂಡರು.**

## ಕನ್ನಡ ನಾಮಫಲಕ ಅಳವಡಿಸದಿದ್ದಲ್ಲಿ ಉಗ್ರ ಪ್ರತಿಭಟನೆ- ಕೆಆರ್‌ವಿ ಎಚ್ಚರಿಕೆ

• ಉದಯವಾಹಿನಿ ಉಡುಪಿ

ಮುಂದಿನ 15 ದಿನಗಳಲ್ಲಿ ಜಿಲ್ಲೆಯ ಎಲ್ಲಾ ಅಂಗಡಿಗಳು, ಶೋ ರೂಂಗಳು, ಹೋಟೆಲ್‌ಗಳು ಮತ್ತು ಇತರ ವಾಣಿಜ್ಯ ಸಂಸ್ಥೆಗಳು ಕನಿಷ್ಠ 60 ಪ್ರತಿಶತ ಕನ್ನಡ ಭಾಷೆಯ ನಾಮಫಲಕಗಳನ್ನು ಅಳವಡಿಸದಿದ್ದರೆ ತೀವ್ರ ಪ್ರತಿಭಟನೆ ನಡೆಸುವುದಾಗಿ ಕರ್ನಾಟಕ ರಕ್ಷಣಾ ವೇದಿಕೆ ಉಡುಪಿ ಜಿಲ್ಲಾ ಘಟಕವು ಎಚ್ಚರಿಕೆ ನೀಡಿದೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕರ್ನಾಟಕ ರಕ್ಷಣಾ ವೇದಿಕೆ ಉಡುಪಿ ಜಿಲ್ಲಾ ಅಧ್ಯಕ್ಷ ಎ ಆರ್ ಪ್ರಭಾಕರ ಪೂಜಾರಿ, ರಾಜ್ಯ ಸರ್ಕಾರದ ನಿರ್ದೇಶನದಂತೆ, ಅಂಗಡಿಗಳು, ಶೋ ರೂಂಗಳು, ಹೋಟೆಲ್‌ಗಳು, ಶಾಲೆಗಳು, ಕಾಲೇಜುಗಳ ನಾಮಫಲಕಗಳು ಶೇಕಡಾ 60 ರಷ್ಟು ಕನ್ನಡದಲ್ಲಿರಬೇಕು. ಆದರೆ, ಉಡುಪಿಯಲ್ಲಿ ಈ ನಿಯಮವನ್ನು ಪಾಲಿಸುತ್ತಿಲ್ಲ ಎಂದು ಹೇಳಿದರು.

# ತಂತ್ರಜ್ಞಾನ ದೈತ್ಯ ಆಪಲ್ ಅಮೆರಿಕದಲ್ಲಿ 9 ಲಕ್ಷ ಕೋಟಿ ಹೂಡಿಕೆ

**ವಾಷಿಂಗ್ಟನ್:** ತಂತ್ರಜ್ಞಾನ ದೈತ್ಯ ಆಪಲ್ ಅಮೆರಿಕದಲ್ಲಿ ಹೆಚ್ಚುವರಿಯಾಗಿ 100 ಬಿಲಿಯನ್ ಡಾಲರ್ ಹೂಡಿಕೆ ಮಾಡುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದು, ಮುಂದಿನ ನಾಲ್ಕು ವರ್ಷಗಳಲ್ಲಿ ಒಟ್ಟು ಹೂಡಿಕೆಯನ್ನು 600 ಬಿಲಿಯನ್ ಡಾಲರ್‌ಗೆ ತಲುಪಲಿದೆ. ಇದು ಆಪಲ್ ಅಮೆರಿಕದಲ್ಲಿ ಮಾಡಿದ ಅತಿದೊಡ್ಡ ಹೂಡಿಕೆಯಾಗಿದೆ ಎಂದು ಸಆಪಲ್ ಸಿಇಒ ಟಿಮ್ ಕುಕ್ ಹೇಳಿದ್ದಾರೆ.

ಟ್ರಂಪ್, ಆಪಲ್ ತನ್ನ ದೇಶೀಯ ಪೂರೈಕೆ ಸರಪಳಿಯ ವೆಚ್ಚವನ್ನು ಗಣನೀಯವಾಗಿ ಹೆಚ್ಚಿಸುತ್ತದೆ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಮಾರಾಟವಾಗುವ ಐಫೋನ್‌ಗಳು ಅಮೆರಿಕದಲ್ಲಿ ತಯಾರಾಗುವುದನ್ನು ಖಚಿತಪಡಿಸಿಕೊಳ್ಳುವತ್ತ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ.

ಆಪಲ್ ಸಿಇಒ ಟಿಮ್ ಕುಕ್ ಅಮೆರಿಕದಲ್ಲಿ 100 ಬಿಲಿಯನ್ ಡಾಲರ್ (ಸುಮಾರು 8.7 ಲಕ್ಷ ಕೋಟಿ ರೂ.) ಹೊಸ ಹೂಡಿಕೆಯನ್ನು



ಘೋಷಿಸಿದ್ದಾರೆ. ಈಗ ಅಮೆರಿಕದಲ್ಲಿ ಆಪಲ್‌ನ ಒಟ್ಟು ಹೂಡಿಕೆ 600 ಬಿಲಿಯನ್ ಡಾಲರ್ ಕ್ಕೆ ಏರಿಕೆಯಾಗಲಿದೆ. ಟಿಮ್ ಕುಕ್ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಿ ಉಡುಗೊರೆಯನ್ನು ಸಹ ನೀಡಿದ್ದಾರೆ. ಈ ಉಡುಗೊರೆ ಐಫೋನ್‌ಗಳಲ್ಲಿ ಬಳಸುವ ಗಾಜಾದ ಗೊರಿಲ್ಲಾ ಗ್ಲಾಸ್‌ನಿಂದ ಮಾಡಿದ ದೊಡ್ಡ ಸುತ್ತಿನ ಡಿಸ್ಕ್ ಆಗಿದೆ. ಈ ಡಿಸ್ಕ್‌ನ ಮಧ್ಯದಲ್ಲಿ ಆಪಲ್‌ನ ಲೋಗೋವನ್ನು ಮಾಡಲಾಗಿದೆ. ಇದಲ್ಲದೆ, ಅಧ್ಯಕ್ಷ ಟ್ರಂಪ್ ಅವರ ಹೆಸರನ್ನು ಈ ಉಡುಗೊರೆಯ ಮೇಲ್ಭಾಗದಲ್ಲಿ ಬರೆಯಲಾಗಿದೆ ಮತ್ತು ಮೇಡ್ ಇನ್ ಯುಎಸ್ಎ 2025 ಎಂದು ಬರೆಯಲಾಗಿದೆ. ಈ ಡಿಸ್ಕ್ 24 ಕ್ಯಾರೆಟ್ ಚಿನ್ನದಿಂದ ಮಾಡಿದ ಸ್ಟ್ಯಾಂಡ್‌ನಲ್ಲಿ ಜೋಡಿಸಲಾಗಿದೆ. ಆಪಲ್ ಚೀನಾದ ಬದಲು ಭಾರತದಲ್ಲಿ ಐಫೋನ್ ಉತ್ಪಾದನೆಯತ್ತ ಗಮನ ಹರಿಸುತ್ತಿದೆ. ಅಮೆರಿಕದಲ್ಲಿ ಮಾರಾಟವಾಗುವ ಐಫೋನ್‌ಗಳಲ್ಲಿ 78% ಭಾರತದಲ್ಲಿ ತಯಾರಾಗುತ್ತಿವೆ. ಮಾರುಕಟ್ಟೆ ಸಂಶೋಧಕ ಕ್ಯಾನಲಿಸ್ ಪ್ರಕಾರ, 2025ರ ಜನವರಿ ಮತ್ತು ಜೂನ್ ನಡುವೆ ಭಾರತದಲ್ಲಿ 23.9 ಮಿಲಿಯನ್ ಐಫೋನ್‌ಗಳನ್ನು ತಯಾರಿಸಲಾಗಿದ್ದು, ಇದು ಕಳೆದ ವರ್ಷಕ್ಕಿಂತ 53% ಹೆಚ್ಚಾಗಿದೆ.

**ಒಂದು ಪ್ರಮುಖ ಹೆಜ್ಜೆ**

ಸಂಶೋಧನಾ ಸಂಸ್ಥೆ ಸೈಬರ್ ಮೀಡಿಯಾ ರಿಸರ್ಚ್ ಪ್ರಕಾರ, ಭಾರತದಿಂದ ಐಫೋನ್ ರಫ್ತು 22.88 ಮಿಲಿಯನ್ (2 ಕೋಟಿ 28 ಲಕ್ಷ) ಯೂನಿಟ್‌ಗಳಿಗೆ ಹೆಚ್ಚಾಗಿದೆ.

## ಮಿನಿ ನ್ಯೂಸ್

## ರಸ್ತೆ ಬದಿ ಕುಳಿತಿದ್ದವರ ಮೇಲೆ ಹರಿದ ಟ್ರಕ್, ನಾಲ್ಕು ಬಾಲಕರು ಬಲಿ

**ಗಡ್ಚಿರೋಲಿ:** ಮಹಾರಾಷ್ಟ್ರದ ಗಡ್ಚಿರೋಲಿ ಜಿಲ್ಲೆಯಲ್ಲಿ ಟ್ರಕ್ ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಅಪ್ರಾಪ್ತ ಬಾಲಕರು ಸಾವನ್ನಪ್ಪಿದ್ದು, ಇಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಆರ್ಮೋರಿ-ಗಡ್ಚಿರೋಲಿ ಹೆದ್ದಾರಿಯಲ್ಲಿ ಬೆಳಿಗ್ಗೆ 5 ಗಂಟೆ ಸುಮಾರಿಗೆ ಈ ಅಪಘಾತ ಸಂಭವಿಸಿದೆ ಎಂದು ಅವರು ತಿಳಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಜಿಲ್ಲಾ ಕೇಂದ್ರದಿಂದ 12 ಕಿ.ಮೀ ದೂರದಲ್ಲಿರುವ ಕಟ್ಲಿ ಗ್ರಾಮದಲ್ಲಿ 12 ರಿಂದ 16 ವರ್ಷ ವಯಸ್ಸಿನ ಆರು ಅಪ್ರಾಪ್ತ ವಯಸ್ಕರು ರಸ್ತೆಬದಿಯಲ್ಲಿ ಕುಳಿತಿದ್ದಾಗ ಟ್ರಕ್ ಡಿಕ್ಕಿ ಹೊಡೆದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅವರಲ್ಲಿ ನಾಲ್ವರು ಸಾವನ್ನಪ್ಪಿದರು ಮತ್ತು ಇಬ್ಬರು ಗಾಯಗೊಂಡರು ಎಂದು ಅವರು ಹೇಳಿದರು. ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ದುರದೃಷ್ಟಕರ ಮತ್ತು ದುರಂತ ಅಪಘಾತದಿಂದ ತೀವ್ರ ನೋವನ್ನು ಅನುಭವಿಸಿದ್ದಾರೆ ಎಂದು ಹೇಳಿದರು. ದುಃಖಿತ ಕುಟುಂಬಗಳಿಗೆ ನಾನು ನನ್ನ ಆಳವಾದ ಸಂತಾಪವನ್ನು ವ್ಯಕ್ತಪಡಿಸುತ್ತೇನೆ. ದುಃಖ ಮತ್ತು ನಷ್ಟದ ಈ ಕಠಿಣ ಕ್ಷಣದಲ್ಲಿ ನಾವು ಅವರೊಂದಿಗೆ ನಿಲ್ಲುತ್ತೇವೆ ಎಂದು ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

## ಅರುಂಧತಿ ರಾಯ್ ಆಜಾದಿ ಸೇರಿ 25 ಪುಸ್ತಕಗಳ ನಿಷೇಧ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ಸರ್ಕಾರವು ರಾಜ್ಯದಲ್ಲಿ 25 ಪುಸ್ತಕಗಳನ್ನು ನಿಷೇಧಿಸಲು ಆದೇಶ ಹೊರಡಿಸಿದೆ. ಈ ಪುಸ್ತಕಗಳು ಸುಳ್ಳು ಕಥೆಗಳನ್ನು ಸೃಷ್ಟಿಸುವ ಮೂಲಕ ಪ್ರತ್ಯೇಕತಾವಾದವನ್ನು ಉತ್ತೇಜಿಸುತ್ತಿವೆ ಎಂದು ಆರೋಪಿಸಲಾಗಿದೆ. ಈ ನಿಷೇಧಿತ ಪುಸ್ತಕಗಳಲ್ಲಿ ಪ್ರಮುಖವಾದ ಹೆಸರು ಲೇಖಕಿ ಮತ್ತು ಕಾರ್ಯಕರ್ತೆ ಅರುಂಧತಿ ರಾಯ್ ಅವರದ್ದು, ಅವರ ಕಾಶ್ಮೀರ ಸಮಸ್ಯೆಯ ಕುರಿತು ಬರೆದ ಆಜಾದಿ ಪುಸ್ತಕವನ್ನು ನಿಷೇಧಿಸಲಾಗಿದೆ.

ಇದರ ಹೊರತಾಗಿ, ಎ.ಜಿ. ನೂರಾನಿಯವರ ದಿ ಕಾಶ್ಮೀರ್ ಡಿಸ್ಪ್ಯೂಟ್ 1947-2012, ಸುಮಂತ್ರ ಬೋಸ್ ಅವರ ಕಾಶ್ಮೀರ್ ಅಟ್ ದಿ ಕ್ರಾಸ್‌ರೋಡ್ಸ್ ಮತ್ತು ಕಾಂಟೆಸ್ಟೆಡ್ ಲ್ಯಾಂಡ್ಸ್ ಪುಸ್ತಕಗಳನ್ನು ಸಹ ನಿಷೇಧಿಸಲಾಗಿದೆ.

## ಬಂದೂಕು ಹೆಗಲೇರಿಸಿಕೊಂಡ ಇಸ್ರೇಲ್

**ಜೆರುಸಲೇಂ:** ಹಿರಿಯ ಮಿಲಿಟರಿ ಅಧಿಕಾರಿಗಳ ಗಂಭೀರ ಅನುಮಾನಗಳ ಹೊರತಾಗಿಯೂ, ಗಾಜಾದಲ್ಲಿ ಇಸ್ರೇಲ್‌ನ ಮಿಲಿಟರಿ ಕಾರ್ಯಾಚರಣೆಗಳ ವಿಸ್ತರಣೆಯ ಕುರಿತು ನಿರ್ಧಾರವನ್ನು ಅಂತಿಮಗೊಳಿಸಲು, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಭದ್ರತಾ ಸಚಿವ ಸಂಪುಟ ಸಭೆ ಸೇರುವ ನಿರೀಕ್ಷೆಯಿದೆ.

ಐದು ತಿಂಗಳ ಅವಧಿಯಲ್ಲಿ ಗಾಜಾ ಪಟ್ಟಿಯ ವಿಶಾಲ ಪ್ರದೇಶಗಳನ್ನು ವಶಪಡಿಸಿಕೊಳ್ಳುವ ಮೂಲಕ, ಸುಮಾರು ಒಂದು ಮಿಲಿಯನ್ ಪ್ಯಾಲೆಸ್ಟೀನಿಯನ್ನರನ್ನು ಸ್ಥಳಾಂತರಿಸುವ ಕಾರ್ಯವನ್ನು ಹಂತಹಂತವಾಗಿ ಜಾರಿಗೊಳಿಸುವ ಉದ್ದೇಶ ಹೊಂದಿರುವ ಈ ಯೋಜನೆ, ಬೆಂಜಮಿನ್ ನೆತನ್ಯಾಹು ಅವರ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದು ಎಂದು ಬಣ್ಣಿಸಲಾಗಿದೆ. ಆಲ್ ಆಫ್ ಗಾಜಾ ಯೋಜನೆ ಈಗ ಇಸ್ರೇಲ್‌ನಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಆರಂಭದಲ್ಲಿ ಹಮಾಸ್‌ನ್ನು ನಿರ್ಮೂಲನೆಗೊಳಿಸುವ ಮತ್ತು ಇಸ್ರೇಲಿ ಒತ್ತೆಯಾಳುಗಳನ್ನು ಸುರಕ್ಷಿತವಾಗಿ ಬಿಡುಗಡೆ ಮಾಡುವ ಗುರಿಯನ್ನು ಹೊಂದಿದ್ದ ಈ ಯೋಜನೆ, ಇದೀಗ ಸಂಪೂರ್ಣವಾಗಿ ಗಾಜಾವನ್ನು ವಶಪಡಿಸಿಕೊಳ್ಳುವ ಮತ್ತು ಅದರ ಒಳಗೆ ಹೊಸ ಭದ್ರತಾ ಪರಿಧಿಯನ್ನು ಸ್ಥಾಪಿಸುವ ಯೋಜನೆಯಾಗಿ ಮಾರ್ಪಟ್ಟಿದೆ.

## ಘಾನಾದಲ್ಲಿ ಹೆಲಿಕಾಪ್ಟರ್ ಪತನ ಇಬ್ಬರು ಸಚಿವರು ಸೇರಿ 8 ಮಂದಿ ಸಾವು

**ಘಾನಾ:** ಇಲ್ಲಿನ ರಾಜಧಾನಿ ಅಕ್ರಾದಿಂದ ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ಘಾನಾ ವಾಯುಪಡೆಗೆ ಸೇರಿದ ಮಿಲಿಟರಿ ಹೆಲಿಕಾಪ್ಟರ್ ಪತನಗೊಂಡು ಇಬ್ಬರು ಸಚಿವರು ಸೇರಿ 8 ಜನ ಸಾವನ್ನಪ್ಪಿದ್ದಾರೆ. ಬೆಳಿಗ್ಗೆ ಅಕ್ರಾದಿಂದ ಚಿನ್ನದ ಗಣಿಗಾರಿಕಾ ಪ್ರದೇಶವಾದ ಒಬುವಾಸಿಗೆ ಹೋಗುತ್ತಿದ್ದ Z9 ಮಿಲಿಟರಿ ಹೆಲಿಕಾಪ್ಟರ್ ಘಾನಾದ ದಕ್ಷಿಣದಲ್ಲಿರುವ ಅಶಾಂತಿ ಎಂಬಲ್ಲಿ ಪತನಗೊಂಡಿದೆ. ಈ ವೇಳೆ ಘಾನಾದ ರಕ್ಷಣಾ ಸಚಿವ ಎಡ್ವರ್ಡ್ ಒಮಾನೆ ಬೋಮಾ, ಪರಿಸರ ಸಚಿವ ಇಬ್ರಾಹಿಂ ಮುರ್ತಲಾ ಮುಹಮ್ಮದ್ ಮೃತಪಟ್ಟಿರುವುದಾಗಿ ಘಾನಾ ಸರ್ಕಾರ ದೃಢಪಡಿಸಿದೆ.




### ● ಭಾರತ ಮತ್ತು ಅಮೆರಿಕ ಮಧ್ಯೆ ಸುಂಕದ ವೈಮನಸ್ಸಿನ ಮಧ್ಯೆ ಪಾಕಿಸ್ತಾನ ಟ್ರಂಪ್‌ಗೆ ಹತ್ತಿರತ್ತಿರ

# ಪಾಕಿಸ್ತಾನ ಸೇನಾ ಮುಖ್ಯಸ್ಥ ಆಸಿಮ್ ಮುನೀರ್ ಅಮೆರಿಕಗೆ ಭೇಟಿ

**ಅಮೆರಿಕ:** ಭಾರತ - ಪಾಕಿಸ್ತಾನದ ಸಂಬಂಧ ಹಳಸಿದೆ. ಭಾರತದ ಮೇಲಿನ ಆಮದು ಸುಂಕವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದುಪ್ಪಟ್ಟು ಮಾಡಿದ್ದಾರೆ. ಟ್ರಂಪ್‌ರ ಈ ನಿರ್ಧಾರವನ್ನು ಭಾರತ ಖಂಡತುಂಡವಾಗಿ ಖಂಡಿಸಿದೆ. ಈ ನಡುವೆ ಭಾರತದಿಂದ ದೂರ ಸರಿಯುತ್ತಿರುವ ಅಮೆರಿಕ ಪಾಕಿಸ್ತಾನಕ್ಕೆ ಹತ್ತಿರವಾದಂತೆ ಕಾಣುತ್ತಿದೆ. ಇದಕ್ಕೆ ಉದಾಹರಣೆ ಎಂಬಂತೆ ಪಾಕಿಸ್ತಾನ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಆಸಿಮ್ ಮುನೀರ್ ಎರಡು ತಿಂಗಳ ಅವಧಿಯಲ್ಲಿ ಎರಡನೇ ಭಾರಿ ಅಮೆರಿಕಕ್ಕೆ ಭೇಟಿ ಕೊಡಲಿದ್ದಾರೆ.

1. ಭಾರತ ಮತ್ತು ಅಮೆರಿಕ ಮಧ್ಯೆ ಸುಂಕದ ವೈಮನಸ್ಸಿನ ಮಧ್ಯೆ ಪಾಕಿಸ್ತಾನ ಟ್ರಂಪ್‌ಗೆ ಹತ್ತಿರತ್ತಿರ
2. ಪಾಕಿಸ್ತಾನ ಫೀಲ್ಡ್ ಮಾರ್ಷಲ್ ಆಸಿಮ್ ಮುನೀರ್ ಎರಡು ಬಾರಿ ಅಮೆರಿಕ ಭೇಟಿ
3. ಇನ್ನು ಕೆಲವೇ ತಿಂಗಳಲ್ಲಿ ನಿವೃತ್ತಿ ಹೊಂದುತ್ತಿರುವ ಪಾಕಿಸ್ತಾನ್ ಮಾರ್ಷಲ್ ಮುನೀರ್

ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಭೇಟಿ ಉಭಯ ದೇಶಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ಸಂಕೇತದಂತೆ ಕಾಣುತ್ತಿದೆ. ಮುನೀರ್ ಅಮೆರಿಕದಲ್ಲಿ ನಡೆಯುತ್ತಿರುವ ಸೆಂಟ್ರಲ್ ಕಮಾಂಡ್ ಜನರಲ್ ಮೈಕಲ್ ಕುರಿಲ್ಲಾ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಈ ಭೇಟಿಯಲ್ಲಿ ರಾಜಕೀಯ



ನಾಯಕರನ್ನೂ ಮುಖಾಮುಖಿಯಾಗುವ ಸಾಧ್ಯತೆ ಇದೆ.

**ಸರ್ಕಾರಿ ಅಧಿಕಾರಿಗಳಿಲ್ಲದೆ ಸ್ವಾಗತ:** ಆಸಿಮ್ ಮುನೀರ್ ಅಮೆರಿಕಕ್ಕೆ ಭೇಟಿ ಕೊಡುತ್ತಿರುವುದು ಇದೇ ಮೊದಲೇನಲ್ಲ.. ಕಳೆದ ಜೂನ್ ತಿಂಗಳಲ್ಲಿಯೂ ಮುನೀರ್, ಟ್ರಂಪ್ ರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದರು. ಪಹಲ್ಗಾಮ್ ದಾಳಿಗೆ ಪ್ರತಿಯಾಗಿ ಭಾರತ, ಆಪರೇಷನ್ ಸಿಂಧೂರ ನಡೆಸಿದ ಬೆನ್ನಲ್ಲೇ ಈ ಭೇಟಿ ಬಂದಿದ್ದು ವಿಶ್ವಮಟ್ಟದಲ್ಲಿ ಚರ್ಚೆಗೆ ಗ್ರಾಸವಾಗಿತ್ತು. ಇನ್ನು ಮುನೀರ್ ಮೊದಲ ಭೇಟಿ ವೇಳೆ, ಯಾವುದೇ ಪಾಕಿಸ್ತಾನಿ ಸರ್ಕಾರಿ ಅಧಿಕಾರಿಗಳಿಲ್ಲದೆ ಸ್ವಾಗತಿಸಿರುವುದು ಅಮೆರಿಕದ ರಾಜಕೀಯ ಆಡಳಿತದಲ್ಲಿ ವಿಶೇಷವಾದ ಘಟನೆ ಇದಾಗಿದೆ. ಈ ಸಭೆಯು ಎರಡು ಗಂಟೆಗಳ ಕಾಲ ನಡೆದಿದ್ದು, ಅಂದು ಕ್ರಿಪ್ಟೋ ಕರೆನ್ಸಿ, ಅಭಿವೃದ್ಧಿ, ಆರ್ಥಿಕ, ವ್ಯಾಪಾರದ ಬಗ್ಗೆ ಮಾತನಾಡಲಾಗಿತ್ತು.

ಪಾಕಿಸ್ತಾನವು ಭಯೋತ್ಪಾದನೆಯನ್ನು ಬೆಂಬಲಿಸುತ್ತಿದೆ ಎಂದು ಭಾರತವು ಆರೋಪಿಸುತ್ತಿದೆ. ಆದರೆ, ಅಮೆರಿಕವು ಪಾಕಿಸ್ತಾನವನ್ನು ಹೊಗಳಿ ಕೊಂಡಾಡುತ್ತಿತ್ತು. ಅಮೆರಿಕದ ಈ ನಡೆ ಹಳೆಯ ಚಾಳಿಯ ರೀತಿ, ಭಾರತ ಮತ್ತು ಪಾಕಿಸ್ತಾನವನ್ನು ಒಂದೇ ರೀತಿ ಕಾಣುವಂತಿದೆ ಎನ್ನಲಾಗುತ್ತಿದೆ.

**ಕುರಿಲ್ಲಾರಿಗೆ ಪ್ರಶಸ್ತಿ:** ಕುರಿಲ್ಲಾ ಇಸ್ಲಾಮಾಬಾದ್‌ಗೆ ಭೇಟಿ ನೀಡಿದಾಗ ಪಾಕಿಸ್ತಾನವು ಅವರಿಗೆ ನಿಶಾನ್-ಎ-ಇಮ್ತಿಯಾಜ್ ಪ್ರಶಸ್ತಿಯನ್ನು ನೀಡಿ ಗೌರವಿಸಿತು. ಇದು ಪಾಕಿಸ್ತಾನದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಸಬಂದಾಗಿದೆ. ಈ ಬೆಳವಣಿಗೆಗಳು ಪಾಕಿಸ್ತಾನ ಮತ್ತು ಅಮೆರಿಕ ನಡುವಿನ ಮಿಲಿಟರಿ ಮತ್ತು ಕಾರ್ಯತಂತ್ರದ ಸಹಕಾರ ಹೆಚ್ಚಳವನ್ನು ಸೂಚಿಸುತ್ತವೆ.

ಮೇ ತಿಂಗಳಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯನ್ನು ಕಡಿಮೆ ಮಾಡುವಲ್ಲಿ ಮುನೀರ್ ಪಾತ್ರ ಇದೆ ಎಂದು ಟ್ರಂಪ್ ಬಹಿರಂಗವಾಗಿ ಶ್ಲಾಘಿಸಿದರು. ಇದಕ್ಕೆ ಪ್ರತಿಯಾಗಿ, ಪಾಕಿಸ್ತಾನದ ಸೇನಾ ಮುಖ್ಯಸ್ಥರು ಟ್ರಂಪ್ ಅವರನ್ನು ನೊಬೆಲ್ ಶಾಂತಿ ಪ್ರಶಸ್ತಿಗೆ ನಾಮನಿರ್ದೇಶನ ಮಾಡಬೇಕೆಂದು ಬೆಂಬಲಿಸಿದರು. ಏಕೆಂದರೆ, ಟ್ರಂಪ್ ಅವರು ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧವನ್ನು ತಪ್ಪಿಸಿದ್ದಾರೆ ಎಂದು ಮುನೀರ್ ಅಭಿಪ್ರಾಯಪಟ್ಟರು. ಕೆಲವೇ ದಿನಗಳ ನಂತರ, ಪಾಕಿಸ್ತಾನ ಸರ್ಕಾರವು ಟ್ರಂಪ್ ಅವರನ್ನು ಅಧಿಕೃತವಾಗಿ ನಾಮನಿರ್ದೇಶನ ಕೂಡ ಮಾಡಿತು.

### ಪಾಕಿಸ್ತಾನವನ್ನು ಕೊಂಡಾಡಿದ ಟ್ರಂಪ್

**ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಪಾಕಿಸ್ತಾನದ ಪಾತ್ರ ಮುಖ್ಯ ಎಂದು ಟ್ರಂಪ್ ಈ ಹಿಂದೆ ಹೇಳಿದ್ದರು. ಪಾಕಿಸ್ತಾನದ ಭಯೋತ್ಪಾದನಾ ನಿಗ್ರಹ ಪ್ರಯತ್ನಗಳು ಅಮೆರಿಕದ ಉದ್ದೇಶಗಳನ್ನು ಸಾಧಿಸಲು ಸಹಾಯ ಮಾಡುತ್ತವೆ. ಪಾಕಿಸ್ತಾನವನ್ನು ಅಮೆರಿಕದ ಅದ್ಭುತ ಪಾಲುದಾರ ಎಂದು ಜನರಲ್ ಮೈಕೆಲ್ ಕುರಿಲ್ಲಾ ಅವರು ಹೌಸ್ ಆರ್ಮ್ಡ್ ಸರ್ವೀಸಸ್ ಕಮಿಟಿಯಲ್ಲಿ ಮಾತನಾಡಿದ್ದರು. ಮೇ ತಿಂಗಳಲ್ಲಿ ಪಹಲ್ಗಾಮ್ ದಾಳಿ ನಂತರ, ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆಯನ್ನು ಕಡಿಮೆ ಮಾಡುವಲ್ಲಿ ಮುನೀರ್ ಅವರ ಪಾತ್ರವನ್ನು ಟ್ರಂಪ್ ಶ್ಲಾಘಿಸಿದ್ದರು. ಭಾರತವು ಭಯೋತ್ಪಾದನೆಯನ್ನು ಪ್ರಾಯೋಜಿಸುತ್ತಿದೆ ಎಂದು ಜಗತ್ತಿಗೆ ತೋರಿಸಲು ಪ್ರಯತ್ನಿಸುತ್ತಿರುವ ಸಮಯದಲ್ಲಿ, ಅಮೆರಿಕವು ಪಾಕಿಸ್ತಾನವನ್ನು ಹೊಗಳಿದ್ದು ಭಾರತಕ್ಕೆ ಅಸಮಾಧಾನ ತಂದಿದೆ.**

### ಕುರಿಲ್ಲಾ ನಿವೃತ್ತಿ

**ಜನರಲ್ ಮೈಕಲ್ ಕುರಿಲ್ಲಾ ಶೀಘ್ರದಲ್ಲೇ ನಿವೃತ್ತರಾಗಲಿದ್ದಾರೆ. ಅವರು ಮಧ್ಯಪ್ರಾಚ್ಯದಲ್ಲಿ ಅಮೆರಿಕ ಮಿಲಿಟರಿ ಕಾರ್ಯಾಚರಣೆಗಳನ್ನು ನೋಡಿ ಕೊಳ್ಳುತ್ತಿದ್ದರು. ಕೆಲವು ತಿಂಗಳ ಹಿಂದೆ, ಕುರಿಲ್ಲಾ ಅವರು ಅಮೆರಿಕ ನೀಡಿದ ಮಾಹಿತಿಯ ಆಧಾರದ ಮೇಲೆ ಐದು ISIS-K ಭಯೋತ್ಪಾದಕರನ್ನು ಬಂಧಿಸಿದ್ದಕ್ಕಾಗಿ ಹೊಗಳಿಸಿಕೊಂಡಿದ್ದರು.**

## ಕೋವಿಡ್ ಪೀಡಿತರಿಗೆ ಅಂಟಿಬಿಯೋಟಿಕ್ಸ್ ಬಳಕೆ ವಿರುದ್ಧ ಡಬ್ಲ್ಯುಎಚ್‌ಒ ಸಲಹೆ

**ನವದೆಹಲಿ:** ತೀವ್ರವಾದ ಕೋವಿಡ್ ರೋಗಿಗಳಲ್ಲಿ ಬ್ಯಾಕ್ಟೀರಿಯಾದ ಸೋಂಕು ಶಂಕಿತವಾಗಿಲ್ಲದಿದ್ದಾಗಲೂ, ಪ್ರತಿಜೀವಕಗಳ ಬಳಕೆಯ ವಿರುದ್ಧ ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್‌ಒ) ಸಲಹೆ ನೀಡಿದೆ. ಜಾಗತಿಕ ಆರೋಗ್ಯ ಸಂಸ್ಥೆಯು ಕೋವಿಡ್ ಪೀಡಿತ ಜನರ ವೈದ್ಯಕೀಯ ನಿರ್ವಹಣೆಗಾಗಿ ನವೀಕರಿಸಿದ ಶಿಫಾರಸುಗಳನ್ನು ಬಿಡುಗಡೆ ಮಾಡಿದೆ, ವೈರಸ್‌ಗೆ ಪ್ರತಿಜೀವಕಗಳನ್ನು ಪಡೆದ ರೋಗಿಗಳ ಫಲಿತಾಂಶಗಳ ಇತ್ತೀಚಿನ ಮೆಟಾ-ವಿಶ್ಲೇಷಣೆಯಿಂದ ಉತ್ಪತ್ತಿಯಾದ ಪುರಾವೆಗಳನ್ನು ಆಧರಿಸಿದೆ ಎಂದು ಅದು ಹೇಳಿದೆ. ತೀವ್ರವಲ್ಲದ ಕೋವಿಡ್-19 ಮತ್ತು ಏಕಕಾಲೀನ ಬ್ಯಾಕ್ಟೀರಿಯಾದ ಸೋಂಕಿನ ಕಡಿಮೆ ಕ್ಲಿನಿಕಲ್ ಅನುಮಾನ ಹೊಂದಿರುವ ರೋಗಿಗಳಿಗೆ, ನಾವು ಪ್ರಾಯೋಗಿಕ ಪ್ರತಿಜೀವಕಗಳನ್ನು ಶಿಫಾರಸು ಮಾಡುವುದಿಲ್ಲ. ತೀವ್ರವಾದ ಕೋವಿಡ್-19 ಮತ್ತು ಏಕಕಾಲೀನ ಬ್ಯಾಕ್ಟೀರಿಯಾದ ಸೋಂಕಿನ ಕಡಿಮೆ ಕ್ಲಿನಿಕಲ್ ಅನುಮಾನ ಹೊಂದಿರುವ ರೋಗಿಗಳಿಗೆ, ನಾವು ಶಪ್ರಾಯೋಗಿಕ ಪ್ರತಿಜೀವಕಗಳನ್ನು ಸೂಚಿಸುವುದಿಲ್ಲ ಎಂದು ಡಬ್ಲ್ಯುಎಚ್‌ಒ ಹೇಳಿದೆ. ಈ ಮಾರ್ಗಸೂಚಿಗಳು





2020 ರಲ್ಲಿ ಮೊದಲ ಆವೃತ್ತಿಯಿಂದ ಹೊಸ ಮಾಹಿತಿ ಮತ್ತು ಸಾಂಕ್ರಾಮಿಕ ರೋಗದ ಬದಲಾಗುತ್ತಿರುವ ಸಂದರ್ಭಗಳಿಗೆ ಅನುಗುಣವಾಗಿ ವಿಕಸನಗೊಂಡಿವೆ ಎಂದು ಹೇಳಿದೆ. ಈ ಸಮಯದಲ್ಲಿ ಕೋವಿಡ್-19 ಕಾಯಿಲೆಗೆ ಗಮನಾರ್ಹ ಬದಲಾವಣೆಗಳು ಒಟ್ಟಾರೆಯಾಗಿ ಸೋಂಕಿನ ಪ್ರಮಾಣವನ್ನು ಕಡಿಮೆ ಮಾಡಿವೆ ಮತ್ತು ರೋಗದ ತೀವ್ರತೆಯನ್ನು ಕಡಿಮೆ ಮಾಡಿವೆ. ವಿಧಿಸಲಾಗಿದ್ದ ತುರ್ತು ಕ್ರಮಗಳನ್ನು ಸಹ ತೆಗೆದುಹಾಕಲಾಗಿದೆ ಮತ್ತು ಕೋವಿಡ್-19 ರೋಗಿಗಳಿಗೆ ಆರೈಕೆ ಸಾಮಾನ್ಯ ಆರೋಗ್ಯ ವ್ಯವಸ್ಥೆಗಳೊಂದಿಗೆ ಹೆಚ್ಚು ಸಂಯೋಜಿಸಲ್ಪಟ್ಟಿದೆ.

ಈ ವಿಭಿನ್ನ ವಾತಾವರಣವು ಅಸ್ತಿತ್ವದಲ್ಲಿರುವ ಎಲ್ಲಾ ಮಾರ್ಗದರ್ಶನಗಳ ವ್ಯಾಪ್ತಿ ಮತ್ತು ವಿಷಯದ ವಿಮರ್ಶೆಯನ್ನು ಪ್ರೇರೇಪಿಸಿದೆ. ಸ್ಪಷ್ಟ ಗಮನ ಮತ್ತು ಪ್ರಸ್ತುತತೆಯನ್ನು ಕಾಪಾಡಿಕೊಳ್ಳಲು, ಸಾಮಾನ್ಯ ವೈದ್ಯಕೀಯ ತತ್ವಗಳೆಂದು ಪರಿಗಣಿಸಲಾಗುವ ಶಿಫಾರಸುಗಳನ್ನು ಮತ್ತು ಕೋವಿಡ್-19 ನಿರ್ವಹಣೆಗೆ ಇನ್ನು ಮುಂದೆ ನಿರ್ದಿಷ್ಟವಾಗಿಲ್ಲದ ಶಿಫಾರಸುಗಳನ್ನು ತೆಗೆದುಹಾಕಿದ್ದೇವೆ ಎಂದು ಹೇಳಿದೆ.

**ಕೋವಿಡ್-19 ಸಾಂಕ್ರಾಮಿಕ ರೋಗಶಾಸ್ತ್ರ ಮತ್ತು ತೀವ್ರತೆ ಬದಲಾಗಿರುವುದರಿಂದ ಮತ್ತು ತುರ್ತು ಕ್ರಮಗಳು ಕಡಿಮೆಯಾಗಿರುವುದರಿಂದ, ಹಲವಾರು ಶಿಫಾರಸುಗಳ ಹಿಂದಿನ ಪುರಾವೆಗಳು ಬದಲಾಗಿವೆ ಎಂದು ಡಬ್ಲ್ಯು ಎಚ್‌ಒ ಹೇಳಿದೆ. ಸಮಾನಾಂತರವಾಗಿ, ಆರೋಗ್ಯ ವ್ಯವಸ್ಥೆಗಳು ಮತ್ತು ಜಾಗತಿಕ ಪರಿಸರದ ವಿಕಸನವು 2020 ಕ್ಕೆ ಹೋಲಿಸಿದರೆ 2024ರಲ್ಲಿ ಶಿಫಾರಸುಗಳನ್ನು ಸಂಪೂರ್ಣವಾಗಿ ವಿಭಿನ್ನ ಸಂದರ್ಭದಲ್ಲಿ ಜಾರಿಗೆ ತಂದಿದೆ.**

## ಯುವತಿ ಮೇಲೆ ಸಾಮೂಹಿಕ ಅತ್ಯಾಚಾರ

**ಸಿಧಿ:** ಮದುವೆಯಾಗಬೇಕಿದ್ದ ಹುಡುಗನ ಜತೆ ಹೊರಗೆ ಹೋಗಿದ್ದ ಯುವತಿಯನ್ನು ದುಷ್ಕರ್ಮಿಗಳು ಅಪಹರಿಸಿ ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಮಧ್ಯಪ್ರದೇಶದ ಸಿಧಿ ಜಿಲ್ಲೆಯಲ್ಲಿ ನಡೆದಿದೆ. ಆಕೆಯ ಜತೆಗಿದ್ದ ವ್ಯಕ್ತಿಯನ್ನು ಥಳಿಸಿದ್ದಾರೆ. ಸಾಮೂಹಿಕ ಅತ್ಯಾಚಾರದಲ್ಲಿ ನಾಲ್ವರು ಭಾಗಿಯಾಗಿದ್ದು, ಅವರಲ್ಲಿ ಮೂವರನ್ನು ಬಂಧಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ) ಅರವಿಂದ್ ಶ್ರೀವಾಸ್ತವ ಪಿಟಿಐಗೆ ತಿಳಿಸಿದ್ದಾರೆ.



ತಲೆಮರೆಸಿಕೊಂಡಿರುವ ಆರೋಪಿಗಳನ್ನು ಬಂಧಿಸಲು ಐದು ಪೊಲೀಸ್ ತಂಡಗಳನ್ನು ನಿಯೋಜಿಸಲಾಗಿದೆ ಎಂದು ಅವರು ಹೇಳಿದರು. ಚುರ್ಹತ್ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಯಾಗಿರುವ ಸಂತ್ರಸ್ತೆ ಮದುವೆ ನಿಶ್ಚಯವಾಗಿದ್ದ ಹುಡುಗನೊಂದಿಗೆ ಹೊರಗೆ ಹೋಗಿದ್ದರು. ಕಥೌಥಾ ಬಳಿಯ ರಸ್ತೆಬದಿಯಲ್ಲಿ ತಮ್ಮ ಮೋಟಾರ್ ಸೈಕಲ್ ನಿಲ್ಲಿಸಿದ ನಂತರ, ಅವರು ಹತ್ತಿರದ ಬೆಟ್ಟಕ್ಕೆ ಹೋಗಿದ್ದರು. ಆ ಪ್ರದೇಶದಲ್ಲಿ ಓಡಾಡುತ್ತಿದ್ದ ನಾಲ್ವರು ಇವರನ್ನು ಗಮನಿಸಿದ್ದರು, ಅವರು ಆ ಹುಡುಗನನ್ನು ಹೊಡೆದು, ಓಡಿಸಿ ಆಕೆಯ ಮೇಲೆ ಅತ್ಯಾಚಾರವೆಸಗಿದ್ದಾರೆ ಎಂದು ಪೊಲೀಸ್ ಅಧಿಕಾರಿ ಹೇಳಿದರು. ಆರೋಪಿಗಳ ಹಿಡಿತದಿಂದ ತಪ್ಪಿಸಿಕೊಂಡ ನಂತರ, ಯುವತಿ ತನ್ನ ಹುಡುಗನನ್ನು ಸಂಪರ್ಕಿಸಿದ್ದಾಳೆ. ಕೂಡಲೇ ಇಬ್ಬರು ಸೇರಿ ಪೊಲೀಸ್ ಠಾಣೆಗೆ ತೆರಳು ದೂರು ದಾಖಲಿಸಿದ್ದಾರೆ.

ಇಬ್ಬರ ದೂರಿನ ಮೇರೆಗೆ ಪೊಲೀಸರು ತಕ್ಷಣ ಪ್ರಕರಣ ದಾಖಲಿಸಿಕೊಂಡು ಚಿಕಿತ್ಸೆಗಾಗಿ ಸೆಮಾರಿಯಾದಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕಳುಹಿಸಿದ್ದಾರೆ ಎಂದು ಎಎಸ್ಪಿ ತಿಳಿಸಿದ್ದಾರೆ. ಸಾಮೂಹಿಕ ಅತ್ಯಾಚಾರ ಘಟನೆಯ ಬಗ್ಗೆ ವಿರೋಧ ಪಕ್ಷ ಕಾಂಗ್ರೆಸ್ ಸರ್ಕಾರವನ್ನು ಗುರಿಯಾಗಿ ಸಿಕೊಂಡಿದ್ದು, ಈ ಅಪರಾಧವು ಮಧ್ಯಪ್ರದೇಶದ ಕಾನೂನು ಮತ್ತು ಸುವ್ಯವಸ್ಥೆಯ ಶೋಚನೀಯ ಸ್ಥಿತಿಯನ್ನು ಬಹಿರಂಗಪಡಿಸಿದೆ ಎಂದು ಹೇಳಿದೆ.

## ಹರ್ಷವರ್ಧನ್ ಜಾಧವ್‌ಗೆ 1 ವರ್ಷ ಜೈಲು

**ನಾಗ್ಪುರ:** ಪೊಲೀಸ್ ಅಧಿಕಾರಿಯ ಮೇಲೆ ಹಲ್ಲೆ ನಡೆಸಿದ ಪ್ರಕರಣದಲ್ಲಿ ಮಾಜಿ ಶಾಸಕ ಹರ್ಷವರ್ಧನ್ ರೈಭನ್ ಜಾಧವ್‌ಗೆ ಇಲ್ಲಿನ ನ್ಯಾಯಾಲಯ ಒಂದು ವರ್ಷ ಜೈಲು ಶಿಕ್ಷೆ ವಿಧಿಸಿದೆ. ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಆರ್‌ಜೆ ರೈ ಶಿಕ್ಷೆ ವಿಧಿಸಿದ್ದಾರೆ. ಬಿಜೆಪಿ ನಾಯಕ ಮತ್ತು ಮಾಜಿ ಕೇಂದ್ರ ಸಚಿವ ರಾವ್ ಸಾಹೇಬ್ ದಾನ್ವೆ ಅವರ ಅಳಿಯ ಜಾಧವ್, ನಾಗ್ಪುರ ಪೊಲೀಸ್ ಇನ್ಸ್‌ಪೆಕ್ಟರ್ ಒಬ್ಬರಿಗೆ ಕಪಾಳಮೋಕ್ಷ ಮಾಡಿದ ಆರೋಪ ಎದುರಿಸುತ್ತಿದ್ದರು. ಅವರು ಈ ಹಿಂದೆ ಮಹಾರಾಷ್ಟ್ರ ವಿಧಾನಸಭೆಯಲ್ಲಿ ಅವರು ಶಿವಸೇನೆ, ಮಹಾರಾಷ್ಟ್ರ ನವ ನಿರ್ಮಾಣ ಸೇನೆ ಸದಸ್ಯರಾಗಿದ್ದರು. 2014ರ ಡಿಸಂಬರ್‌ನಲ್ಲಿ ಅಂದಿನ ಶಿವಸೇನೆ (ಅವಿಭಜಿತ) ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು ಹೋಟೆಲ್‌ನಲ್ಲಿ ಸಭೆ ವೇಳೆ ಜಾಧವ್ ಇನ್ಸ್‌ಪೆಕ್ಟರ್ ಪರಾಗ್ ಜಾಧವ್ ಅವರಿಗೆ ಕಪಾಳಮೋಕ್ಷ ಮಾಡಿದ್ದರು ಎಂದು ಸೋನೆಗಾಂವ್ ಪೊಲೀಸ್ ಠಾಣೆ ಅಧಿಕಾರಿಗಳು ಈ ಹಿಂದೆ ತಿಳಿಸಿದ್ದಾರೆ. ಪ್ರಕರಣ ಸಂಬಂಧ ಈ ಹಿಂದೆ ತಾತ್ಕಾಲಿಕ ಜಾಮೀನು ನೀಡಲಾಗಿತ್ತು ಆದರೆ ವಿಚಾರಣೆಗೆ ಹಾಜರಾಗಲು ವಿಫಲರಾದರು, ನಂತರ ನ್ಯಾಯಾಲಯವು ಬಂಧನ ವಾರಂಟ್ ಹೊರಡಿಸಿತು. ಈ ವರ್ಷದ ಫೆಬ್ರವರಿಯಲ್ಲಿ ಜಾಧವ್ ಅವರನ್ನು ನ್ಯಾಯಾಂಗ ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಮುಂದೆ ಹಾಜರು ಪಡಿಸಲಾಯಿತು, ನಂತರ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೊಳಪಡಿಸಲಾಯಿತು.



**ಪೊಲೀಸರ ಮೇಲೆ ಹಲ್ಲೆ ಪ್ರಕರಣ**

ಆದಾಗ್ಯೂ, ಅವರ ಆರೋಗ್ಯ ಹದಗೆಟ್ಟ ನಂತರ ಅವರನ್ನು ನಂತರ ಇಲ್ಲಿನ ಸರ್ಕಾರಿ ಮೇಯೊ ಆಸ್ಪತ್ರೆಗೆ ದಾಖಲಿಸಲಾಯಿತು ಎಂದು ಪೊಲೀಸ್ ಅಧಿಕಾರಿಯೊಬ್ಬರು ಈ ಹಿಂದೆ ತಿಳಿಸಿದ್ದಾರೆ. ನಂತರ ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಲಾಯಿತು. ಪಬ್ಲಿಕ್ ಪ್ರಾಸಿಕ್ಯೂಟರ್ ಚಾರುಶೀಲಾ ಪೌನಿಕರ್ ಜಾಧವ್ ವಿರುದ್ಧದ ಪ್ರಕರಣವನ್ನು ಸಾಬೀತುಪಡಿಸಿದರು. ಪಕರಣದಡಿಯಲ್ಲಿ ನ್ಯಾಯಾಲಯವು ಜಾಧವ್ ಅವರನ್ನು ತಪ್ಪಿತಸ್ಥರೆಂದು ಘೋಷಿಸಿದೆ. ಅವರಿಗೆ ಒಂದು ವರ್ಷ ಜೈಲು ಶಿಕ್ಷೆ ಹಾಗು 10,000 ರೂ. ದಂಡವನ್ನು ವಿಧಿಸಲಾಗಿದೆ.

## ಬುಲೆಟ್‌ಶೆಲ್‌ಗಳು ಪತ್ತೆ

**ನವದೆಹಲಿ:** ಸ್ವಾತಂತ್ರ್ಯ ದಿನಾಚರಣೆಗೆ ಕೆಲವೇ ದಿನಗಳು ಬಾಕಿ ಇರುವ ಸಂದರ್ಭದಲ್ಲೇ ಕೆಂಪು ಕೋಟೆಯಲ್ಲಿ ಬುಲೆಟ್ ಶೆಲ್‌ಗಳು ಪತ್ತೆಯಾಗಿರುವುದು ಆತಂಕಕ್ಕೆ ಎಡೆ ಮಾಡಿಕೊಟ್ಟಿದೆ. ಸ್ವಾತಂತ್ರ್ಯ ದಿನಾಚರಣೆಯಂದು ಪ್ರಧಾನಿ ನರೇಂದ್ರ ಮೋದಿ ಭಾಷಣ ಮಾಡಲಿದ್ದಾರೆ. ಅವುಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದೆ. ಇದಲ್ಲದೆ, ಒಂದು ಸರ್ಕ್ಯೂಟ್ ಬೋರ್ಡ್ ಸಹ ಕಂಡುಬಂದಿದೆ. ಅದು ಕೂಡ ಹಳೆಯದಾಗಿ ಕಾಣುತ್ತದೆ. ಎರಡೂ ಕಾರ್ಟ್ರಿಡ್ಜ್‌ಗಳು ಹಾನಿಗೊಳಗಾಗಿರುವಂತೆ ಕಾಣುತ್ತಿವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಕೆಂಪು ಕೋಟೆಯ ಭದ್ರತೆಗಾಗಿ ನಿಯೋಜಿಸಲಾದ ಹೆಡ್ ಕಾನ್ಸ್‌ಟೇಬಲ್ ಸೇರಿದಂತೆ 7 ಪೊಲೀಸರನ್ನು ನಿರ್ಲಕ್ಷ್ಯದ ಆರೋಪದ ಮೇಲೆ ಅಮಾನತುಗೊಳಿಸಲಾಗಿದೆ.

ವಾಸ್ತವವಾಗಿ, ಪ್ರತಿದಿನ ಪೊಲೀಸರು ಮತ್ತು ಭದ್ರತಾ ಸಂಸ್ಥೆಗಳು ಕೆಂಪು ಕೋಟೆಯಲ್ಲಿ ಸ್ವಾತಂತ್ರ್ಯ ದಿನದಂದು ನಡೆಯಲಿರುವ ಕಾರ್ಯಕ್ರಮಕ್ಕಾಗಿ ಅಣಕು ಕವಾಯತುಗಳನ್ನು ನಡೆಸುತ್ತವೆ. ದೆಹಲಿ ಪೊಲೀಸ್ ವಿಶೇಷ ಸಿಬ್ಬಂದಿಯ ತಂಡವು ನಾಗರಿಕ ಉಡುಪಿನಲ್ಲಿ ನಕಲಿ ಬಾಂಬ್‌ನೊಂದಿಗೆ ಕೆಂಪು ಕೋಟೆ ಆವರಣವನ್ನು ಪ್ರವೇಶಿಸಿತು. ಆದರೆ ಕೆಂಪು ಕೋಟೆಯ ಭದ್ರತೆಗಾಗಿ ನಿಯೋಜಿಸಲಾದ ಪೊಲೀಸರಿಗೆ ಬಾಂಬ್ ಸಿಗಲಿಲ್ಲ, ನಂತರ ಭದ್ರತೆಗಾಗಿ ನಿಯೋಜಿಸಲಾದ ಎಲ್ಲಾ 7 ಪೊಲೀಸರನ್ನು ಅಮಾನತುಗೊಳಿಸಲಾಗಿದೆ. ಇದರೊಂದಿಗೆ, ಡಿಸಿಪಿ ರಾಜಾ ಬಂಥಿಯಾ ಉಳಿದ ಭದ್ರತಾ ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು. ಇದಲ್ಲದೆ, ದೆಹಲಿ ಪೊಲೀಸರು ಕೆಂಪು ಕೋಟೆ ಆವರಣಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದ ಸುಮಾರು 20-25 ವರ್ಷ ವಯಸ್ಸಿನ 6 ಬಾಂಗ್ಲಾದೇಶಿ ನಾಗರಿಕರನ್ನು ಬಂಧಿಸಿದ್ದರು. ಇವರೆಲ್ಲರೂ ದೆಹಲಿಯ ವಿವಿಧ ಪ್ರದೇಶಗಳಲ್ಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಅಕ್ರಮ ಬಾಂಗ್ಲಾದೇಶಿಗಳಾಗಿದ್ದಾರೆ.

## ಪತ್ರಕರ್ತನ ಹತ್ಯೆ: ಇಬ್ಬರು ಅಪರಾಧಿಗಳ ಎನ್‌ಕೌಂಟರ್

**ಸೀತಾಪುರ:** ಉತ್ತರ ಪ್ರದೇಶ ವಿಶೇಷ ಕಾರ್ಯಪಡೆ (ಎಸ್‌ಟಿಎಫ್) ಮತ್ತು ಸ್ಥಳೀಯ ಪೊಲೀಸರ ಜಂಟಿ ತಂಡ ನಡೆಸಿದ ಎನ್‌ಕೌಂಟರ್‌ನಲ್ಲಿ ಪತ್ರಕರ್ತನ ಹತ್ಯೆ ಪ್ರಕರಣದಲ್ಲಿ ಬೇಕಾಗಿದ್ದ ಇಬ್ಬರು ಅಪರಾಧಿಗಳು ಸಾವನ್ನಪ್ಪಿದ್ದಾರೆ.

ಪತ್ರಕರ್ತ ರಾಘವೇಂದ್ರ ಬಾಜ್‌ಪೈ ಅವರ ಹತ್ಯೆ ಪ್ರಕರಣದಲ್ಲಿ ಬೇಕಾಗಿದ್ದ ಇಬ್ಬರು ಅಪರಾಧಿಗಳು ಹರ್ದೋಯ್‌ನಿಂದ ಸೀತಾಪುರ ಕಡೆಗೆ ಹೋಗುತ್ತಿದ್ದಾರೆ ಎಂದು ಪೊಲೀಸರಿಗೆ ಗುಪ್ತಚರ ಮಾಹಿತಿ ಸಿಕ್ಕಿತ್ತು ಎಂದು ಪೊಲೀಸ್ ವರಿಷ್ಠಾಧಿಕಾರಿ ಅಂಕುರ್ ಅಗರ್ವಾಲ್ ತಿಳಿಸಿದ್ದಾರೆ.

ಸುಳಿವಿನ ಮೇರೆಗೆ, ಎಸ್‌ಟಿಎಫ್ ಮತ್ತು ಸೀತಾಪುರ ಪೊಲೀಸರ ಜಂಟಿ ತಂಡವು ಪಿಸಾವನ್ ಪೊಲೀಸ್ ಠಾಣೆ ಪ್ರದೇಶದಲ್ಲಿ ತಪಾಸಣೆ ಮತ್ತು ಕೂಂಬಿಂಗ್ ಕಾರ್ಯಾಚರಣೆಗಳನ್ನು ಪ್ರಾರಂಭಿಸಿತು ಮತ್ತು ಮೋಟಾರ್ ಸೈಕಲ್‌ನಲ್ಲಿ ಇಬ್ಬರು ಆರೋಪಿಗಳಾದ ರಾಜು ತಿವಾರಿ ಅಲಿಯಾಸ್ ರಿಜ್ವಾನ್ ಮತ್ತು ಸಂಜಯ್ ತಿವಾರಿ ಅವರನ್ನು ಗುರುತಿಸಲಾಯಿತು. ಅವರಿಗೆ ಎಚ್ಚರಿಕೆ ನೀಡಿ ನಿಲ್ಲಿಸುವಂತೆ ಕೇಳಿದಾಗ, ಇಬ್ಬರೂ ಪೊಲೀಸ್ ತಂಡದ ಮೇಲೆ ಗುಂಡು ಹಾರಿಸಿದರು. ಈ ವೇಳೆ



ಆತರಕ್ಷಣೆಗಾಗಿ ನಮ ತಂಡ ಗುಂಡು ಹಾರಿಸಿದಾಗ ಇಬ್ಬರೂ ರೋಪಿಗಳು ಸಾವನ್ನಪ್ಪಿದರು ಎಂದು ಹೆಚ್ಚುವರಿ ಮಹಾನಿರ್ದೇಶಕ ಅಮಿತಾಭ್ ಯಶ್ ಹೇಳಿದರು.

ಪತ್ರಕರ್ತ ರಾಘವೇಂದ್ರ ಬಾಜ್‌ಪೈ ಕೊಲೆ ಪ್ರಕರಣದಲ್ಲಿ ಈ ಇಬ್ಬರು ಅಪರಾಧಿಗಳು ಬೇಕಾಗಿದ್ದರು ಮತ್ತು ಅವರನ್ನು ಬಂಧಿಸಿದವರಿಗೆ ತಲಾ 1 ಲಕ್ಷ ರೂ. ಬಹುಮಾನ ಘೋಷಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಮಹೋಲಿ ಪ್ರದೇಶದ ವಿಕಾಸನಗರ ನಿವಾಸಿ ಬಾಜ್‌ಪೈ (36) ಅವರನ್ನು ಮಾರ್ಚ್ 8 ರಂದು ಲಕ್ನೋ-ದೆಹಲಿ ರಾಷ್ಟ್ರೀಯ ಹೆದ್ದಾರಿಯ ಹೆಂಪುರ್ ರೈಲ್ವೆ ಮೇಲ್ಸೇತುವೆ ಬಳಿ ಮೋಟಾರ್ ಸೈಕಲ್‌ನಲ್ಲಿ ಸೀತಾಪುರಕ್ಕೆ ಹೋಗುತ್ತಿದ್ದಾಗ ಗುಂಡಿಕ್ಕಿ ಕೊಲ್ಲಲಾಯಿತು.


# ಐರ್ಲೆಂಡ್‌ನಲ್ಲಿ 6 ವರ್ಷದ ಬಾಲಕಿ ಜಡೆ ಎಳೆದು, ಸೈಕಲ್‌ನಲ್ಲಿ ಗುದ್ದಿ ಜನಾಂಗೀಯ ನಿಂದನೆ

### ● ಭಾರತೀಯ ಮೂಲದ ಬಾಲಕಿ ನಿಯಾ ನವೀನ್ ಮೇಲೆ ಹಲ್ಲೆ, ಮಕ್ಕಳಿಗೆ ಶಿಕ್ಷೆ ನೀಡಲು ಬದಲು ಅವರಿಗೆ ಸಮಾಲೋಚನೆ ನೀಡಿ ಎಂದ ಬಾಲಕಿ ತಾಯಿ

**ಐರ್ಲೆಂಡ್:** ಐರ್ಲೆಂಡ್‌ನಲ್ಲಿ ಭಾರತೀಯ ಮೂಲದ ಆರು ವರ್ಷದ ಬಾಲಕಿಯೊಬ್ಬರು ಜನಾಂಗೀಯ ನಿಂದನೆ ಒಳಗಾಗಿದ್ದಾರೆ. ಕೇರಳದ ಕೊಟ್ಟಾಯಂ ಮೂಲದ ನಿಯಾ ನವೀನ್ ಎಂಬ ಬಾಲಕಿ ವಾಟರ್ ಫೋರ್ಡ್ ನಗರದಲ್ಲಿ ಆಟವಾಡುತ್ತಿದ್ದಾಗ 12 ರಿಂದ 14 ವರ್ಷ ವಯಸ್ಸಿನ ಮಕ್ಕಳ ಗುಂಪು ಆಕೆಯನ್ನು ನಿಂದಿಸಿ, ಕೊಳಕು ಭಾರತಿಯರು, ಇಲ್ಲಿಂದ ಹಿಂತಿರುಗಿ ಎಂದು ಆಕೆಯ ಖಾಸಗಿ ಅಂಗಾಗಕ್ಕೆ ಹಾನಿ ಮಾಡಿ ಮತ್ತು ಕೂದಲು ಎಳೆದಾಡಿರುವ ಘಟನೆ ನಡೆದಿದೆ.

ನವೀನ್ ಅವರ ತಾಯಿ ಅನುಪಾ ಅಚ್ಯುತನ್ ಮಾತನಾಡಿ, ಆರು ವರ್ಷದ ನಿಯಾ ನವೀನ್ ಎಂಬ ಬಾಲಕಿ ವಾಟರ್‌ಫೋರ್ಡ್ ನಗರದಲ್ಲಿ ಆಟವಾಡುತ್ತಿದ್ದಳು. ಮಕ್ಕಳ ಗುಂಪೊಂದು ಮಗಳ ಮುಖಕ್ಕೆ ಹೊಡೆದು, ಸೈಕಲ್‌ನಿಂದ ಖಾಸಗಿ ಅಂಗಾಂಗಕ್ಕೆ ಹೊಡೆದು ಕುತ್ತಿಗೆಗೆ ಗುದ್ದಿ, ಕೂದಲನ್ನು ಎಳೆದು ಹಲ್ಲೆ ಮಾಡಿದ್ದಾರೆ ಎಂದು ಹೇಳಿದ್ದಾರೆ.

ಸರಿಸುಮಾರು ರಾತ್ರಿ 7.30 ಆಗಿತ್ತು. ಅವಳು ಮನೆಯೊಳಗೆ ಆಡುತ್ತಿದ್ದಳು. ಆನಂತರ ಹೊರಗೆ ಸೈಕ್ಲಿಂಗ್‌ಗಾಗಿ ಹೊರಗೆ ಹೋಗಿದ್ದಳು. ನಾನು ಮಗುವಿಗೆ ಹಾಲುಣಿಸಲು ಕೆಲವು ನಿಮಿಷಗಳ ಕಾಲ ಮನೆಗೆ ಹೋದೆ. ಅದಾಗಿ, ಒಂದು ನಿಮಿಷದ ನಂತರ ಮಗಳು ಅಳುತ್ತಾ ಒಳಗೆ ಬಂದಳು. ಮಾತನಾಡುವುದಕ್ಕಿಂತ ಅಳುತ್ತಲೇ ಇದ್ದಳು ಉತ್ತರಿಸಿಲ್ಲ.



### ಇನ್ಮುಂದೆ ಆಟ ಆಡೊಲ್ಲ ಎಂದು ಅಳಲು

**ಅನುಪಾ ಅಚ್ಯುತನ್ ಅವರು ನರ್ಸ್ ಆಗಿ ಕೆಲಸ ಮಾಡುತ್ತಿದ್ದಾರೆ. ಅವರ ಗಂಡ ರಾತ್ರಿ ಪಾಳಿಯ ಕೆಲಸ ಮಾಡುತ್ತಾರೆ. ಎಂಟು ವರ್ಷಗಳಿಂದ ಅವರು ಐರ್ಲೆಂಡ್‌ನಲ್ಲಿ ವಾಸಿಸುತ್ತಿದ್ದಾರೆ. ಇತ್ತೀಚೆಗೆ ಐರಿಶ್ ಪೌರತ್ವ ಪಡೆದಿದ್ದಾರೆ. ಅವರ ಮಕ್ಕಳು ಐರ್ಲೆಂಡ್‌ನಲ್ಲಿಯೇ ಜನಿಸಿದ್ದಾರೆ. ಕುಟುಂಬವು ಜನವರಿಯಲ್ಲಿ ಹೊಸ ಮನೆಗೆ ವೇಕೇಟ್ ಆಗಿದ್ದಾರೆ.**

- ಭಾರತೀಯ ಮೂಲದ ಬಾಲಕಿ ನಿಯಾ ನವೀನ್ ಮೇಲೆ ಹಲ್ಲೆ
- 12 ರಿಂದ 14 ವರ್ಷದ ಮಕ್ಕಳ ಗುಂಪು ಜನಾಂಗೀಯ ನಿಂದನೆ
- ಮಕ್ಕಳಿಗೆ ಶಿಕ್ಷೆ ನೀಡಲು ಬದಲು ಅವರಿಗೆ ಸಮಾಲೋಚನೆ ನೀಡಿ ಎಂದ ಬಾಲಕಿ ತಾಯಿ

ನಾನು ಅವಳ ಸ್ನೇಹಿತರನ್ನು ಏನಾಯಿತು ಎಂದು ಕೇಳಿದೆ. ಅವರೆಲ್ಲರೂ ತುಂಬಾ ದುಃಖಿತರಾಗಿದ್ದರು, ಅವರು ಮಾತನಾಡಲು ಸಾಧ್ಯವಾಗಲಿಲ್ಲ. ಅವರಲ್ಲಿ ಒಬ್ಬಳು, ಕೆಲವು ಹುಡುಗರು ಸೈಕಲ್‌ನಿಂದ ಅವಳ ಖಾಸಗಿ ಭಾಗಗಳಿಗೆ ಹೊಡೆದರು. ಐವರು ಆಕೆಯ ಮುಖಕ್ಕೆ ಹೊಡೆದರು ಎಂದು ಹೇಳಿದಳು. ಆ ಮೂಲಕ ಮಗಳು ಯಾಕಾಗಿ ಅಳುತ್ತಿದ್ದಾಳೆ ಎಂದು ತಿಳಿಯಿತು ಎಂದು ಹೇಳಿದರು.

**ನನ್ನನ್ನು ನೋಡಿ ನಕ್ಕರು:** ನಾನು ತಕ್ಷಣ ಹೊರಗೆ ಹೋದೆ. ಆ ಸಮಯದಲ್ಲಿ ಆ ಗುಂಪಿನಲ್ಲಿದ್ದ ಮಕ್ಕಳನ್ನು ನೋಡಿದರು. ನಾನು ಅವಳ ತಾಯಿ ಎಂದು ಅವರಿಗೆ ತಿಳಿದಿದೆ. ಹುಡುಗರಿಗೆ 12 ಅಥವಾ 14 ವರ್ಷ ವಯಸ್ಸಾಗಿರಬಹುದು. ಅವರು ನನ್ನನ್ನು ನೋಡುತ್ತಾ ನಗುತ್ತಿದ್ದರು ಎಂದು ಹೇಳಿದರು.

### ಬಾಲಕಿ ತಾಯಿ ಅಸಮಧಾನ

**ಘಟನೆ ನಡೆದು ಕೆಲ ಕಾಲದ ನಂತರ ಅವಳನ್ನು ಸಮಾಧಾನ ಪಡಿಸಿ ಮತ್ತೆ ನಾನು ಆಕೆಯನ್ನು ನಡೆದ ಘಟನೆ ಬಗ್ಗೆ ಕೇಳಿದೆ. ಅವಳು ಮತ್ತೆ ಅಳುತ್ತಾ ಐವರು ನನ್ನ ಮುಖಕ್ಕೆ ಹೊಡೆದರು. ಹುಡುಗರಲ್ಲಿ ಒಬ್ಬ ಸೈಕಲ್ ಚಕ್ರವನ್ನು ಖಾಸಗಿ ಭಾಗಕ್ಕೆ ತಳ್ಳಿದ್ದಾಗಿ, ಅದು ತುಂಬಾ ನೋವಾಯಿತು ಎಂದು ಹೇಳಿದಳು.**

ಈ ಘಟನೆಯ ಬಗ್ಗೆ ಗಾರ್ಡೈ (ಐರಿಶ್ ಪೊಲೀಸರು)ಗೆ ದೂರು ನೀಡಿದರೂ, ಮಕ್ಕಳಿಗೆ ಶಿಕ್ಷೆ ಕೊಡಿಸುದು ಮುಖ್ಯಲ್ಲ. ಬದಲಿಗೆ ಅವರಿಗೆ ಸಮಾಲೋಚನೆ ನೀಡಬೇಕು. ಈ ಪ್ರದೇಶವು ಅವರಿಗೂ ಸೇರಿದ್ದು ಹೌದು. ಆದರೆ, ಶಿಕ್ಷೆ ಕೊಡೋದು ಬೇಡ ಅವರಿಗೆ ಸಮಾಲೋಚನೆ ನೀಡಬೇಕು. ಜನಾಂಗೀಯದ ಬಗ್ಗೆ ಅರಿವು ಇರಬೇಕು ಎಂದು ಹೇಳಿದರು.

ಈಗ ನನ್ನ ಮಗಳು ಹೊರಗೆ ಆಟವಾಡಲು ಹಿಂಜರಿಯುತ್ತಿದ್ದಾಳೆ. ನಾನು ಅವಳನ್ನು ಸುರಕ್ಷಿತವಾಗಿ ನೋಡಿಕೊಂಡಿಲ್ಲದ್ದ ಬಗ್ಗೆ ನನಗೆ ಬೇಸರವಿದೆ. ನಾವು ಪೌರತ್ವ ಪಡೆದಿದ್ದರು, ನಮ್ಮನ್ನು ಕೊಳಕು ಜನ ಎನ್ನುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

